ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 69
29–8–2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 69

## ಸಂಪಾದಕೀಯ.....

## ಬೇವು ಬಿತ್ತಿ ಬೆಲ್ಲ ಬೆಳೆಯಲಾಗದ ಕೆಲಸಕ್ಕೆ ನಾಯಕರು ಮುಂದಾಗಬಾರದು



ಪತ್ರಿಕೆಯೊಂದರ ಸಂಪಾದಕೀಯ ಬರಹ ವಾಟ್ಸಪ್‌ಗಳಲ್ಲಿ ಶೇರ್ ಆಗುವುದರ ಜೊತೆ ಮೆಚ್ಚುಗೆಗೆ ಪಾತ್ರವಾಗುವುದು ಒಬ್ಬ ಪತ್ರಕರ್ತನಿಗೆ ಆನೆ ಬಲ ಬಂದಂತೆ. ಅದರಲ್ಲೂ ಸಾಮಾಜಿಕ ಹಿತ ಬಯಸುವ ಬರವಣಿಗೆಯನ್ನು ಒಬ್ಬ ಜಿಲ್ಲಾಧಿಕಾರಿಗಳು ಮೆಚ್ಚುವುದಲ್ಲದೆ ಅಧಿಕಾರಿಗಳು ಮತ್ತು ಪತ್ರಕರ್ತರ ವಾಟ್ಸಪ್ ಗ್ರೂಪಗಳಿಗೆ ಶೇರ್ ಮಾಡುವುದು, ಜಿಲ್ಲೆಯ ಹಿತದೃಷ್ಟಿಯಿಂದ ಉತ್ತಮ ಬೆಳವಣಿಗೆ.

ಗಣಪತಿ ಹಬ್ಬದಲ್ಲಿ ಕಿವಿ ತಮಟೆ ಹರಿಯುವಂತೆ ಕಿರುಚುವ ಡಿಜೆಗಳನ್ನು ಸರ್ಕಾರ ನಿಷೇಧ ಮಾಡಿದೆ. ದಾವಣಗೆರೆ ಜಿಲ್ಲಾಡಳಿತ ಸರ್ಕಾರದ ನಿರ್ಧಾರವನ್ನು ಕಟ್ಟುನಿಟ್ಟಾಗಿ ಜಾರಿ ತಂದಿರುವುದನ್ನು 'ಕನ್ನಡ ಭಾರತಿ' ಪತ್ರಿಕೆಯ ಆ.27ರ ಸಂಚಿಕೆಯಲ್ಲಿ ಸಂಪಾದಕೀಯ ಲೇಖನ ಬರೆಯಲಾಗಿತ್ತು.

ಇದನ್ನು ಓದಿದ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದಲ್ಲದೆ ಅಧಿಕಾರಿಗಳು ಮತ್ತು ಪತ್ರಕರ್ತರ ವಾಟ್ಸಪ್ ಗ್ರೂಪ್‌ಗೂ ಶೇರ್ ಮಾಡಿ ಉತ್ತಮ ವಿಚಾರವೊಂದಕ್ಕೆ ಬಲ ತುಂಬಿದ್ದಾರೆ. ಗಣಪತಿ ಹಬ್ಬದಲ್ಲಿ ಡಿಜೆ ಅಬ್ಬರದಲ್ಲಿ ಭಕ್ತಿ ಗೌಣವಾಗಿ ಕುಣಿದು ಕುಪ್ಪಳಿಸುವ ನೃತ್ಯ ಪರಂಪರೆ ಹೆಚ್ಚಾಗುತ್ತಿದೆ. ಮೆರವಣಿಗೆ ಸಂದರ್ಭದಲ್ಲಿ ಮದ್ಯ ಮಾರಾಟ ನಿಷೇಧ ಮಾಡಿದ್ದರೂ ಉತ್ಸವದಲ್ಲಿ ಕುಣಿಯುವ ಕೆಲವರು ಅಮಲಿನಲ್ಲಿ ತೇಲಾಡುತ್ತಿರುತ್ತಾರೆ.

ಇಂಥ ಅಡ್ಡದಾರಿ ಬೆಳವಣಿಗೆ ತಡೆಯುವುದು ಒಂದು ಸರ್ಕಾರ ಹಾಗೂ ಜಿಲ್ಲಾಡಳಿತದ ಕರ್ತವ್ಯವೂ ಹೌದು. ಎಷ್ಟೇ ಒತ್ತಡ ಬಂದರೂ ಸಾರ್ವಜನಿಕ ಹಿತದೃಷ್ಠಿಯ ನಿರ್ಧಾರದಿಂದ ಜಿಲ್ಲಾಡಳಿತ ಹಿಂದೆ ಸರಿಯಬಾರದು. ಕೆಲವು ಸಂಘ, ಸಂಸ್ಥೆಗಳು ಜಿಲ್ಲಾ ಉಸ್ತುವಾರಿ ಸಚಿವರ ಮೂಲಕವೂ ಒತ್ತಡ ತರುವ ಪ್ರಯತ್ನ ಮಾಡುತ್ತಿವೆ. ಹಿಂದೂ ಮಹಾಸಭಾ ಗಣಪತಿ ಮೆರವಣಿಗೆಗೆ ಬಹುತೇಕ ಸಮಯ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ಅವರೇ ಚಾಲನೆ ನೀಡಿದ್ದಾರೆ. ಈ ಸಂದರ್ಭದಲ್ಲಿಯೂ ಡಿಜೆ ಬಳಕೆ ಆಗದಂತೆ ಎಚ್ಚರ ವಹಿಸುವುದು ಜಿಲ್ಲಾಡಳಿತ ಜವಾಬ್ದಾರಿಯಾಗಿದೆ.

ಡಿಜೆ ಬಳಕೆ ಬಿಟ್ಟು ದೇಶಿ ಕಲೆಗಳಿಗೆ ಪ್ರೋತ್ಸಾಹ ನೀಡಬೇಕೆಂಬ ಒತ್ತಾಸೆಯನ್ನು ಜಿಲ್ಲಾಡಳಿತ ವ್ಯಕ್ತಪಡಿಸಿರುವುದು ಸ್ವಾಗತರ್ಹ. ಆಧುನಿಕ ಭರಾಟೆಯಲ್ಲಿ ದೇಶೀಯ ಕಲೆಗಳು ಮಸುಕಾಗುತ್ತಿವೆ. ಪ್ರೋತ್ಸಾಹ ಇಲ್ಲದೆ ಕಲಾವಿದರೂ ಕಲಾರಾಧನೆದಯಿಂದ ದೂರ ಸರಿಯ ತೊಡಗಿದ್ದಾರೆ.

ಬಿಜೆಪಿ ನಾಯಕರು ಮೊಂಡುತನ ಬಿಟ್ಟು ಯುವಕರ ಎದೆಯಲ್ಲಿ ಉತ್ತಮ ವಿಚಾರಗಳನ್ನು ಬಿತ್ತುವುದು ಒಳಿತು. ಬೇವು ಬಿತ್ತಿ ಬೆಲ್ಲ ಬೆಳೆಯುವ ಅಪಾಯದ ಕೆಲಸಕ್ಕೆ ಈ ನಾಯಕರು ಹೋಗಬಾರದು. ದೇಶೀಯ ಕಲೆಗೆ ಈ ಸಂದರ್ಭ ಒತ್ತು ನೀಡಿದರೆ ಅದು ನಿಮಗೆ ಚುನಾವಣೆಯಲ್ಲಿ ಪುಣ್ಯದ ರೂಪದಲ್ಲಿ ವಾಪಸು ಬರಬಹುದು.

ಜಿಲ್ಲಾಡಳಿತ ಒಂದೆರಡು ಕಡೆಯಾದರೂ ಗಣೇಶೋತ್ಸವದಲ್ಲಿ ದೇಶೀಯ ಕಲಾವಿದರನ್ನು ಬಳಸಿ ಪ್ರೋತ್ಸಾಹ ನೀಡಬೇಕಾಗಿದೆ. ಇದರಿಂದ ಗಣಪತಿ ಪ್ರತಿಷ್ಠಾಪನೆ ಮಾಡಿರುವ ಆಯೋಜಕರಲ್ಲಿಯೂ ಒಂದಿಷ್ಟು ಉತ್ತಮ ಅಭಿರುಚಿ ಬೆಳೆಯಲು ಅನುವಾಗುತ್ತದೆ. ಜೊತೆಗೆ ಬಡ ಕಲಾವಿದರಿಗೆ ಆರ್ಥಿಕ ನೆರವು ದೊರೆಯುವುದಲ್ಲದೆ ಯುವಜನರಲ್ಲಿ ದೇಶೀಯ ಕಲೆಗಳ ಬಗ್ಗೆ ಆಸಕ್ತಿ ಮೂಡಲು ಸಹಾಯಕವಾಗುತ್ತದೆ.

ದಾವಣಗೆರೆ ಯಾವತ್ತು ಕಲಾವಿದರಿಗೆ ಅನ್ನಹಾಕಿದ ಊರು. ಅನೇಕ ವೃತ್ತಿರಂಗಭೂಮಿ ಕಲಾವಿದರೂ ಇಂದಿಗೂ ದಾವಣಗೆರೆ ಅಂದಿನ ಅಭಿಮಾನಿಗಳನ್ನು ನೆನೆಯುವುದನ್ನು ಕಾಣಬಹುದು.

ಯಾವುದೇ ನಾಟಕ ಕಂಪನಿ ರಾಜ್ಯದ ಇತರೆ ಕಡೆ ನಷ್ಟ ಅನುಭವಿಸಿದರೆ ಕಲಾವಿದರೆಲ್ಲ ಒಟ್ಟಾಗಿ ದಾವಣಗೆರೆಗೆ ಕಂಪನಿ ಸ್ಥಳಾಂತರ ಮಾಡಲು ಒಮ್ಮತದ ನಿರ್ಧಾರ ಮಾಡುತ್ತಿದ್ದರು. ಇದನ್ನು ಗುಬ್ಬಿ ವೀರಣ್ಣ, ಡಾ. ರಾಜಕುಮಾರ್, ಸಧೀರ್ ಅವರಂತಹ ಹಿರಿಯ ಕಲಾವಿದರೂ ಹಲವು ಬಾರಿ ಸ್ಮರಿಸಿದ್ದಾರೆ.

ವೃತ್ತಿ ರಂಗಭೂಮಿ ಅನೇಕ ಕಲಾವಿದರೂ ಈಗ ಉತ್ತಮ ಅಭಿರುಚಿಯ ನಾಟಕಗಳನ್ನು ಅಭಿನಯಿಸುತ್ತಿದ್ದಾರೆ. ಇದರ ಜೊತೆ ವೀರಗಾಸೆ, ಡೊಳ್ಳುಕುಣಿತ, ಕಂಸಾಳೆಯಂತಹ ಜಿಲ್ಲೆಯಲ್ಲಿರುವ ಕಲಾವಿದರಿಗೆ ಅವಕಾಶ ಮಾಡಿದರೆ ಗಣಪತಿ ಹಬ್ಬ ಹೆಚ್ಚು ಅರ್ಥಪೂರ್ಣವಾಗುತ್ತದೆ. ಶಾಲಾ ಮಕ್ಕಳಿಗೂ ಅವಕಾಶ ಮಾಡಿದರೆ ಬೆಳವ ಪ್ರತಿಭಾವಂತರಿಗೆ ವೇದಿಕೆ ಕೊಟ್ಟಂತಾಗುತ್ತದೆ. ಕಿರುಚುವ ಡಿಜೆಗಳಿಗೆ ಕುಣಿದು ಕುಪ್ಪಳಿಸುವ ಪರಿಯಿಂದ ಧಾರ್ಮಿಕ ಭಾವನೆ ಮೂಡದು. ಅರ್ಥವಿಲ್ಲದ ಹಾಡಿಗೆ ಯುವಕರು ಯಾಂತ್ರಿಕವಾಗಿ ಕುಣಿದು ಭಾವಶೂನ್ಯರಾಗುವ ಅಪಾಯವಿರುತ್ತದೆ.

–ಮಲ್ಲಿಕಾರ್ಜುನ್ ಕಬ್ಬೂರು
ಪತ್ರಕರ್ತರು

# ಸುಂಕಾಸ್ತ್ರಕ್ಕೆ ಮೋದಿ ಕಾರ್ಯತಂತ್ರ

**ನವದೆಹಲಿ, ಆ. 28–** ಭಾರತದ ಉತ್ಪನ್ನಗಳಿಗೆ ಶೇ. 50 ರಷ್ಟು ತೆರಿಗೆ ವಿಧಿಸುವ ಅಮೆರಿಕಾದ ನಿರ್ಧಾರದಿಂದ ಆಗುವ ಪರಿಣಾಮಗಳನ್ನು ಎದುರಿಸಲು ಭಾರತ ಹಲವು ಸುಧಾರಣಾ ಕ್ರಮಗಳನ್ನು ಜಾರಿಗೊಳಿಸಲು ಮುಂದಾಗಿದ್ದು, ಜಿಎಸ್‌ಟಿ ಕಡಿತ, ಸ್ವದೇಶಿ ಮಂತ್ರ ಜಪ, ರೈತರು ಹಾಗೂ ಸಣ್ಣ ಕೈಗಾರಿಕೆಗಳ ಸಬಲೀಕರಣಗಳಿಗೆ ಒತ್ತು ನೀಡಿದೆ. ಜತೆಗೆ ಸ್ವಕೇಂದ್ರಿತ ಆರ್ಥಿಕ ನೀತಿಯ ಮಂತ್ರವನ್ನು ಜಪಿಸಿದೆ.

ಭಾರತದ ಮೇಲೆ ಶೇ. 50 ರಷ್ಟು ಸುಂಕಗಳನ್ನು ಅಮೆರಿಕಾದ ಟ್ರಂಪ್ ಆಡಳಿತ ಬುಧವಾರದಿಂದ ಜಾರಿ ಮಾಡಿದೆ. ಇದ–ರಿಂದ ಭಾರತದ ಆರ್ಥಿಕತೆ ಮೇಲೆ ಯಾವುದೇ ಪರಿಣಾಮಗಳು ಆಗದಂತೆ ಭಾರತ ತನ್ನದೇ ಆದ ಕಾರ್ಯತಂತ್ರಗಳನ್ನು ರೂಪಿಸಿ, ಆರ್ಥಿಕ ಬೆಳವಣಿಗೆಗಳನ್ನು ಹೆಚ್ಚಿಸಲು ಜಿಎಸ್‌ಟಿ ಪುನರಾಚನೆ ಸೇರಿದಂತೆ ಹಲವು ಸುಧಾರಣಾ ಕ್ರಮಗಳನ್ನು ಜಾರಿಗೊಳಿಸುತ್ತಿದೆ.



ಅಮೆರಿಕಾದ ಸುಂಕಾಸ್ತ್ರವನ್ನು ಎದುರಿಸಿ ಭಾರತದ ಆರ್ಥಿಕತೆಗೆ ಯಾವುದೇ ತೊಂದರೆಗಳಾಗದಂತೆ ನೋಡಿಕೊಳ್ಳುವ ಸಂಬಂಧ ಪ್ರಧಾನಿ ಮೋದಿ ಅವರು ತಮ್ಮ ಆರ್ಥಿಕ ಸಲಹಾ ಮಂಡಳಿಯ ಸಭೆ ನಡೆಸಿ, ಚರ್ಚೆ ನಡೆಸಿದ್ದು, ಟ್ರಂಪ್ ಅವರ ಸುಂಕದ ಬೆದರಿಕೆಗಳನ್ನು ಎದುರಿಸಲು ವ್ಯವಹಾರಗಳನ್ನು ಸುಗಮಗೊಳಿಸಿ ಹೂಡಿಕೆಗಳನ್ನು ಆಕರ್ಷಿಸಲು ಕೆಲವು ಸುಧಾರಣಾ ಕ್ರಮಗಳನ್ನು ಕೈಗೊಳ್ಳಲು ಮುಂದಾಗಿದೆ. ರಾಷ್ಟ್ರೀಯ ಹಿತಾಸಕ್ತಿಗಳನ್ನು ರಕ್ಷಿಸುವ ಮತ್ತು ರಷ್ಯಾದ ಕಚ್ಚಾತೈಲವನ್ನು ಖರೀದಿಸುವಲ್ಲಿ ತನ್ನ ಕಾರ್ಯತಂತ್ರದ ಸ್ವಾಯತತ್ತೆಯನ್ನು ಕಾಪಾಡುವ ಹಕ್ಕನ್ನು ಪ್ರತಿಪಾದಿಸುವ ಮೂಲಕ ಹೆಚ್ಚಿನ ಸುಂಕಗಳ ಪರಿಣಾಮಗಳನ್ನು ಎದುರಿಸಲು ಸರ್ವ ಸಿದ್ಧತೆಗಳನ್ನು ಮಾಡಿಕೊಂಡಿದೆ. ಭಾರತದಲ್ಲೇ ತಯಾರಾದ ಉತ್ಪನ್ನಗಳಿಗೆ ದೇಶದಲ್ಲಿ ಬೇಡಿಕೆ ಹೆಚ್ಚಿಸಿ ಆರ್ಥಿಕ ಬೆಳವಣಿಗೆಯನ್ನು ಸಾಧಿಸಲು ಭಾರತ ಹಲವು ಸುಧಾರಣಾ ಕ್ರಮಗಳನ್ನು ಮುಂದಿನ ದಿನಗಳಲ್ಲಿ ಜಾರಿ ಮಾಡಲಿದೆ. ಆರ್ಥಿಕ ವಿಶ್ವಾಸ ಮತ್ತು ಬೆಳವಣಿಗೆಯನ್ನು ಹೆಚ್ಚಿಸಲು ಕೇಂದ್ರ ಸರ್ಕಾರ ಜಿಎಸ್‌ಟಿ ಪುನಾರಚನೆ ಸೇರಿದಂತೆ ಹಲವು ನೀತಿ ಸುಧಾರಣಾ ಕ್ರಮಗಳನ್ನು ಜಾರಿಗೊಳಿಸುವ ಕಾರ್ಯಕ್ಕೆ ವೇಗ ನೀಡಿ–ದ್ದು, ಹೂಡಿಕೆಯನ್ನು ಆಕರ್ಷಿಸಲು ಸಂಕೀರ್ಣ ಸುಧಾರಣೆಗಳನ್ನು ಪರಿಹರಿಸಲು ಮುಂದಾಗಿದೆ.

**ಜಿಎಸ್‌ಟಿ ಪುನಾರಚನೆ:** ಆರ್ಥಿಕತೆಯನ್ನು ಬಲಗೊಳಿಸಲು ಜಿಎಸ್‌ಟಿ ಪುನಾರಚನೆಗೂ ತೀರ್ಮಾನ ಮಾಡಲಾಗಿದ್ದು, ಈಗ ಇರುವ ನಾಲ್ಕು ಹಂತಗಳ ಜಿಎಸ್‌ಟಿ ಸ್ಲ್ಯಾಬ್‌ಗಳನ್ನು ಬದಲಿಸಿ ಎರಡು ಹಂತಗಳ ಜಿಎಸ್‌ಟಿ ಸ್ಲ್ಯಾಬ್‌ಗಳನ್ನು ಜಾರಿ ಮಾಡುವ ಮೂಲಕ ಸ್ವದೇಶಿ ನಿರ್ಮಿತ ಉತ್ಪನ್ನಗಳ ಮಾರಾಟವನ್ನು ಹೆಚ್ಚಿಸಿ ಆರ್ಥಿಕತೆಯನ್ನು ಬಲಗೊಳಿಸುವ ಗುರಿಯನ್ನು ಹೊಂದಲಾಗಿದೆ.

## ಯಾದಗಿರಿ: ಹಾಸ್ಟೆಲ್ ಶೌಚಾಲಯದಲ್ಲಿ ಮಗುವಿಗೆ ಜನ್ಮ ನೀಡಿದ ಹೈಸ್ಕೂಲ್ ವಿದ್ಯಾರ್ಥಿನಿ..!

**ಯಾದಗಿರಿ:** ಜಿಲ್ಲೆಯ ಶಹಪುರ ಪಟ್ಟಣದ ವಸತಿ ನಿಲಯವೊಂದರ ವಿದ್ಯಾರ್ಥಿನಿಗೆ ಶೌಚಾಲಯದಲ್ಲಿಯೇ ಹೆರಿಗೆಯಾದ ಘಟನೆ ನಡೆದಿದೆ.

ಶಹಪುರದಲ್ಲಿರುವ ವಸತಿ ಶಾಲೆಯ 9ನೇ ತರಗತಿ ವಿದ್ಯಾರ್ಥಿನಿ ಬುಧವಾರ ಶೌಚಕ್ಕೆ ಹೋದಾಗ 2:30ಕ್ಕೆ ಗಂಡು ಮಗುವಿಗೆ ಜನ್ಮ ನೀಡಿದ್ದಾಳೆ. ಈ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಅಲ್ಲದೆ, ಇದು ಶಿಕ್ಷಣ ಇಲಾಖೆ ಸೇರಿದಂತೆ ನಾಗರಿಕ ಸಮಾಜ ತಲೆತಗ್ಗಿಸುವಂತೆ ಮಾಡಿದೆ. ಜೊತಗೆ ವಸತಿ ನಿಲಯದಲ್ಲಿರುವ ಇನ್ನಷ್ಟು ವಿದ್ಯಾರ್ಥಿನಿಯರ ಪಾಲಕರಲ್ಲಿ ಆತಂಕ ಹೆಚ್ಚಿಸಿದೆ.

**ತಾಯಿ–ಮಗು ಆರೋಗ್ಯವಾಗಿದೆ:** ವಿದ್ಯಾರ್ಥಿನಿಗೆ ಹೆರಿಗೆಯಾದ ಸುದ್ದಿ ತಿಳಿದು ತಕ್ಷಣವೇ ನಗರದ ಸರಕಾರಿ ಆಸ್ಪತ್ರೆಗೆ ದಾಖಲು ಮಾಡಲಾಗಿದೆ ಸದ್ಯ ತಾಯಿ ಮಗು ಅರಾಮಗಿ, ಆರೋಗ್ಯವಾಗಿದ್ದಾರೆ ಎಂದು ಸರಕಾರಿ ಆಸ್ಪತ್ರೆ ವೈದ್ಯರು ತಿಳಿಸಿದ್ದಾರೆ. ಘಟನೆ ಕುರಿತು ವಸತಿ ನಿಲಯದ ಮೇಲ್ವಿಚಾರಕಿ ಗೀತಾ ತನಗೆ ಯಾವುದು ಮಾಹಿತಿ ಇಲ್ಲವೆಂದು ಉತ್ತರ ನೀಡುತ್ತಿದ್ದಾರೆ

ಶಾಲೆಯ ಪ್ರಾಂಶುಪಾಲರಾದ ಬಸ್ಸಮ್ಮ ಪಾಟೀಲ್ ಮಾತನಾಡಿ, ನಮಗೆ ವಿದ್ಯಾರ್ಥಿನಿ ಗರ್ಭಿಣಿಯಾಗಿರುವ ಬಗ್ಗೆ ಮಾಹಿತಿ ಇಲ್ಲ. ಗರ್ಭಿಣಿಯಾಗಿದ್ದ ಲಕ್ಷಣವೂ ಕಂಡಿರಲಿಲ್ಲ. ಈ ಘಟನೆಯೂ ನಮಗೆ ಅಚ್ಚರಿಯನ್ನುಂಟು ಮಾಡಿದೆ. ಬಾಲಕಿಗೆ ಮದುವೆ ಆಗಿದೆಯೋ ಅಥವಾ ಇಲ್ಲವೋ ಎಂಬುದನ್ನು ಪೋಷಕರು ನಮಗೆ ತಿಳಿಸಿಲ್ಲ ಎಂದು ಅವರಯ ಮಾತನಾಡಿದ್ದಾರೆ.

ಮಕ್ಕಳ ಹಕ್ಕುಗಳ ಆಯೋಗದ ವತಿಯಿಂದ ಅಧಿಕಾರಿಗಳನ್ನು ಆಸ್ಪತ್ರೆಗೆ ಕಳುಹಿಸಿ ಸಮಗ್ರ ಮಾಹಿತಿಯನ್ನು ಕಲೆಹಾಕಿ ವರದಿ ನೀಡುವಂತೆ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸುಂಬೆ ವಿಜಯ ಕರ್ನಾಟಕಕ್ಕೆ ತಿಳಿಸಿದ್ದಾರೆ.

**ಗರ್ಭಿಣಿಯಾಗಲು ಕಾರಣ ಯಾರು? :** ವಸತಿ ನಿಲಯದ ವಿದ್ಯಾರ್ಥಿನಿ ಗರ್ಭ ಧರಿಸಲು ಕಾರಣ ಯಾರು ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ವಿದ್ಯಾರ್ಥಿನಿ ಈ ಕುರಿತು ಬಾಯಿ ಬಿಡುತ್ತಿಲ್ಲ ಎಂದು ವಸತಿ ನಿಲಯದ ಮೇಲ್ವಿಚಾರಕಿ ಮತ್ತು ಪ್ರಾಚಾರ್ಯ ಹೇಳುತ್ತಿದ್ದಾರೆ. ಸಂಬಂಧಿಕರು ಅಥವಾ ವಸತಿ ನಿಲಯದ ಶಿಕ್ಷಕರು ಅಥವಾ ನಿಲಯದ ಹೊರಗಡೆಯ ಯುವಕರು ಎಂಬುದು ಬಯಲಾಗಬೇಕಾಗಿದೆ. ಪೊಲೀಸರು ಹಾಗೂ ಸಂಬಂಧಿಸಿದ ಅಧಿಕಾರಿಗಳು ಈ ಕುರಿತು ತನಿಖೆ ನಡೆಸುತ್ತಿದ್ದಾರೆ. ಒಟ್ಟಾರೆಯಾಗಿ ಈ ಘಟನೆ ಶಿಕ್ಷಣ ಇಲಾಖೆಯ ಅವ್ಯವಸ್ಥೆಗೆ ಹಿಡಿದ ಕೈಗನ್ನಡಿಯಾಗಿದೆ. ಏನೊಂದು ಅರಿಯದ ಪಾಲಕರು ಮೌನಕ್ಕೆ ಶರಣಾಗಿದ್ದಾರೆ.

## ಸುದ್ದಿ ಮಾಧ್ಯಮದಲ್ಲಿ ಅಂಬೇಡ್ಕರ್ ದೃಷ್ಟಿಕೋನ ವಿಚಾರಸಂಕಿರಣ

**ಬೆಂಗಳೂರು:** ಕರ್ನಾಟಕ ಮಾಧ್ಯಮ ಅಕಾಡೆಮಿ ವತಿಯಿಂದ ಚಿತ್ರದುರ್ಗ ಪತ್ರಕರ್ತರ ಭವನದ ಡಾ. ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಎಸ್.ಸಿ. ಎಸ್.ಟಿ. ಪತ್ರಿಕಾ ಸಂಪಾದಕರ ಸಂಘ ಹಾಗೂ ಚಿತ್ರದುರ್ಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಲ್ಲಿ ಆಗಸ್ಟ್ 30 ರಂದು "ಸುದ್ದಿ ಮಾಧ್ಯಮದಲ್ಲಿ ಅಂಬೇಡ್ಕರ್ ದೃಷ್ಟಿಕೋನ" ಎಂಬ ವಿಷಯದ ಕುರಿತು ಒಂದು ದಿನದ ವಿಚಾರ ಸಂಕಿರಣ ಆಯೋಜಿಸಲಾಗಿದೆ.

ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಖಾತೆ ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಅವರು ವಿಚಾರ ಸಂಕಿರಣ ಉದ್ಘಾಟಿಸಲಿದ್ದಾರೆ. ಡಾ. ಬಿ.ಆರ್. ಅಂಬೇಡ್ಕರ್ ಅವರ ಕ್ರಾಂತಿಕಾರಿ ಚಿಂತನೆಗಳು, ಇಂದಿನ ದಿನದಲ್ಲಿಯೂ ಅವುಗಳ ಪ್ರಸ್ತುತತೆ, ಪತ್ರಕರ್ತರಾಗಿ ಅವರ ಕೊಡುಗೆ ಮತ್ತು ಎಲ್ಲರನ್ನು ಒಳಗೊಂಡ ಸಮಾಜ ನಿರ್ಮಾಣಕ್ಕೆ ಮುಂದಿನ ಹಾದಿ ಮುಂತಾದ ವಿಷಯಗಳ ಚರ್ಚೆಗೆ ಈ ವಿಚಾರ ಸಂಕಿರಣವು ವೇದಿಕೆಯಾಗಲಿದೆ ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಶಾ ಖಾನಂ ಅವರು ತಿಳಿಸಿದ್ದಾರೆ.

ಹಿರಿಯ ಪತ್ರಕರ್ತ ಡಿ. ಉಮಾಪತಿ ಅವರು ದಿಕ್ಸೂಚಿ ಭಾಷಣ ಮಾಡುವರು. ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್, ಸಂಸದ ಗೋವಿಂದ ಎಂ. ಕಾರಜೋಳ ಮತ್ತಿತರ ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಈ ವಿಚಾರ ಸಂಕಿರಣದಲ್ಲಿ "ಅಂಬೇಡ್ಕರ್ ಅವರ ಪತ್ರಿಕಾ ವೃತ್ತಿ" ವಿಷಯದ ಕುರಿತು ಪತ್ರಕರ್ತ ಎನ್. ರವಿಕುಮಾರ್, "ಪತ್ರಕರ್ತರಾಗಿ ಅಂಬೇಡ್ಕರ್ ಅವರ ಬರವಣಿಗೆಗಳು" ವಿಷಯದ ಕುರಿತು ವಿ.ಎಲ್. ನರಸಿಂಹಮೂರ್ತಿ, "ಅಂಬೇಡ್ಕರ್ ದೃಷ್ಟಿಯಲ್ಲಿ ಲಿಂಗಸಮಾನತೆ" ಕುರಿತು ಡಾ. ಭಾರತಿದೇವಿ ಹಾಗೂ ಪತ್ರಕರ್ತರಲ್ಲಿ ಸಾಮಾಜಿಕ ನ್ಯಾಯದ ಪ್ರಜ್ಞೆ ವಿಷಯದ ಕುರಿತು ರಿಷಿಕೇಶ್ ಬಹದ್ದೂರ್ ದೇಸಾಯಿ ವಿಷಯ ಮಂಡಿಸಲಿದ್ದಾರೆ. ಹಿರಿಯ ಪತ್ರಕರ್ತ ಸನತ್ ಕುಮಾರ್ ಬೆಳಗಲಿ ಅವರು ಸಮಾರೋಪ ಭಾಷಣ ಮಾಡಲಿದ್ದಾರೆ.

ಪತ್ರಕರ್ತರು ಹಾಗೂ ಆಸಕ್ತರು ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಈ ಮೂಲಕ ಸಂಘಟಕರು ಮನವಿ ಮಾಡಿದ್ದಾರೆ.

## ಹರಿಹರದಲ್ಲಿ 19 ಅಡಿ ಎತ್ತರದ ಮಲ್ಲಾರಿ ಗಣೇಶ ಮೂರ್ತಿ ಪ್ರತಿಷ್ಠಾಪನೆ

**ಹರಿಹರ:** ಹರಿಹರದ ಹಿಂದೂ ಜಾಗರಣ ವೇದಿಕೆ ಹಾಗೂ ಹಿಂದೂ ಮಹಾ ಗಣಪತಿ ಸಮಿತಿಯಿಂದ 6ನೇ ವರ್ಷದ ಗಣೇಶೋತ್ಸವ ಅಂಗವಾಗಿ ನಗರದ ಪೇಟೆ ಆಂಜನೇಯ ದೇವಸ್ಥಾನದ ಆವರಣದಲ್ಲಿ ಅರಮನೆ ಮಾದರಿಯ ಕಣ್ಮನ ಸಳೆಯುವ ಬೃಹತ್ ಮಂಟಪದಲ್ಲಿ ಗಣೇಶ್ ಮೂರ್ತಿ ಮತ್ತು ಪ್ರಭಾವಳಿ ಸೇರಿ 19 ಅಡಿ ಎತ್ತರದ ಮಲ್ಲಾರಿ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡಿ ಬುಧವಾರ ಗಣ್ಯರ ಸಮ್ಮುಖದಲ್ಲಿ ಪೂಜೆ ಸಲ್ಲಿಸಲಾಯಿತು.

ಜೋಯಿಸರಾದ ಗುರುದತ್ ಶಾಸ್ತ್ರಿ ಅವರು ಗಣೇಶ ಮೂರ್ತಿಗೆ ಪೂಜಾ ವಿಧಿ ವಿಧಾನಗಳನ್ನು ಸಲ್ಲಿಸುವ ಮೂಲಕ ಗಣೇಶ ಹಬ್ಬದ ಆಚರಣೆಗೆ ಚಾಲನೆ ನೀಡಿದರು.

ಸಮಿತಿಯಿಂದ ಗಣೇಶ ಮಂಟಪದಲ್ಲಿ 19 ದಿನಗಳ ಕಾಲ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಹಮ್ಮಿಕೋಳಲಾಗಿದೆ ಎಂದು ತಿಳಿಸಿದರು.



## ರಕ್ತದಾನ ಮಾಡುವುದರಿಂದ ಒಬ್ಬರ ಜೀವ ಉಳಿಸಬಹುದು: ಟಿ.ಗುರುಸಿದ್ದನಗೌಡ್ರು

**ಜಗಳೂರು:** ರಕ್ತದಾನ ಮಾಡುವುದರಿಂದ ಒಬ್ಬರ ಜೀವ ಉಳಿಸಬಹುದು .ನಮ್ಮ ಆರೋಗ್ಯವನ್ನು ಸಹ ಕಾಪಾಡಿಕೊಳ್ಳಬಹುದು ಎಂದು ಮಾಜಿ ಶಾಸಕ ಟಿ.ಗುರುಸಿದ್ದನಗೌಡ್ರು ಹೇಳಿದರು.

ಪಟ್ಟಣದ ಪ್ರಜಾಪಿತ ಬ್ರಹ್ಮಕುಮಾರಿಸ್ ಈಶ್ವರಿಯ ವಿಶ್ವವಿದ್ಯಾನಿಯದ ಜಗಳೂರು ಆವರಣದಲ್ಲಿ, ಗುರುವಾರ ಹಮ್ಮಿಕೊಂಡಿದ್ದ ಬ್ರಹ್ಮಾಕುಮಾರಿಸ್ ಜಗಳೂರು, ಪ್ರೀತಿ ಆರ್ಕೈಕೆ ಟ್ರಸ್ಟ್ ದಾವಣಗೆರೆ, ಆರ್ಕೈಕೆ ಹಾಸ್ಪಿಟಿಲ್ ದಾವಣಗೆರೆ ,ಜಗಳೂರು ಇವರ ಸಹಯೋಗದಲ್ಲಿ ರಾಜಯೋಗಿನಿ ದಾದಿ ಪ್ರಕಾಶಮಣಿಜೀ ಅವರ ಸ್ಮರಣಾರ್ಥ ವಿಶ್ವಬಂಧುತ್ವದಿನದ ಅಂಗವಾಗಿ ಹಮ್ಮಿಕೊಂಡಿದ್ದ ಬೃಹತ್ ರಕ್ತದಾನ ಶಿಭರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಆರೋಗ್ಯವಂತ ಪ್ರತಿಯೊಬ್ಬ ಮನುಷ್ಯರು ಪ್ರತಿ ಮೂರು ತಿಂಗಳಿಗೊಮ್ಮೆ ತಕ್ತದಾನ ಮಾಡಬಹುದು. ಇಲ್ಲವೇ ಕನಿಷ್ಠ ವರ್ಷಕ್ಕೆ 3 ಬಾರಿ ರಕ್ತದಾನ ಮಾಡುವುದರಿಂದ ನಮ್ಮ ಹೃದಯದ ಆರೋಗ್ಯವನ್ನು ಸುಧಾರಣೆ–ಯಾಗುತ್ತದೆ. ಅಲ್ಲದೇ ರಕ್ತದಾನ ಮಾಡುವುದರಿಂದ ನಾನು ಬೇರೆಯವರ ಜೀವ ಉಳಿಸಿದ ತೃಪ್ತಿ ನಮಗೆ ಸಿಗುತ್ತದೆ. ಜಗಳೂರಿನ ಪ್ರಜಾಪಿತ ಬ್ರಹ್ಮಕುಮಾರಿಸ್ ಈಶ್ವರಿಯ ವಿಶ್ವವಿದ್ಯಾನಿಯದ ಬ್ರಹ್ಮಾಕುಮಾರಿಸ್, ಪ್ರೀತಿ ಆರ್ಕೈಕೆ ಟ್ರಸ್ಟ್ ದಾವಣಗೆರೆ ಆರ್ಕೈಕೆ ಹಾಸ್ಪಿಟಿಲ್ ನವರು ರಕ್ತದಾನ ಶಿಭಿರ ಹಮ್ಮಿಕೊಂಡಿರುವುದು ಶ್ಲಾಘನೀಯ. ಆರೋಗ್ಯವಂತ ಯುವಕರರು ಇಂತಹ ಶಿಭಿರಗಳಲ್ಲಿ ಭಾಗವಹಿಸಿ ಹೆಚ್ಚು ಹೆಚ್ಚು ರಕ್ತದಾನ ಮಾಡಬೇಕೆಂದು ಕರೆ ನೀಡಿದರು.



ಪ್ರಜಾಪಿತ ಬ್ರಹ್ಮಕುಮಾರಿಸ್ ಈಶ್ವರಿಯ ವಿಶ್ವವಿದ್ಯಾನಿಯದ ಭಾರತಿ ಅಕ್ಕಾ ಮಾತನಾಡಿ ರಾಜಯೋಗಿನಿ ದಾದಿ ಪ್ರಕಾಶಮಣಿಜೀ ಅವರ ಸ್ಮರಣಾರ್ಥ ವಿಶ್ವಬಂಧುತ್ವ ದಿನದ ಅಂಗವಾಗಿ ಆರ್ಕೈಕೆ ಹಾಸ್ಪಿಟಿಲ್ ದಾವಣೆಗೆರೆ , ಜಗಳೂರು ಅವರ ಸಹಯೋಗದಲ್ಲಿ ರಕ್ತದಾನ ಶಿಬಿರವನ್ನು ಹಮ್ಮಿಕೊಂಡಿದ್ದೇವೆ. ರಕ್ತ ಸಂಗ್ರಹಣ ಮಾಡುವುದು ಅತಿ ಮುಖ್ಯ ಎಂದು ಪರಿಗಣಿಸಿ ರಕ್ತದಾನ ಶಿಭಿರವನ್ನು ಹಮ್ಮಿಕಂಡಿದ್ದೇವೆ. ರಕ್ತದಾನದ ಬಗ್ಗೆ ಜನರಲ್ಲಿ ಜಾಗ್ರುತಿಯನ್ನು ಸಹ ನಮ್ಮ ಪ್ರಜಾಪಿತ ಬ್ರಹ್ಮಕುಮಾರಿಸ್ನಿಂದ ಮಾಡುತ್ತ ಬಂದಿದ್ದೇವೆ ಎಂದರು.

## ರಾಷ್ಟ್ರೀಯ ಕ್ರೀಡಾ ದಿನಾಚರಣೆ

**ದಾವಣಗೆರೆ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆವತಿಯಿಂದ ಆಗಸ್ಟ್ 31 ರಂದು ಮೇಜರ್ ಧ್ಯಾನ್ ಚಂದ್ ರವರ ಹುಟ್ಟುಹಬ್ಬದ ಪ್ರಯುಕ್ತ ರಾಷ್ಟ್ರೀಯ ಕ್ರೀಡಾ ದಿನಾಚರಣೆಯನ್ನು ಆಯೋಜಿಸಲಾಗಿದೆ.

ಸಂಡೇ ಆನ್ ಸೈಕಲ್ (ಸೈಕೋಥನ್) ಕಾರ್ಯಕ್ರಮವು ಜಿಲ್ಲಾ ಕ್ರೀಡಾಂಗಣದಿಂದ ಆರಂಭವಾಗಲಿದೆ. ಆಸಕ್ತ ಕ್ರೀಡಾಪಟುಗಳು ತಮ್ಮ ಸೈಕಲ್‌ನೊಂದಿಗೆ ಅಂದು ಬೆಳಿಗ್ಗೆ 6 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಜರಾಗಬೇಕೆಂದು ಇಲಾಖೆಯ ಸಹಾಯಕ ನಿರ್ದೇಶಕ ಶ್ರೀಹರ್ಷ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ

**ದಾವಣಗೆರೆ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆವತಿಯಿಂದ ಪ್ರಸಕ್ತ ಸಾಲಿನ ದಾವಣಗೆರೆ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆಪ್ಟೆಂಬರ್ 1 ಮತ್ತು 2 ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ. ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದವರು ಹಾಗೂ ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದವರು ಮಾತ್ರ ಜಿಲ್ಲಾ ಮಟ್ಟದಲ್ಲಿ ಭಾಗವಹಿಸಬಹುದು.

ಭಾಗವಹಿಸುವ ಕ್ರೀಡಾಪಟುಗಳು ಆನ್‌ಲೈನ್ ಮುಖಾಂತರ http://dasaracmcup-2025.etrpindia.com/KA-sports ನಲ್ಲಿ ಸೆ.1 ರಂದು 9 ಗಂಟೆಯ ಒಳಗಾಗಿ ಅಗತ್ಯ ದಾಖಲೆಗಳೊಂದಿಗೆ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:08192–237480 ನ್ನು ಸಂಪರ್ಕಿಸಲು ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಜಿ ಆಹ್ವಾನ

**ದಾವಣಗೆರೆ:** ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯ ಪ್ರಯುಕ್ತ ಪರಿಶಿಷ್ಟಪಂಗಡದ ಜನಾಂಗದ ಏಳಿಗೆಗಾಗಿ ಶ್ರಮಿಸಿದ ವ್ಯಕ್ತಿಗಳಿಗೆ ಶ್ರೀ ಮಹರ್ಷಿ ವಾಲ್ಮೀಕಿರವರ ಸ್ಮರಣಾರ್ಥ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಸಾಮಾಜಿಕ, ಸಾಹಿತ್ಯ ಹಾಗೂ ಇನ್ನಿತರೆ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಅರ್ಹ ವ್ಯಕ್ತಿಗಳು ಅರ್ಜಿಯನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ:45, ಎರಡನೇ ಮಹಡಿ, ಜಿಲ್ಲಾಡಳಿತ ಭವನ, ದಾವಣಗೆರೆ. ಇಲ್ಲಿ ಪಡೆದು ಭರ್ತಿ ಮಾಡಿ ಸೆಪ್ಟೆಂಬರ್ 10 ರೊಳಗಾಗಿ ಸಲ್ಲಿಸಬೇಕು.

# ಭಾರತದ ಸಂಸ್ಕೃತಿ ಪ್ರಪಂಚಕ್ಕೆ ಮಾದರಿ : ಶಾಸಕ ತಮ್ಮಯ್ಯ

**ಚಿಕ್ಕಮಗಳೂರು:** ಸಂಸ್ಕೃತಿ, ಸಂಸ್ಕಾರ ಧರ್ಮ ಈ ರೀತಿ ಚಟುವಟಿಕೆಗಳನ್ನು ನಡೆಸುತ್ತಿರುವ ಭಾರತ ದೇಶ ಪ್ರಪಂಚದಲ್ಲೇ ಮೊದಲು ಮಾದರಿ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಅಭಿಪ್ರಾಯಿಸಿದರು.

ಅವರು ಬಸವನಹಳ್ಳಿಯ ರಂಗನಾಥಸ್ವಾಮಿ ದೇವಸ್ಥಾನದ ಆವರಣದಲ್ಲಿ ಸಿದ್ದಪಡಿಸಲಾಗಿದ್ದ ಆಜಾದ್ ವೃತ್ತದ ಸಾರ್ವಜನಿಕ ಗಣಪತಿಯನ್ನು ಬೋಳರಾಮೇಶ್ವರ ದೇವಸ್ಥಾನದಲ್ಲಿ ಪ್ರತಿಷ್ಠಾಪಿಸುವ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದರು.

ಸಾರ್ವಜನಿಕ ಗಣಪತಿ ಉತ್ಸವದಲ್ಲಿ ಮುಂದಿನ 21 ದಿನಗಳ ಕಾಲ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ತಾವು ಹಿರೇಮಗಳೂರಿನಲ್ಲಿ ನಡೆದ ಗಣಪತಿ



ಸೇವಾ ಸಮಿತಿಯಲ್ಲಿ ಸದಸ್ಯನಾಗಿ ಸೇವೆ ಸಲ್ಲಿಸಿರುವುದು ಸಾರ್ವಜನಿಕ ಬದು–ಕಿಗೆ ನಾಂದಿಯಾಗಿದೆ. ಈಗ ಶಾಸಕನಾಗಿದ್ದೇನೆ. ನಗರದ ವಿವಿಧ ಬಡಾವಣೆಗಳಲ್ಲಿ ಗಣಪತಿಗಳನ್ನು ಪ್ರತಿಷ್ಠಾಪಿಸಿ ಆಶೀರ್ವಾದ ಬೇಡುತ್ತಿದ್ದಾರೆ ಎಂದು ಹೇಳಿದರು.

ಹಲವು ಹೆಸರುಗಳ ಮೂಲಕ ಗಣಪತಿಯನ್ನು ಪೂಜಿಸುವ ಪದ್ದತಿ ಆರಂಭವಾಗಿದ್ದು, ಬಾಲಗಂಗಾಧರ ತಿಲಕರು ಸ್ವತಂತ್ರ ಹೋರಾಟದ ಸಂದರ್ಭದಲ್ಲಿ ಗಣೇಶೋತ್ಸವ ಆಚರಿಸುವ ಮೂಲಕ ಸರ್ವರನ್ನೂ ಒಗ್ಗೂಡಿಸಿ ಹೋರಾಟದಲ್ಲಿ ಯಶಸ್ವಿಯಾಗಿದ್ದರು ಎಂದು ಸ್ಮರಿಸಿದರು.

ನಗರದ ಪ್ರಮುಖ ಬೀದಿಗಳಲ್ಲಿ ವಿಜೃಂಭಣೆಯಿಂದ ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಮೆರವಣಿಗೆ ನಡೆಸಿ ಬಸವನಹಳ್ಳಿ ಕೆರೆಯಲ್ಲಿ ಗಣಪತಿಯನ್ನು ವಿಸರ್ಜಿಸಲಾಗುವುದು ಎಂದು ಹೇಳಿದರು. ನಗರದ ಎಲ್ಲಾ ನಾಗರೀಕರು ಬೋಳರಾಮೇಶ್ವರ ದೇವಸ್ಥಾನದ ಆವರಣದಲ್ಲಿ ಪ್ರತಿಷ್ಠಾಪಿಸಲಾಗಿರುವ ಗಣಪತಿ ದರ್ಶನ ಮಾಡಿ ಆಶೀರ್ವಾದ ಪಡೆದು ಪ್ರತಿದಿನ ಸಂಜೆ ನಡೆಯುವ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ವಿಘ್ನೇಶ್ವರನ ಕೃಪೆಗೆ ಪಾತ್ರರಾಗಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಗಣಪತಿ ಸೇವಾ ಸಮಿತಿಯ ಅಧ್ಯಕ್ಷ ಸಿ.ಎಸ್. ಕುಬೇರ, ಪ್ರಧಾನ ಕಾರ್ಯದರ್ಶಿ ಸಿ.ಆರ್ ಕೇಶವಮೂರ್ತಿ, ಈಶ್ವರಪ್ಪ ಕೋಟೆ, ವರಸಿದ್ಧಿ ವೇಣುಗೋಪಾಲ್, ಎಂ.ಎಸ್. ಉಮೇಶ್ ಕುಮಾರ್, ಸಚಿನ್ ಮತ್ತಿತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಗೆ ಸಾಂಸ್ಕೃತಿಕ ಚಟುವಟಿಕೆಗಳು ಪೂರಕ

**ಹರಪನಹಳ್ಳಿ:** ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಯಲ್ಲಿ ಸಾಂಸ್ಕೃತಿಕ ಚಟುವಟಿಕೆಗಳು ಬಹು ಮುಖ್ಯ ಪಾತ್ರ ವಹಿಸುತ್ತವೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಎಲ್. ಕುಬೇಂದ್ರನಾಯ್ಕ ಹೇಳಿದರು.

ಪಟ್ಟಣದ ಶ್ರೀ ಶರಣ ಬಸವ ಬುದ್ದ ಭೀಮ್‌ಜಿ ವಿದ್ಯಾಸಂಸ್ಥೆಯ ನಿಸರ್ಗ ಪದವಿ ಪೂರ್ವ ಕಾಲೇಜಿನಲ್ಲಿ ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ, ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ಸ್ವಾಗತ ಹಾಗೂ ದ್ವಿತೀಯ ಪಿಯುಸಿ ಯಲ್ಲಿ ಕಾಲೇಜಿಗೆ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ



ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಜಾಗತಿಕ ಮಟ್ಟದ ಸಾಂಸ್ಕೃತಿಕ ಚಟುವಟಿಕೆಗಳ ಬಗ್ಗೆ ಅರಿವು ಮೂಡಿಸಿ ಕೊಳ್ಳಬೇಕು. ದೇಶ, ವಿದೇಶದ ಸಾಂಸ್ಕೃತಿಕ ವೈವಿಧ್ಯತೆಗಳು ಒಂದು ಸಂಸ್ಕೃತಿಯ ಬೆಳವಣಿ ಗೆಗೆ ದಾರಿಯಾಗುತ್ತವೆ. ವಿದ್ಯಾರ್ಥಿಗಳು ಸಾಂ ಸ್ಕೃತಿಕ ಹಬ್ಬಗಳಲ್ಲಿ ಭಾಗವಹಿಸುವ ಮೂಲಕ ಸಾಮಾಜಿಕ ಸ್ವಾಸ್ಥ್ಯ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ತೊಡಗಿಸಿಕೊಳ್ಳಬೇಕು. ಸಂಸ್ಕೃತಿಯ ವಾಹಕರಾಗಿ ಕಾರ್ಯಪ್ರವೃತ್ತರಾಗುವಂತೆ ಸಲಹೆ ನೀಡಿದರು. ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಾದ ಗಾಯನ.ನೃತ್ಯ. ನಾಟಕ ಹಾಗೂ ಸೃಜನ ಸಾಹಿತ್ಯದ ಹಲವಾರು ಹವ್ಯಾಸಗಳಲ್ಲಿ ತೊಡಗಿಸಿಕೊಳ್ಳಿ ಎಂದು ಅವರು ಕರೆ ನೀಡಿದರು.

ಶ್ರೀ ಶರಣ ಬಸವ ಬುದ್ದ ಭೀಮ್‌ಜಿ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಗುಂಡಗತ್ತಿ ಕೊಟ್ರಪ್ಪ ಮಾತನಾಡಿ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಗೊಳ್ಳುತ್ತದೆ. ಶಿಸ್ತು, ಸಮಯ ನಿರ್ವಹಣೆ ಮತ್ತು ತಂಡದಲ್ಲಿ ಕೆಲಸ ಮಾಡುವ ಕೌಶಲ್ಯಗಳನ್ನು ಕಲಿಯುತ್ತಾರೆ.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ದೈಹಿಕ ರಚನೆಯನ್ನು ಕಾಯ್ದುಕೊಳ್ಳಲು ನೆರವಾಗುವ ಕೆಲವು ಕ್ರೀಡಾ ಚಟುವಟಿಕೆಗಳನ್ನು ನೀವು ಇಂದು ಆನಂದಿಸಬಹುದು. ಇತರರ ಮೇಲೆ ಪ್ರಭಾವ ಬೀರಲು ತುಂಬಾ ವೆಚ್ಚ ಮಾಡಬೇಡಿ. ನಿಮ್ಮ ಜ್ಞಾನ ಮತ್ತು ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು. ನಿಮ್ಮ ಶಾಶ್ವತವಾದ ಪ್ರೀತಿ ನಿಮ್ಮ ಪ್ರೀತಿಪಾತ್ರರಿಗೆ ಒಂದು ಸೆಲೆಯಾಗಿದೆ.ನೀವು ಕೆಲಸ ಮಾಡುವ ಬಗ್ಗೆ ಖಚಿತವಾಗಿಲ್ಲದಿದ್ದರೆ ಯಾವ ಭರವಸೆಯನ್ನೂ ನೀಡಬೇಡಿ.

### ವೃಷಭ ರಾಶಿ

ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ. ದೀರ್ಘಕಾಲದವರೆಗೆ ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿದ್ದವರು, ಅವರು ಇಂದು ಎಲ್ಲಿಂದಲಾದರೂ ಹಣವನ್ನು ಪಡೆಯಬಹುದು, ಇದು ಜೀವನದ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ. ಒಬ್ಬ ಸ್ನೇಹಿತ ತನ್ನ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸುವಲ್ಲಿ ನಿಮ್ಮ ಸಲಹೆ ಪಡೆದುಕೊಳ್ಳುತ್ತಾರೆ.

### ಮಿಥುನ ರಾಶಿ

ನಿಮ್ಮ ಆರೋಗ್ಯದ ಬಗ್ಗೆ ವಿಶೇಷವಾಗಿ ರಕ್ತದೊತ್ತಡ ರೋಗಿಗಳ ಬಗ್ಗೆ ಸ್ವಲ್ಪ ಜಾಗ್ರತೆಯಿಂದಿರಿ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು. ಸ್ನೇಹಿತರು ಮತ್ತು ಹತ್ತಿರದವರು ನಿಮಗೆ ತಮ್ಮ ಸಹಾಯ ಹಸ್ತ ಚಾಚುತ್ತಾರೆ. ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ದ್ವೇಷಿಸಿದರೂ ನೀವು ಪ್ರೀತಿ ತೋರಿಸಬೇಕು. ಸಹೋದ್ಯೋಗಿಗಳನ್ನು ನಿರ್ವಹಿಸುವಾಗ ಜಾಣತನದ ಅಗತ್ಯವಿದೆ. ಯಾವುದೇ ಹೊಸ ಕೆಲಸವನ್ನು ಪ್ರಾರಂಭಿಸುವ ಮೊದಲು ಅದರ ಬಗ್ಗೆ ಅನುಭವಿ ಜನರೊಂದಿಗೆ ಮಾತನಾಡಬೇಕು

### ಕರ್ಕ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ಒಂದು ಕುಟುಂಬದ ಒಟ್ಟಾಗುವಿಕೆಯಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ. ನೀವು ಹಾಗೂ ನಿಮ್ಮ ಪ್ರೀತಿಪಾತ್ರರು ಒಬ್ಬರೊನ್ನಬ್ಬರು ಚೆನ್ನಾಗಿ ಅರ್ಥಮಾಡಿಕೊಳ್ಳಲು ಸಮಯ ವ್ಯಯಿಸಬೇಕು.

### ಸಿಂಹ ರಾಶಿ

ನಿಮ್ಮ ಪೋಷಕರನ್ನು ನಿರ್ಲಕ್ಷಿಸುವುದು ನಿಮ್ಮ ಭವಿಷ್ಯವನ್ನು ಕೆಡಿಸಬಹುದು. ಉತ್ತಮ ಸಮಯಗಳು ತುಂಬಾ ಕಾಲ ಇರುವುದಿಲ್ಲ. ಮನುಷ್ಯನ ಕಾರ್ಯಗಳು ಶಬ್ದದ ಅಲೆಗಳಿದ್ದ ಹಾಗೆ. ಇವಗಳು ಒಂದು ಮಧುರವಾದ ಅಥವಾ ಒಂದು ಕರ್ಕಶವಾದ ಶಬ್ದವನ್ನು ಉತ್ಪಾದಿಸಲು ಮತ್ತೆ ಬರುತ್ತವೆ. ಅವುಗಳು ಬೀಜಗಳಿದ್ದ ಹಾಗೆ –ನಾವು ಬಿತ್ತಿದ್ದನ್ನು ಕೊಯ್ಯುತ್ತವೆ.

### ಕನ್ಯಾ ರಾಶಿ

ನಿಮ್ಮ ಆರೋಗ್ಯದ ಬಗ್ಗೆ ಚಿಂತಿಸುವುದು ನಿಮ್ಮ ಕಾಯಿಲೆಯನ್ನು ಇನ್ನಷ್ಟು ಉಲ್ಬಣಿಸಬಹುದಾದ್ದರಿಂದ ಹಾಗೆ ಮಾಡಬೇಡಿ. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ ಮತ್ತು ಇಂದು ತುಂಬಾ ಖರ್ಚು ಮಾಡಬೇಡಿ. ನಿಮ್ಮ ಕುಟುಂಬದ ಸದಸ್ಯರು ಕಡ್ಡಿಯನ್ನು ಗುಡ್ಡ ಮಾಡುವ ಸಾಧ್ಯತೆಯಿದೆ. ಸರೋವರದಲ್ಲಿನ ಸೊಗಸಾದ ಮೀನನ್ನು ಸಂಧಿಸುವ ಅವಕಾಶಗಳು ಸಾಧ್ಯತೆಗಳು ಇಂದು ಹೆಚ್ಚಿವೆ. ಹೊಸ ಉದ್ಯಮಗಳು ಆಕರ್ಷಕವಾಗಿರುತ್ತವೆ ಮತ್ತು ಒಳ್ಳೆಯ ಆದಾಯದ ಭರವಸೆ ಕಾಣಿಸುತ್ತದೆ.

### ತುಲಾ ರಾಶಿ

ನಿಮ್ಮ ಶೀಘ್ರ ಕ್ರಮ ನಿಮ್ಮನ್ನು ಪ್ರೇರೇಪಿಸುತ್ತದೆ. ಯಶಸ್ಸು ಸಾಧಿಸಲು–ಸಮಯದ ಜೊತೆ ನಿಮ್ಮ ಆಲೆಲೋಚನೆಗಳನ್ನು ಬದಲಾಯಿಸಿಕೊಳ್ಳಿ–ಇದು ನಿಮ್ಮ ದೃಷ್ಟಿಯನ್ನು ವಿಸ್ತಾರಗೊಳಿಸುತ್ತದೆ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುತ್ತದೆ– ನಿಮ್ಮ ವ್ಯಕ್ತಿತ್ವವನ್ನು ಸುಧಾರಿಸುತ್ತದೆ ಮತ್ತು ನಿಮ್ಮ ಮನಸ್ಸನ್ನು ಪಕ್ವಗೊಳಿಸುತ್ತದೆ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ.

### ವೃಶ್ಚಿಕ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ಗುಂಪಿನಲ್ಲಿದ್ದಾಗ ನೀವೇನು ಹೇಳುತ್ತೀರೆಂದು ಎಚ್ಚರ ವಹಿಸಿ–ನಿಮ್ಮ ಹಠಾತ್ ಟೀಕೆಗಳಿಗೆ ನೀವು ತೀವ್ರವಾಗಿ ಟೀಕೆ ಎದುರಿಸಬೇಕಾಗಬಹುದು. ನಿಮ್ಮ ಸಂಗಾತಿಯ ಕೆಟ್ಟ ಆರೋಗ್ಯದಿಂದಾಗಿ ಇಂದು ಪ್ರಣಯಕ್ಕೆ ಧಕ್ಕೆಯಾಗುತ್ತದೆ.

### ಧನು ರಾಶಿ

ನಿಮ್ಮ ಹೆಂಡತಿಯ ಜೊತೆ ಕುಟುಂಬದ ಸಮಸ್ಯೆಗಳನ್ನು ಹಂಚಿಕೊಳ್ಳಿ. ನಮ್ಮನ್ನು ನೀವೇ ಒಂದು ಪ್ರೀತಿಯ ಪೋಷಿಸುವ ಜೋಡಿಯೆನ್ನುವುದನ್ನು ಪುನಃ ಕಂಡುಹಿಡಿಯಲು ಸ್ವಲ್ಪ ಸಮಯ ಖರ್ಚು ಮಾಡಿ. ನಿಮ್ಮ ಮಕ್ಕಳೂ ಕೂಡ ಮನೆಯಲ್ಲಿನ ಶಾಂತಿ ಸಾಮರಸ್ಯದ ವಾತಾವರಣವನ್ನು ಆವಾಹಿಸಿಕೊಳ್ಳುತ್ತಾರೆ. ಇದು ಪರಸ್ಪರ ಸಂಪರ್ಕದಲ್ಲಿ ನಿಮ್ಮ ಮಾತುಕತೆಗೆ ನಿಮಗೆ ಹೆಚ್ಚಿನ ಸ್ವಾಭಾವಿಕತೆ ಮತ್ತು ಸ್ವಾತಂತ್ರ್ಯನೀಡುತ್ತದೆ.

### ಮಕರ ರಾಶಿ

ಒಂದು ಲಾಭಕರ ದಿನ ಮತ್ತು ನೀವು ಧೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ಇಂದು ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ, ಆದರೆ ಇದರೊಂದಿಗೆ ನೀವು ದಾನವನ್ನು ಸಹ ಮಾಡಬೇಕು ಏಕೆಂದರೆ ಇದರಿಂದ ನಿಮಗೆ ಮಾನಸಿಕ ಶಾಂತಿ ಸಿಗುತ್ತದೆ. ನೀವು ಪಾರ್ಟಿ ನೀಡಲು ಯೋಜಿಸುತ್ತಿದ್ದಲ್ಲಿ ನಿಮ್ಮ ಎಲ್ಲಾ ಒಳ್ಳೆಯ ಸ್ನೇಹಿತರನ್ನು ಆಮಂತ್ರಿಸಿ ನಿಮ್ಮನ್ನು ಅಸ್ತುಷ್ಟಗೊಳಿಸುವ ಬಹಳಷ್ಟು ಜನರಿರುತ್ತಾರೆ.

### ಕುಂಭ ರಾಶಿ

ನಿಮ್ಮ ನಿರಂತರ ಸಕಾರಾತ್ಮಕ ಚಿಂತನೆಯನ್ನು ಪ್ರಶಂಸಿಸಲಾಗುತ್ತದೆ. ನಿಮ್ಮ ಪ್ರಯತ್ನದಲ್ಲಿ ನೀವು ಯಶಸ್ವಿಯಾಗಬಹುದು. ಎಲ್ಲಾ ಬದ್ಧತೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು. ಇತರರಿಗೆ ಪ್ರತಿಫಲಗಳು ತರುವ ನಿಮ್ಮ ಸಾಮರ್ಥ್ಯ ಪ್ರತಿಫಲ ತರುತ್ತದೆ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ.

### ಮೀನ ರಾಶಿ

ಸ್ವತಃ ಔಷಧಿ ತೆಗೆದುಕೊಳ್ಳುವುದು ಔಷಧ ಅವಲಂಬನೆಯನ್ನು ಉಂಟುಮಾಡಬಹುದು. ಯಾವುದೇ ಔಷಧ ತೆಗೆದುಕೊಳ್ಳುವ ಮೊದಲು ವೈದ್ಯರ ಸಲಹೆ ಪಡೆಯಿರಿ. ಇಲ್ಲದಿದ್ದಲ್ಲಿ ಔಷಧ ಅವಲಂಬನೆಯ ಸಾಧ್ಯತೆ ಅಧಿಕವಾಗಿದೆ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ.

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ

## ಅತೀ ಮಳೆಯಿಂದ ಹಾನಿಗೊಳಗಾಗುವ ಪ್ರದೇಶಗಳಲ್ಲಿ ಮುಂಜಾಗ್ರತಾ ಕ್ರಮ ಕೈಗೊಳ್ಳಿ



**ಗದಗ:** ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಿಂದ ಸಾಕಷ್ಟು ಮಳೆಯಾಗುತ್ತಿದ್ದು ಮಳೆಯಿಂದ ಹಾನಿಗೊಳಗಾಗುವ ಪ್ರದೇಶಗಳ ಸಾರ್ವಜನಿಕರ ಸುರಕ್ಷತೆಗೆ ಪ್ರಥಮಾದ್ಯತೆ ನೀಡಿ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಮುಂಗಾರು ಹಂಗಾಮು ಪರಿಸ್ಥಿತಿ ಕುರಿತು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರವಾಹ ಪರಿಸ್ಥಿತಿಯನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸಲು ಎಲ್ಲ ಅಧಿಕಾರಿಗಳು ಸನ್ನದ್ಧರಾಗಬೇಕು. ಅತೀವೃಷ್ಟಿಯಿಂದ ಉಂಟಾಗುವ ಸಾರ್ವಜನಿಕರ ಆಸ್ತಿ ಪಾಸ್ತಿ ಹಾನಿ ತಪ್ಪಿಸಲು ಅಗತ್ಯದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಅಧಿಕ ಪ್ರಮಾಣದ ಮಳೆ ಸುರಿದಲ್ಲಿ ತಕ್ಷಣ ಅಧಿಕಾರಿಗಳು ಗುರುತಿಸಲಾದ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿ ನಿಯಂತ್ರಣ ಕುರಿತಂತೆ ಕ್ರಮ ವಹಿಸಬೇಕು. ಪ್ರವಾಹ ಸಂಭವಿಸುವ 43 ಗ್ರಾಮಗಳನ್ನು ಗುರುತಿಸಲಾಗಿದ್ದು ಮುಂಜಾಗ್ರತೆಯಾಗಿ ಆ ಭಾಗದ ಅಧಿಕಾರಿಗಳು ಜೀವ ಹಾನಿ ತಡೆಗೆ ನಿರಂತರ ನಿಗಾ ವಹಿಸಬೇಕು ಎಂದು ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಅವರು ಮಾತನಾಡಿ ಪ್ರವಾಹ ಪರಿಸ್ಥಿತಿ ಸಮರ್ಥವಾಗಿ ನಿಭಾಯಿಸಲು ಎಲ್ಲ ಅಧಿಕಾರಿಗಳು ಸನ್ನದ್ಧರಾಗಬೇಕು. ತಾಲೂಕು ಮಟ್ಟದಲ್ಲಿಯೂ ಟಾಸ್ಕ್ ಫೋರ್ಸ್ ಸಮಿತಿ ಸಭೆ ನಿಯಮಿತವಾಗಿ ಜರುಗಿಸಿ ವರದಿಯನ್ನು ಜಿಲ್ಲಾಡಳಿತಕ್ಕೆ ಸಲ್ಲಿಸಬೇಕು ಎಂದರು.

ಉಪವಿಭಾಗಾಧಿಕಾರಿ ಗಂಗಪ್ಪ ಎಂ ಮಾತನಾಡಿ ಪ್ರವಾಹ ಪರಿಸ್ಥಿತಿ ನಿರ್ವಹಣೆಗೆ ಈಗಾಗಲೇ ಪೂರ್ವ ಸಿದ್ಧತೆ ಮಾಡಿಕೊಳ್ಳಲಾಗಿದೆ. ಪ್ರಸ್ತುತ ಸುರಿದ ಮಳೆಯಿಂದ ಯಾವುದೇ ಮಾನವ ಜೀವ ಹಾನಿ ಹಾಗೂ ಜಾನುವಾರು ಹಾನಿಯಾಗಿರುವುದಿಲ್ಲ ಎಂದು ತಿಳಿಸಿದರು.

ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್. ಮಾತನಾಡಿ ಜಿಲ್ಲೆಯಲ್ಲಿ 1–1–2025 ರಿಂದ 25–8–2025 ರವರೆಗೆ 326 ಮಿ.ಮೀ ವಾಡಿಕೆ ಮಳೆ ಇದ್ದು 477 ಮಿ.ಮೀ ಮಳೆ ಆಗಿರುತ್ತದೆ.

ಜಿಲ್ಲೆಯಲ್ಲಿ 46 % ಹೆಚ್ಚುವರಿ ಮಳೆಯಾಗಿದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಅತೀವೃಷ್ಟಿಯಿಂದ ಮನೆ, ಶಾಲೆ, ಬೆಳೆ ಹಾಗೂ ಮೂಲಭೂತ ಸೌಕರ್ಯಗಳ ಹಾನಿಗಳ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರು, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟಿಮನಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್.ನೀಲಗುಂದ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್.ಬುರುಡಿ, ತಹಶೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಹುಕ್ಕುಂದ ಗ್ರಾಮದಲ್ಲಿ 17 ಲಕ್ಷ ರೂ ವೆಚ್ಚದ ನೂತನ ಕಟ್ಟಡ ಉದ್ಘಾಟನೆ : ಭೋಜೇಗೌಡ

**ಚಿಕ್ಕಮಗಳೂರು:** ಸಂಬಂಧಗಳು ಉಳಿದು ಬೆಳೆಯಬೇಕೆಂಬ ದೃಷ್ಟಿಯಿಂದ ಹೆಣ್ಣುಮಕ್ಕಳಿಗೆ ಬಾಗಿನ ಕೊಡುವ ಸಂಪ್ರದಾಯವನ್ನು ಹಿರಿಯರು ಹಾಕಿಕೊಟ್ಟ ಮಾರ್ಗದರ್ಶನದಿಂದ ಕುಟುಂಬದಲ್ಲಿ ಸಾಮರಸ್ಯ, ಪ್ರೀತಿ, ವಿಶ್ವಾಸ ಉಳಿದಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ಎಲ್ ಭೋಜೇಗೌಡ ಅಭಿಪ್ರಾಯಿಸಿದರು.

ಈ ಮಧ್ಯೆ ಹಿರಿಯರು ಆರೋಗ್ಯಕರ ಸ್ವಾಸ್ಥ್ಯ ಸಮಾಜ ನಿರ್ಮಾಣ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದಾರೆಂದು ಹೇಳಿದರು.

ಆಸೆ ಎಂಬ ಹುಚ್ಚು ಕುದುರೆಗೆ ದಾಸರಾದರೆ ಕುಟುಂಬದಲ್ಲಿ ಅಶಾಂತಿ ಮೂಡುತ್ತದೆ ಎಂದು ಹೇಳಿದರು.ಶಾಸಕ ಹೆಚ್.ಡಿ ತಮ್ಮಯ್ಯ ಮಾತನಾಡಿ, ಸಂಸ್ಕಾರದಲ್ಲಿ ಸಂಸ್ಕೃತಿ, ಧಾರ್ಮಿಕತೆಯ



ಅವರು ಇಂದು ಇಂದಾವರ ಗ್ರಾ.ಪಂ ವ್ಯಾಪ್ತಿಯ ಹುಕ್ಕುಂದ ಗ್ರಾಮದಲ್ಲಿ ಎನ್‌ಆರ್‌ಇಜಿಎ ಯೋಜನೆಯಡಿಯಲ್ಲಿ 17 ಲಕ್ಷ ರೂ ವೆಚ್ಚದಲ್ಲಿ ನಿರ್ಮಾಣವಾಗಿರುವ ನೂತನ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕುಟುಂಬದಲ್ಲಿ ಹೆಣ್ಣು ಆರ್ಥಿಕ ಸದೃಢರಾದರೆ ಆ ಮನೆ ಉತ್ತಮವಾಗಿ ನಡೆಯುತ್ತದೆ. ಜೊತೆಗೆ ಲೋಕ ಕಲ್ಯಾಣ ಕಾರ್ಯಗಳು ಹೆಣ್ಣುಮಕ್ಕಳಿಂದ ಸಾಧ್ಯ ಎಂದ ಅವರು, ಹೊರಗೆ ದುಡಿಯಲು ಹೋದ ಪುರುಷ ಮನೆಗೆ ಊಟ ತಿಂಡಿಗೆ ಮರಳುವಂತೆ ನಡೆಯನ್ನು ಹೆಣ್ಣುಮಕ್ಕಳು ರೂಢಿಸಿಕೊಳ್ಳುವ ಅಗತ್ಯ ಇದೆ ಎಂದು ಕಿವಿಮಾತು ಹೇಳಿದರು.

ಇಂದು ಹಣ, ಆಸ್ತಿ, ಅಂತಸ್ತಿನಿಂದಾಗಿ ಸಂಬಂಧಗಳು ಉಳಿಯುತ್ತಿಲ್ಲ. ದಾಯಾದಿ ಕಲಹಗಳಾಗಿ ಮಾರ್ಪಟ್ಟು ನೆಮ್ಮದಿ ಇಲ್ಲದಂತಾಗಿದೆ. ನಂಬಿಕೆಯಲ್ಲಿ ಪ್ರಪಂಚದಲ್ಲೇ ಭಾರತ ಮುಂಚೂಣಿಯಲ್ಲಿದೆ. ವಿವಿಧತೆಯಲ್ಲಿ ಏಕತೆ–ಐಕ್ಯತೆ ಬಹಳ ಮುಖ್ಯವಾಗಿದ್ದು, ನಾಗರಿಕರು ಸಹೋದರತೆಯಿಂದ ಗಲಾಟೆ ಗದ್ದಲಗಳಿಗೆ ಆಸ್ಪದ ಕೊಡದೆ ಬದುಕಬೇಕೆಂದು ಕರೆನೀಡಿದರು.ಇದೇ ಸಂದರ್ಭದಲ್ಲಿ ಹುಕ್ಕುಂದ ಗ್ರಾಮದ ಮಲ್ಲೇಶ್ವರ ಸ್ವಾಮಿ ದೇವಸ್ಥಾನಕ್ಕೆ 10 ಲಕ್ಷ ರೂ ಅನುದಾನ ಬಿಡುಗಡೆ ಮಾಡುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಇಂದಾವರ ಗ್ರಾ.ಪಂ ಅಧ್ಯಕ್ಷ ಸುಭಾಷ್, ಇಓ ವಿಜಯ್‌ಕುಮಾರ್, ಮಂಜೇಗೌಡ, ಜಯರಾಂ, ಜ್ಯೋತಿ, ಕೆಂಚಯ್ಯ, ಐ.ಡಿ. ಚಂದ್ರಶೇಖರ್, ದ್ರಾಕ್ಷಾಯಣಿ, ನೇತ್ರಾವತಿ, ಆಶಾ, ಸುರೇಶ್, ಸಂಪತ್ ರಾಜ್, ರೇವಣ್ಣ ಮತ್ತಿತರರು ಉಪಸ್ಥಿತರಿದ್ದರು. ಮೊದಲಿಗೆ ಸುರಯ್ಯಬಾನು ಸ್ವಾಗತಿಸಿದರು.

## ಸ್ತ್ರೀಶಕ್ತಿ ಮಹಿಳೆಯರಿಗೆ ಕಿರುಸಾಲ ಯೋಜನೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆಗಳ ಪರಿಶಿಷ್ಟ ಪಂಗಡದ ಸ್ತ್ರೀಶಕ್ತಿ ಮಹಿಳೆಯರನ್ನು ಗುಂಪು ಚಟುವಟಿಕೆಗಳ ಮೂಲಕ ಆರ್ಥಿಕವಾಗಿ ಸಬಲರನ್ನಾಗಿಸಲು ಕಿರುಸಾಲ ಯೋಜನೆಯಡಿ ರೂ. 20.00 ಲಕ್ಷಗಳ ಬಡ್ಡಿರಹಿತ ಸಾಲ ನೀಡಲು ಉದ್ದೇಶಿಸಿದ್ದು, ಅರ್ಹ ಗುಂಪುಗಳಿಂದ ಅರ್ಜಿ ಆಹ್ವಾನಿಸಿದೆ.

ಆಸಕ್ತ ಗುಂಪುಗಳು ನಿಗದಿತ ಅರ್ಜಿ ನಮೂನೆಯನ್ನು ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿವಮೊಗ್ಗ ಇಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಆ. 30ರೊಳಗಾಗಿ ಸಲ್ಲಿಸುವಂತೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

### ಕಡರನಾಯ್ಕನಹಳ್ಳಿ: ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುವ ಚಿತ್ರ, ವಿಡಿಯೊ


## ಚಿರತೆ ವದಂತಿ: ಗ್ರಾಮಗಳಲ್ಲಿ ನೀಗದ ಭೀತಿ

**ಕಡರನಾಯ್ಕನಹಳ್ಳಿ:** ಸಮೀಪದ ನಂದಿಗಾವಿ ಬಳಿ ಚಿರತೆ ಮರಿಗಳು: ಸಿಕ್ಕಿವೆ ಎಂಬ ವದಂತಿ ಕಾಡಿಚ್ಚಿನಂತೆ ಎಲ್ಲೆಡೆ ಹರಡಿದೆ. ಚಿರತೆ ಇದೆ ಎಂಬುದಾಗಿ ದಿನಕ್ಕೊಂದು ಕಡೆಯಿಂದ ಸುದ್ದಿಗಳು ಹರಡುತ್ತಿವೆ. ಕೃಷಿ ಚಟುವಟಿಕೆಯಲ್ಲಿ ತೊಡಗಿರುವ ರೈತರು ಆತಂಕದಲ್ಲೇ ದಿನ ದೂಡುವಂತಾಗಿದೆ.

ಹೊಳೆಸಿರಿಗೆರೆ ಯಲವಟ್ಟಿ ರಸ್ತೆಯ ಅಡಿಕೆ ತೋಟದಲ್ಲಿ ಇತ್ತೀಚಿಗೆ 20 ಕುರಿಗಳನ್ನು ಚಿರತೆಗಳು ಬಲಿ ತಗೆದುಕೊಂಡ ಬಳಿಕ ನಂದಿಗಾವಿ ಸೇರಿದಂತೆ ನಾಲ್ಕು ಕಡೆ ಚಿರತೆ ಸೆರೆಗೆ ಬೋನು ಅಳವಡಿ ಸಲಾಗಿದೆ. ಈ ಮಧ್ಯೆ, ಚಿರತೆಯದ್ದು ಎನ್ನಲಾದ ಎರಡು ಮರಿಗಳು

ಈವರೆಗೆ ಚಿರತೆಯ ಹೆಜ್ಜೆ ಗುರುತು ಕಂಡುಬಂದಿಲ್ಲ.

ಮಳೆ ಬರುತ್ತಿರುವುದರಿಂದ ಹೊಲಗದ್ದೆಗಳಲ್ಲಿ ಕೆಸರು ಇದ್ದು, ನರಿ, ನಾಯಿಗಳ ಹೆಜ್ಜೆಗಳು ಜನರಲ್ಲಿ ಗೊಂದಲ



ಮೂಡಿಸುತ್ತಿವೆ. ಅರಣ್ಯ ಇಲಾಖೆ ತೀವ್ರ ನಿಗಾ ವಹಿಸಿದೆ

ನಂದಿಗಾವಿ ಬಳಿ ದೊರೆತಿವೆ ಎಂದು ಗ್ರಾಮಸ್ಥರು ಹೇಳಿರುವ ವಿಡಿಯೊ, ಫೋಟೊಗಳು ಸಾಮಾಜಿಕ ಜಾಲ ತಾಣಗಳಲ್ಲಿ ಹರಿದಾಡುತ್ತಿವೆ. ಈ ಸುದ್ದಿ ಸುತ್ತಮುತ್ತಲಿನ

ಗ್ರಾಮಗಳಲ್ಲಿ ಆತಂಕ ಸೃಷ್ಟಿಸಿದೆ. 'ಚಿರತೆಯು ಭಾನುವಳ್ಳಿ ಬಳಿ ಇದೆ, ಕಮಲಾಪುರ ರಸ್ತೆಯಲ್ಲಿ ಕಾಣಿಸಿದೆ'

ಸಿಕ್ಕಿರುವುದು ಚಿರತೆಯ ಮರಿಗಳಲ್ಲ. ಅವು ಕಾಡು ಬೆಕ್ಕಿನ ಮರಿಗಳು.

ಮರಿಗಳನ್ನು ಅಲ್ಲಿಯೇ ಬಿಟ್ಟರೆ ತಾಯಿ ಬೆಕ್ಕು ತೆಗೆದುಕೊಂಡು ಹೋಗುತ್ತದೆ. ನಮ್ಮಿಂದ ಅವುಗಳ ಪ್ರಾಣಕ್ಕೆ ತೊಂದರೆ ಆಗಬಾರದು ಡಾ ಬಾಬಾಬುಡನ್, ಪಶು ವೈದ್ಯಾಧಿಕಾರಿ, ಹೊಳೆ ಸಿರಿಗೆರೆಪರಿಶೀಲಿಸುತ್ತಿದ್ದಾರೆ.

ಕಡರನಾಯ್ಕನಹಳ್ಳಿ ಸಮೀಪದ ನಂದಿಗಾವಿ ಬಳಿ ಸಿಕ್ಕಿರುವ ಕಾಡು ಬೆಕ್ಕಿನ ಮರಿ ಎಂಬ ಕರೆಗಳು ಅರಣ್ಯ ಇಲಾಖೆಯನ್ನು ತಲುಪುತ್ತಿವೆ.

ಡಿಆರ್‌ಎಫ್‌ಒ ಹಸನ್ ಭಾಷಾ ಮತ್ತು ಸಿಬ್ಬಂದಿ ಈ ಕುರಿತು

ಕಡರನಾಯ್ಕನಹಳ್ಳಿ ಹೊಸಪಾಳ್ಯ ರಸ್ತೆಯಲ್ಲಿ ಚಿರತೆ ನೋಡಿದ್ದಾಗಿ ರೈತರೊಬ್ಬರು ಹೇಳಿದ್ದರಿಂದ ಗ್ರಾಮ ಪಂಚಾಯಿತಿ ವತಿಯಿಂದ ಧ್ವನಿ ವರ್ಧಕಗಳ ಮೂಲಕ ಎಚ್ಚರಿಸಲಾಗಿದೆ. ಜನ ಸಾಮಾನ್ಯರು ಭಯ, ಆತಂಕದಲ್ಲೇ ಇದ್ದು, ಕೃಷಿ ಚಟುವಟಿಕೆಗಳಿಗೆ ಹಿನ್ನೆಡೆಯಾಗಿದೆ.

## ಬೆಂಗಳೂರಲ್ಲಿ ಇನ್ನು ಮುಂದೆ ಎಲ್ಲೆಂದರಲ್ಲಿ ಬೀದಿ ನಾಯಿಗಳಿಗೆ ಊಟ ಹಾಕುವಂತಿಲ್ಲ

**ಬೆಂಗಳೂರು:** ಇನ್ನು ಮುಂದೆ ನಗರದಲ್ಲಿ ಬೀದಿ ನಾಯಿಗಳಿಗೆ ಎಲ್ಲೆಂದರಲ್ಲಿ ಅಲ್ಲಿ ಊಟ ಹಾಕುವುದಕ್ಕೆ ನಿಷೇಧ ಹೇರಲಾಗಿದೆ. ಸುಪ್ರಿಂ ಕೋರ್ಟ್ ತೀರ್ಪು ಆಧರಿಸಿ ಬಿಬಿಎಂಪಿ ವ್ಯಾಪ್ತಿಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ವಿಶೇಷ ಆಯುಕ್ತ ವಿಕಾಸ್ ಕಿಶೋರ್ ಸುರಲ್ಕರ್ ತಿಳಿಸಿದ್ದಾರೆ.ನಗರದಲ್ಲಿ ಎಲ್ಲೆಂದರಲ್ಲಿ ಊಟ ಹಾಕುವ ಬದಲು ಬೀದಿ ನಾಯಿಗಳಿಗೆ ಊಟ ಹಾಕಲೆಂದೇ ಬಿಬಿಎಂಪಿ ನಿಗದಿಪಡಿಸಿರುವ ಜಾಗಗಳಲ್ಲೆ ಊಟ ಹಾಕಬೇಕು ಎಂದು ಅವರು ಸೂಚನೆ ನೀಡಿದ್ದಾರೆ.ನಗರದ ಸುಮಾರು 50 ಸಾವಿರಕ್ಕೂ ಹೆಚ್ಚು ರಸ್ತೆಗಳ ಕೊನೆಯಲ್ಲಿ ಬೀದಿ ನಾಯಿಗಳಿಗೆ ಊಟದ ನೀಡೋದಕ್ಕೆ ಸ್ಥಳದ ವ್ಯವಸ್ಥೆ ಮಾಡಲಾಗಿದೆ. ಹೀಗಾಗಿ ಪಾಲಿಕೆ ನಿಗದಿಪಡಿಸಿರುವ ಸ್ಥಳಗಳಲ್ಲೆ ಊಟ ಹಾಕಬೇಕು ಎಂದು ಅವರು ಮನವಿ ಮಾಡಿಕೊಂಡಿದ್ದಾರೆ.ನಿಮ ಮನೆ ಮುಂದೆ ಬರುವ ಬೀದಿ ನಾಯಿಗಳಿಗೆ ಊಟ ಹಾಕಬಾರದು ನೀವು ಬೀದಿ ನಾಯಿಗಳಿಗೆ ಹಾಕುವ ಊಟದಿಂದ ಅಕ್ಕಪಕ್ಕದವರಿಗೆ ಕಿರಿ ಕಿರಿಯಾಗುವ ಸಾಧ್ಯತೆ ಇರುವುದರಿಂದ ರಸ್ತೆ ಕೊನೆಯಲ್ಲಿ ನಿಗದಿಪಡಿಸಿರುವ ಜಾಗದಲ್ಲೆ ಶ್ವಾನಗಳಿಗೆ ಊಟ ಹಾಕಬೇಕು ಎಂದು ಅವರು ತಿಳಿಸಿದ್ದಾರೆ.ಒಂದು ವೇಳೆ ಎಲ್ಲೆಂದರಲ್ಲಿ ಊಟ ಹಾಕಿ ಅದರಿಂದ ಯಾವುದೇ ರೀತಿಯ ಅನಾಹುತ ಆದರೆ ಅದಕ್ಕೆ ನಿಮನ್ನೆ ಹೊಣೆ ಮಾಡಲಾಗುವುದು ಎಂದು ಅವರು ಇದೇ ಸಂದರ್ಭದಲ್ಲಿ ಎಚ್ಚರಿಸಿದ್ದಾರೆ.

## ಕಿರು ಉದ್ದಿಮೆಗಳಿಗೆ ಪ್ರೋತ್ಸಾಹ ನೀಡಲು ಸೂಚನೆ

**ಹಾಸನ:** ಜಿಲ್ಲೆಯಲ್ಲಿ ಆಹಾರ ಸಂಸ್ಕರಣಾ ಕೈಗಾರಿಕೆಯ ಹಾಲಿ ಅಸಂಘಟಿತ ವಲಯದಲ್ಲಿರುವ ಕಿರು ಉದ್ದಿಮೆಗಳ ಸ್ಪರ್ಧಾತ್ಮಕತೆಯನ್ನು ವೃದ್ಧಿಸುವುದು ಮತ್ತು ವಲಯದ ನಿಯಮಬದ್ಧಗೊಳಿಸುವಿಕೆಯನ್ನು ಪ್ರೋತ್ಸಾಹಿಸಲು ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮ ಬದ್ದಗೊಳಿಸುವಿಕೆ ಯೋಜನೆ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಅವರು ರೈತ ಉತ್ಪಾದಕದ ಸಂಸ್ಥೆಗಳು, ಸ್ವಸಹಾಯ ಗುಂಪುಗಳು ಹಾಗೂ ಉತ್ಪಾದಕರ ಸಹಕಾರಿಗಳಿಗೆ ಅವುಗಳ ಇಡೀ ಮೌಲ್ಯ ಸರಪಳಿಯ ಉದ್ದಗಲಕ್ಕೂ ಬೆಂಬಲ ಒದಗಿಸಬೇಕು ಎಂದು ತಿಳಿಸಿದರು.

## ಸೆ.1ಕ್ಕೆ ರೈತರ ಬೃಹತ್ ಸಮಾವೇಶ

**ಹೊನ್ನಾಳಿ :** ಸರ್ಕಾರದ ತಪ್ಪು ಒಪ್ಪುಗಳನ್ನು ಎತ್ತಿ ಹಿಡಿದು ಜನತೆಯ ಮುಂದಿಡುವ ಕೆಲಸವನ್ನು ಪ್ರತಿಪಕ್ಷ ಮಾಡಬೇಕು. ಆ ಕೆಲಸವನ್ನು ವಿರೋಧ ಪಕ್ಷದವನಾಗಿ ನಾನು ಮಾಡುತ್ತಿದ್ದೇನೆ ಎಂದು ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಶನಿವಾರ ಸುದ್ದಿಗೋಷ್ಠಿಯಲ್ಲಿ ಹೇಳಿದರು. ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಶಾಸಕ ಡಿ.ಜಿ. ಶಾಂತನಗೌಡ ಅಧಿಕಾರಕ್ಕೆ ಬಂದು ಎರಡು ವರ್ಷ ಕಳೆದಿದೆ. ಇದುವರೆಗೆ ನಾನು ಕಾಂಗ್ರೆಸ್ ಪಕ್ಷದ ಆಡಳಿತದ ವೈಖರಿ ಬಗ್ಗೆ ಟೀಕಿಸಿದ್ದೇನೆಯೇ ಹೊರತು ಸ್ಥಳೀಯ ಶಾಸಕರ ವಿರುದ್ಧ ಮಾತನಾಡಿಲ್ಲ. ಆದರೆ ಅವರು ನನ್ನ ವಿರುದ್ಧ ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತಿದ್ದಾರೆ ಎಂದರು.

ಪರಿಸ್ಥಿತಿ ಭದ್ರಾ ಜಲಾಶಯ ನಾಲಾ ನೀರು ಹರಿಸುವ, ಯೂರಿಯಾ ಗೊಬ್ಬರದ ವಾಸ್ತವಿಕ ಹಾಗೂ ಹೊನ್ನಾಳಿ–ನ್ಯಾಮತಿ ತಾಲೂಕುಗಳ ಅಭಿವೃದ್ಧಿ ಶೂನ್ಯ ಆಡಳಿತ ಕುರಿತು ರೈತ ಒಕ್ಕೂಟದ ವತಿಯಿಂದ ಸೆ.1ರ ಸೋಮವಾರ ತಾಲೂಕಿನ ಕುಂದೂರು ಗ್ರಾಮದಲ್ಲಿ ದಾವಣಗೆರೆ ಜಿಲ್ಲೆಯ ವಿವಿಧ ತಾಲೂಕುಗಳ ರೈತರ ಬೃಹತ್ ಸಮಾವೇಶ



ನಡೆಸಲಾಗುವುದು.

ಶಾಸಕರ ಆರೋಪಗಳಿಗೆ ಉತ್ತರ ನೀಡುತ್ತೇನೆ ಎಂದರು. ಕ್ಷೇತ್ರದ ಶಾಸಕರು 367.64 ಕೋಟಿ ರೂ. ಅನುದಾನದಲ್ಲಿ ತಾಲೂಕಿನ ಅಭಿವೃದ್ಧಿ ಮಾಡಿಸಿರುವುದಾಗಿ ಹೇಳುತ್ತಿದ್ದಾರೆ. ಈ ಬಗ್ಗೆ ಅವರು ದಾಖಲೆ ಸಹಿತ ಸಾಬೀತುಪಡಿಸಲಿ ಎಂದು ಹೇಳಿದರು.ನನ್ನ ಅಧಿಕಾರಾವಧಿಯಲ್ಲಿ ಅಂದಿನ ಇಂಧನ ಸಚಿವರಾಗಿದ್ದ ಸುನಿಲ್ ಕುಮಾರ್

**. ಸೆ.1ರ ಸೋಮವಾರ ತಾಲೂಕಿನ ಕುಂದೂರು ಗ್ರಾಮದಲ್ಲಿ ದಾವಣಗೆರೆ ಜಿಲ್ಲೆಯ ವಿವಿಧ ತಾಲೂಕುಗಳ ರೈತರ ಬೃಹತ್ ಸಮಾವೇಶ ನಡೆಸಲಾಗುವುದು**

ಅವರಿಗೆ ಮನವಿ ಮಾಡಿ ವಿದ್ಯುತ್ ಅಕ್ರಮ–ಸಕ್ರಮಕ್ಕೆ ಹೊನ್ನಾಳಿಗೆ 25.70 ಕೋಟಿ ರೂ. ಹಾಗೂ ನ್ಯಾಮತಿಗೆ 23.79 ಕೋಟಿ ರೂ. ಅನುದಾನವನ್ನು 202200 ಮಂಜೂರು ಮಾಡಿಸಿದ್ದೆ. ಈ ವಿಷಯವಾಗಿ ಬಹಿರಂಗ ಚರ್ಚೆಗೆ ಸಿದ್ಧ ಎಂದರು.

ಹೊನ್ನಾಳಿ, ನ್ಯಾಮತಿ ತಾಲೂಕುಗಳಲ್ಲಿ ಇಂದಿಗೂ ಯೂರಿಯಾ ಗೊಬ್ಬರದ ಅಭಾವವಿದೆ ಹಾಗೂ ಹೆಚ್ಚುವರಿ ದರಕ್ಕೆ ಗೊಬ್ಬರ ಮಾರಾಟ ವಾಗುತ್ತಿದೆ. ಆದರೆ ಶಾಸಕರು ಗೊಬ್ಬರದ ಕೊರತೆ ಇಲ್ಲ ಎಂದು ಹೇಳುತ್ತಿದ್ದಾರೆ ಎಂದರು.ಸುದ್ದಿಗೋಷ್ಠಿಯಲ್ಲಿ ಬಿಜೆಪಿ ತಾಲೂಕಾಧ್ಯಕ್ಷ ಅರಕೆರೆ ನಾಗರಾಜ್, ಮಾಜಿ ಅಧ್ಯಕ್ಷ ಜೆ.ಕೆ. ಸುರೇಶ್ ಮತ್ತು ದೊಡ್ಡರಿ ಡಿ.ಜಿ. ರಾಜಪ್ಪ, ಮುಖಂಡರಾದ ಮಾರುತಿ ನಾಯ್ಕ, ನೆಲಹೊನ್ನೆ ಮಂಜುನಾಥ್ ಇದ್ದರು.

### ನಾಂದಣಿ ಮಠದ ಆನೆಗಾಗಿ ಒಗ್ಗೂಡಿದ ಕರ್ನಾಟಕ–ಮಹಾರಾಷ್ಟ್ರದ ಗಡಿ ಭಾಗದ ಭಕ್ತರು

# ಆನೆಗಾಗಿ ಜಿಯೊ ಸಿಮ್ ಎಸೆದರು...

**ಕಾಗವಾಡ (ಬೆಳಗಾವಿ ಜಿಲ್ಲೆ):** ಮಹಾರಾಷ್ಟ್ರದ ನಾಂದಣಿ ಮಠದಲ್ಲಿದ್ದ ಆನೆಯನ್ನು ಮರಳಿ ಮಠಕ್ಕೇ ಒಪ್ಪಿಸುವಂತೆ ಭಕ್ತರು ಪಟ್ಟು ಹಿಡಿದಿದ್ದಾರೆ.

ಆನೆ ಒಯ್ಯಲು ಕಾರಣರಾಗಿದ್ದಾರೆ ಎಂದು ಸಿಟ್ಟಿಗೆದ್ದು, ಕರ್ನಾಟಕ ಮತ್ತು ಮಹಾರಾಷ್ಟ್ರ ಗಡಿಯ ಅಸಂಖ್ಯ ಭಕ್ತರು ಅಂಬಾನಿ ಒಡೆತನದ ಜಿಯೊ ಸಿಮ್‌ಕಾರ್ಡ್ ಕಿತ್ತೆಸೆದಿದ್ದಾರೆ.

ಮಹಾರಾಷ್ಟ್ರದ ಕೊಲ್ಲಾಪುರ ಜಿಲ್ಲೆಯ ಶಿರೋಳ ತಾಲ್ಲೂಕಿನ ನಾಂದಣಿಯ ಸ್ವಸ್ತಿಶ್ರೀ ಭಟ್ಟಾರಕ ಪಟ್ಟಾಚಾರ್ಯ ಜೈನ ಮಠದ ಮಹಾದೇವಿ (ಮಾಧುರಿ) ಎಂಬ ಆನೆಯನ್ನು ಸುಪ್ರೀಂ ಕೋರ್ಟ್ ಆದೇಶದ ಹಿನ್ನೆಲೆಯಲ್ಲಿ, ಗುಜರಾತ್ ರಾಜ್ಯದ ವನತಾರ ಪ್ರಾಣಿ ರಕ್ಷಣಾ



ಕೇಂದ್ರಕ್ಕೆ (ಅಂಬಾನಿ ಒಡೆತನ)

ನಾಂದಣಿ ಜೈನ ಮಠದ ಆನೆ ಮಹಾದೇವಿ (ಮಾಧುರಿ)

**ಆನೆಯನ್ನು ಕರೆದೊಯ್ದ ಕಾರಣ ಜೈನ ಮುನಿಗಳೂ ಸೇರಿ ಇಡೀ ಊರು ಕಣ್ಣೀರು ಹಾಕುತ್ತಿದೆ. ಇದು ಭಾವನಾತ್ಮಕ ವಿಷಯ. ಸರ್ಕಾರ ಆನೆಯನ್ನು ಮಠಕ್ಕೆ ಮರಳಿಸಬೇಕು**

– ಸಂಜಯ ಕೂಚನೂರೆ, ಉಪಾಧ್ಯಕ್ಷ, ಬೆಳಗಾವಿ ದಿಗಂಬರ ಜೈನ ಬೋರ್ಡಿಂಗ್, ಬೆಳಗಾವಿ

ಕರೆದೊಯ್ಯಲಾಗಿದೆ. ಇದನ್ನು ಖಂಡಿಸಿದ ಭಕ್ತರು, ಭಾನುವಾರ (ಅ.3) ನಾಂದಣಿಯಿಂದ ಕೊಲ್ಲಾಪುರ ಜಿಲ್ಲಾಧಿಕಾರಿ ಕಚೇರಿಯವರೆಗೆ ಪಾದಯಾತ್ರೆ ನಡೆಸಿ, ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

30 ವರ್ಷಗಳಿಂದ ಆನೆ ಮಠದಲ್ಲಿತ್ತು. ಈಗ ಅದಕ್ಕೆ 35 ವರ್ಷ ವಯಸ್ಸು. ಮಠದಲ್ಲಿ ಪರಂಪರಾಗತವಾಗಿ ಆನೆ ಸಾಕುವ ಪದ್ಧತಿ ಇದೆ. ಇದನ್ನು ಪ್ರಶ್ನಿಸಿ ಮಹಾರಾಷ್ಟ್ರದ ಪ್ರಾಣಿ ದಯಾ ಸಂಘಟನೆ ದೂರು ಸಲ್ಲಿಸಿತ್ತು. ಅರಣ್ಯ ಇಲಾಖೆ ವೈದ್ಯಾಧಿಕಾರಿಗಳು ಆನೆ ಆರೋಗ್ಯ ತಪಾಸಣೆ ನಡೆಸಿ, ಸರಿಯಾದ ಪಾಲನೆ ಆಗದೆ ಆರೋಗ್ಯ ಕ್ಷೀಣಿಸಿದೆ ಎಂದು ವರದಿ ನೀಡಿದ್ದರು.

ವಿಚಾರಣೆ ನಡೆಸಿದ ಮುಂಬೈ ಹೈಕೋರ್ಟ್ ಆನೆಯನ್ನು ಅರಣ್ಯಕ್ಕೆ ಬಿಡಬೇಕು ಎಂದು ಆದೇಶಿಸಿತ್ತು. ಇದನ್ನು ಪ್ರಶ್ನಿಸಿ ಮಠದ ಭಕ್ತರು ಸುಪ್ರೀಂಕೋರ್ಟ್ ಮೊರೆ ಹೋಗಿದ್ದರು. ಅಲ್ಲಿಯೂ ಸೋಲಾಯಿತು.

ಆದೇಶದಂತೆ, ಜುಲೈ 28ರಂದು ಅರಣ್ಯಾಧಿಕಾರಿಗಳು ಆನೆಯನ್ನು ವಶಕ್ಕೆ ಪಡೆದು, ವನತಾರ ಪ್ರಾಣಿ ರಕ್ಷಣಾ ಕೇಂದ್ರಕ್ಕೆ ಸೇರಿಸಿದ್ದಾರೆ.

'ಜೈನ ಮಠಗಳ ಅಸ್ತಿತ್ವಕ್ಕೆ ಧಕ್ಕೆ ತರಲಾಗಿದೆ. ಉದ್ಯಮಿ ಅಂಬಾನಿ ಒಡೆತನದ ಕೇಂದ್ರಕ್ಕೆ ಆನೆಯನ್ನು ಸೇರಿಸಿದ್ದು ಸರಿಯಲ್ಲ ಎಂದು ಭಕ್ತರು –ಆಕ್ರೋಶ ಹೊರಹಾಕಿದ್ದಾರೆ. ಇದೇ ಕಾರಣಕ್ಕೆ ಅಪಾರ ಸಂಖ್ಯೆಯ ಭಕ್ತರು ಜಿಯೊ ನೆಟವರ್ಕ್ ಬಳಕೆಯನ್ನೂ ಕೈಬಿಟ್ಟಿದ್ದಾರೆ' ಎಂದು ಜೈನ ಸಮಾಜದ ಮುಖಂಡರು ತಿಳಿಸಿದ್ದಾರೆ.

# ಭೀಕರ ಅಪಘಾತ: 8 ಮಂದಿ ಸಾವು



**ಬುಲಂದ್‌ಶಹರ್:** ಉತ್ತರ ಪ್ರದೇಶದ ಬುಲಂದ್‌ಶಹರ್‌ನ ರಾಷ್ಟ್ರೀಯ ಹೆದ್ದಾರಿ–34 ರಲ್ಲಿ ಭಕ್ತರು ತುಂಬಿದ್ದ ಟ್ರ್ಯಾಕ್ಟರ್‌ಗೆ ಕಂಟೇನರ್ ಡಿಕ್ಕಿ ಹೊಡೆದ ಪರಿಣಾಮ 8 ಜನರು ಸ್ಥಳದಲ್ಲಿಯೇ ಸಾವನ್ನಪ್ಪಿದ್ದು, 45 ಜನರು ಗಾಯಗೊಂಡಿರುವ ಘಟನೆ ನಡೆದಿದೆ. ಉತ್ತರ ಪ್ರದೇಶದ ಕಾಸ್ಗಂಜ್‌ನಿಂದ ರಾಜಸ್ಥಾನದ ಗೋಗಮೇಡಿಗೆ ಭಕ್ತರು ಹೋಗುತ್ತಿದ್ದಾಗ ವೇಳೆ ಘಾಟಲ್ ಗ್ರಾಮದ ಬಳಿ ಈ ಅಪಘಾತ ಸಂಭವಿಸಿದೆ. ಗಾಯಗೊಂಡರಲ್ಲಿ 12 ಮಕ್ಕಳು ಸೇರಿದ್ದು ಎಲ್ಲಾ 45 ಮಂದಿ ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲು ಮಾಡಿ ಚಿಕಿತ್ಸೆ ಕೊಡಿಸಲಾಗಿದೆ.

ಮೃತರ ಶವಗಳನ್ನು ಮರಣೋತ್ತರ ಪರೀಕ್ಷೆಗೆ ಒಳಪಡಿಸಲಾಗಿದೆ, ಮೃತರನ್ನು ಟ್ರ್ಯಾಕ್ಟರ್ ಚಾಲಕ ಇ.ಯು. ಬಾಬು (40), ರಾಂಬೆಟಿ (65), ಚಾಂದನಿ (12), ಘನಿರಾಮ್ (40), ಮೋಕ್ಷಿ (40), ಶಿವಾಂಶ್ (6), ಯೋಗೇಶ್ (50) ಮತ್ತು ವಿನೋದ್ (45) ಎಂದು ಗುರುತಿಸಲಾಗಿದ್ದು, ಎಲ್ಲರೂ ಕಾಸ್ಗಂಜ್ ಜಿಲ್ಲೆಯ ನಿವಾಸಿಗಳು ಎಂದು ಪೊಲೀಸರು ತಿಳಿಸಿದ್ದಾರೆ. ಗಾಯಗೊಂಡವರ ಪೈಕಿ ಕೆಲವರ ಸ್ಥಿತಿ ಗಂಭೀರವಾಗಿದ್ದು ಸಾವು,ನೋವಿನ ಸಂಖ್ಯೆ ಹೆಚ್ಚಳವಾಗುವ ಭೀತಿ ಇದೆ. ಮೃತಪಟ್ಟ ಕುಟುಂಬದ ಸದಸ್ಯರ ಆಕ್ರಂದನ ಮುಗಿಲು ಮುಟ್ಟಿದೆ.

ಘಟನಾ ಸ್ಥಳಕ್ಕೆ ಪೊಲೀಸರು ಮತ್ತು ರಕ್ಷಣಾ ತಂಡಗಳು ಧಾವಿಸಿದ್ದು ಗಾಯಾಳುಗಳನ್ನು ಖುರ್ಜಾದ ಕೈಲಾಶ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಮೂವರ ಸ್ಥಿತಿ ಗಂಭೀರವಾಗಿದ್ದು, ಅವರಿಗೆ ವೆಂಟಿಲೇಟರ್ ಮೂಲಕ ಕೃತಕ ಉಸಿರಾಟದ ವ್ಯವಸ್ಥೆ ಮಾಡಲಾಗಿದೆ. ಜಿಲ್ಲಾ ಮ್ಯಾಜಿಸ್ಟ್ರೇಟ್ ಮತ್ತು ಎಸ್‌ಎಸ್‌ಪಿ ಸೇರಿದಂತೆ ಪೊಲೀಸ್ ತಂಡಗಳನ್ನು ಅಪಘಾತ ಸ್ಥಳಕ್ಕೆ ತಕ್ಷಣವೇ ದೌಡಾಯಿಸಿದ್ದಯ ಗಾಯಾಳುಗಳನ್ನು ಅಲಿಘರ್ ವೈದ್ಯಕೀಯ ಕಾಲೇಜು, ಬುಲಂದ್‌ಶಹರ್ ಜಿಲ್ಲಾ ಆಸ್ಪತ್ರೆ ಮತ್ತು ಕೈಲಾಶ್ ಆಸ್ಪತ್ರೆಗೆ ದಾಖಲಿಸಿದ್ದಾರೆ.

ಅಪಘಾತದ ಮಾಹಿತಿ ತಿಳಿಯುತ್ತಿದ್ದಂತೆ ಅರ್ನಿಯಾ ಪೊಲೀಸರು ಮತ್ತು ಹತ್ತಿರದ ಪೊಲೀಸ್ ಠಾಣೆ ಪಡೆಗಳು ಸ್ಥಳಕ್ಕೆ ತಲುಪಿ, ಹೆಚ್ಚಿನ ಜನರಿಗೆ ಸ್ಥಳಾಂತರಗೊಳ್ಳಲು ಟ್ರ್ಯಾಕ್ಟರ್–ಟ್ರಾಲಿಯನ್ನು ಡಬಲ್ ಡೆಕ್ಕರ್ ಆಗಿ ಪರಿವರ್ತಿಸಲಾಗಿದೆ. ಅಪಘಾತಕ್ಕೆ ಕಾರಣವಾದ ಕಂಟೇನರ್ ಅನ್ನು ಸಹ ಪೊಲೀಸರು ವಶಪಡಿಸಿಕೊಂಡಿದ್ದಾರೆ. ಸಿಂಗ್ ತಿಳಿಸಿದ್ದಾರೆ.

# ನಾಟಕ ಬದುಕಿನ ಕನ್ನಡಿ: ನೀಲಗುಂದ ಚನ್ನಬಸವ ಸ್ವಾಮೀಜಿ



**ದಾವಣಗೆರೆ:** ಕಲೆ ಈ ದೇಶದ ಸಂಪತ್ತು. ಕಲಾವಿದ ದೇಶದ ಆಸ್ತಿ. ನಾಟಕ ಬದುಕಿನ ಕನ್ನಡಿ. ಕಲೆಗೆ ಜಾತಿ, ಮತ, ಪಂಥ ಇರುವುದಿಲ್ಲ. ನಾಟಕ ಕಲೆ ಕೆಲವರಿಗೆ ಸಾಧನೆಯಿಂದ ಸಿದ್ಧಿಸಿಕೊಂಡರೆ, ಮತ್ತೆ ಕೆಲವರಿಗೆ ಅನುವಂಶೀಯವಾಗಿ ಬಂದಿರುತ್ತದೆ ಎಂದು ನೀಲಗುಂಡ ಗುಡ್ಡದ ಸಂಸ್ಥಾನದ ಜಂಗಮ ಪೀಠದ ಶ್ರೀ ಚನ್ನಬಸವ ಶಿವಯೋಗಿ ಸ್ವಾಮೀಜಿ ಹೇಳಿದರು.

ನಗರದ ಪದ್ಮಶ್ರೀ ಚಿಂದೋಡಿ ಲೀಲಾ ಕಲಾಕ್ಷೇತ್ರದಲ್ಲಿ ಕರ್ನಾಟಕ ನಾಟಕ ಅಕಾಡೆಮಿ, ಶ್ರೀಶೈಲ ಮಲ್ಲಿಕಾರ್ಜುನ ವಿವಿಧ ನಾಟಕ ಕಲಾವಿದರ ಸಂಘ (ದಾವಣಗೆರೆ) ಇವರ ಸಂಯುಕ್ತಾಶ್ರಯದಲ್ಲಿ ಭಾನುವಾರ ಏರ್ಪಾಡಾಗಿದ್ದ ಜಿಲ್ಲಾಮಟ್ಟದ ನಾಟಕೋತ್ಸವ ಹಾಗೂ ವಿವಿಧ ಕ್ಷೇತ್ರಗಳ ಸಾಧಕರ ಸನ್ಮಾನ ಸಮಾರಂಭದ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ಜೀವನ ಮತ್ತೊಬ್ಬರಿಗೆ ಮಾದರಿಯಾಗಿರಬೇಕು. ಜಗತ್ತಿನಲ್ಲಿ ಎಲ್ಲರೂ ಪಾತ್ರಧಾರಿಗಳೇ, ಅವುಗಳನ್ನು ಸಮರ್ಪಕವಾಗಿ ನಿಭಾಯಿಸಬೇಕಾಗಿದೆ. ಕಲೆ ಜನ ಮಾನಸದಲ್ಲಿ ಉಳಿಯುವಂತಹದ್ದು, ಸಿನಿಮಾ ರೀಲ್ ಆದರೆ ನಾಟಕ ರಿಯಲ್ ಎಂದರು.

ನಾಟಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿದ ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷ ಕೆ.ವಿ. ನಾಗರಾಜ್ ಮೂರ್ತಿ ಮಾತನಾಡಿ, ಮನಸ್ಸುಗಳನ್ನು ಸೃಜನಶೀಲಗೊಳಿಸ ಬೇಕು. ಮನಸ್ಸುಗಳನ್ನು ಪರಿವರ್ತನೆ ಮಾಡಿಕೊಳ್ಳಬೇಕಾಗಿದೆ. ಜಾತಿ, ಧರ್ಮಕ್ಕೂ ಮೀರಿದ್ದು ಸಂಸ್ಕೃತಿ, ನಮ್ಮದು ಕನ್ನಡ ಸಂಸ್ಕೃತಿ, ಭಾರತೀಯ ಸಂಸ್ಕೃತಿ, ಬಸವ ಧರ್ಮ, ಕನಕ ಧರ್ಮ, ಅಂಬೇಡ್ಕರ್ ಧರ್ಮ. ನಾವೆಲ್ಲರೂ ಸಹಬಾಳ್ವೆಯಿಂದ ಬದುಕಿದಾಗ ಕಲೆ, ಸಂಸ್ಕೃತಿ ಉಳಿಯಲು ಸಾಧ್ಯ. ಸುಂದರ ಸಮಾಜ ನಿರ್ಮಾಣದಲ್ಲಿ ರಂಗಭೂಮಿ ಪಾತ್ರ ಹಿರಿದು ಎಂದರು.

ಹಿರಿಯ ಪತ್ರಕರ್ತ ಗಣೇಶ್ ಅಮಿನಗಡ ವಿರಚಿತ 'ಬಣ್ಣದ ಬದುಕಿನ ಚಿನ್ನದ ದಿನಗಳು' ಪುಸ್ತಕ ಬಿಡುಗಡೆ ಮಾಡಿದ ವೃತ್ತಿ ರಂಗಭೂಮಿ ರಂಗಾಯಣದ ನಿರ್ದೇಶಕ ಮಲ್ಲಿಕಾರ್ಜುನ ಕಡಕೋಳ ಮಾತನಾಡಿ, ಆಧುನಿಕ ರಂಗಭೂಮಿ ನಾಟಕಗಳು ಬುದ್ಧಿಜೀವಿಗಳ ಮಿದುಳಿಗೆ ತಟ್ಟುತ್ತವೆ. ವೃತ್ತಿ ರಂಗಭೂಮಿ ನಾಟಕಗಳು ಹೃದಯವನ್ನು ತಟ್ಟುತ್ತವೆ. ರಂಗಭೂಮಿ ಹೃದಯ ಸ್ಪರ್ಶಿಯೂ ಹೌದು, ಕಲಾ ಸ್ಪರ್ಶಿಯೂ ಹೌದು ಎಂದರು.

ಕೆ.ಬಿ.ಆರ್. ನಾಟಕ ಕಂಪನಿ ಮಾಲೀಕ ಸಿ.ಎಲ್. ಚಂದ್ರಧರ ಅಧ್ಯಕ್ಷತೆ ವಹಿಸಿ ಮಾತನಾಡಿ, ಸತ್ಯಕ್ಕೆ ಹತ್ತಿರವಾದ, ಸುಳ್ಳಿಗೆ ದೂರವಾದ ನಡುವಿನ ಪ್ರಕ್ರಿಯೆ ನಾಟಕ. ರಾಜ್ಯದ ಎಲ್ಲಾ ನಾಟಕ ಕಂಪನಿಗಳೊಂದಿಗೆ ಒಡನಾಟವಿದ್ದು, ಬರುವ ಇನ್ನೆರಡು ವರ್ಷಗಳಲ್ಲಿ ಕೆ.ಬಿ.ಆರ್. ನಾಟಕ ಕಂಪನಿ ಶತಮಾನೋತ್ಸವ ಆಚರಿಸಲಿದ್ದು, ಇದಕ್ಕೆ ಎಲ್ಲರೂ ಸಹಕರಿಸಬೇಕೆಂದು ಕೋರಿದರು.

ಹಿರಿಯ ಪತ್ರಕರ್ತ ಬಾ.ಮ. ಬಸವರಾಜಯ್ಯ ಮಾತನಾಡಿದರು. ಕಲಾವಿದ ಆರ್.ಟಿ. ಅರುಣ್ ಕುಮಾರ್, ಹಿರಿಯ ಪತ್ರಕರ್ತರಾದ ಬಿ.ಎನ್. ಮಲ್ಲೇಶ್, ಗಣೇಶ್ ಅಮಿನಗಡ, ವಕೀಲರ ಸಂಘದ ಜಿಲ್ಲಾಧ್ಯಕ್ಷ ಎಲ್.ಹೆಚ್. ಅರುಣ್ ಕುಮಾರ್, ಸ್ಫೂರ್ತಿ ಸಾಂಸ್ಕೃತಿಕ ಸೇವಾ ಸಂಘದ ಅಧ್ಯಕ್ಷ ಎನ್.ಎಸ್. ರಾಜು, ಬಸವ ಕಲಾ ಲೋಕದ ಮುಖ್ಯಸ್ಥ ಶಶಿಧರ್ ಬಸಾಪುರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ, ನಾಟಕ ಅಕಾಡೆಮಿ ಸದಸ್ಯೆ ಜ್ಯೋತಿಲಕ್ಷ್ಮಿ ಮಂಗಳೂರು, ಕಾರ್ಮಿಕ ಮುಖಂಡರಾದ ಹೆಚ್.ಜಿ.ಉಮೇಶ್ ಆವರಗೆರೆ, ರಾಘವೇಂದ್ರ ನಾಯರಿ, ರಂಗಕರ್ಮಿ ಬಸವರಾಜ ಐರಣಿ, ಶಿವನ ನಾಯಕ ದೊರೆ, ಪ್ರವೀಣ ಕುಮಾರ್ ಜೈನ್, ಕೈಲಾಸ ಬಾಬು ಮಾಗಿ, ಎಸ್.ಜಿ. ಗೋವಿಂದಪ್ಪ, ವಿಮಲಾ ನಾಗರಾಜ್, ಪಿ.ಕೆ. ಖಾದರ್, ನೀಲಗುಂದದ ಬಸವನಗೌಡ ಮತ್ತಿತರರು ಉಪಸ್ಥಿತರಿದ್ದರು.

# ಶೇ. 1 ರಷ್ಟು ಒಳ ಮೀಸಲಾತಿಗೆ ಅಲೆಮಾರಿಗಳ ಒಕ್ಕೂಟದಿಂದ ಪ್ರತಿಭಟನೆ




**ದಾವಣಗೆರೆ:** ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿರುವ 49 ಸೂಕ್ಷ್ಮ, ಅತಿ ಸೂಕ್ಷ್ಮ ಜಾತಿಗಳ ಅಲೆಮಾರಿಗಳಿಗೆ ಪ್ರತ್ಯೇಕವಾಗಿ ಶೇ. 1 ರಷ್ಟು ಒಳ ಮೀಸಲಾತಿ ಕಲ್ಪಿಸಬೇಕೆಂದು ಒತ್ತಾಯಿಸಿದ ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ ಅಲೆಮಾರಿಗಳ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ 49 ಜಾತಿಗಳ ಮಹಾ ಒಕ್ಕೂಟದಿಂದ ಜಿಲ್ಲಾಡಳಿತ ಭವನದ ಮುಂದೆ ಪ್ರತಿಭಟನೆ ನಡೆಸಿದರು. ನಗರದ ಪಿ.ಬಿ. ರಸ್ತೆಯಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ವೃತ್ತದಿಂದ ಜಿಲ್ಲಾಡಳಿತ ಭವನದವರೆಗೆ ಪ್ರತಿಭಟನಾ ಮೆರವಣಿಗೆಯಲ್ಲಿ ಸಾಗಿ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ವಿವಿಧ ಬೇಡಿಕೆಗಳಿರುವ ಮನವಿಯನ್ನು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ ಅವರಿಗೆ ಸಲ್ಲಿಸಿದರು.

ಒಕ್ಕೂಟದ ಮುಖಂಡ ಕತ್ತಲಗೆರೆ ತಿಪ್ಪಣ್ಣ ಮಾತನಾಡಿ, ಅತ್ಯಂತ ಶೋಷಣೆಗೆ ಒಳಗಾಗಿರುವ ಸೂಕ್ಷ್ಮ, ಅತಿ ಸೂಕ್ಷ್ಮ 42 ಜಾತಿಗಳ ಅಲೆಮಾರಿಗಳ ಸ್ಥಿತಿಗತಿಯ ದತ್ತಾಂಶ ಸಂಗ್ರಹಿಸಿದ ನ್ಯಾ. ನಾಗಮೋಹನ್ ದಾಸ್ ಏಕ ಸದಸ್ಯ ಆಯೋಗ ಈ ಜಾತಿಗಳ ಜನರಿಗೆ ಪ್ರತ್ಯೇಕ ಗುಂಪು ಸೃಷ್ಟಿಸಿ ಶೇ. 1 ರಷ್ಟು ಮೀಸಲಾತಿ ನೀಡುವಂತೆ ಶಿಫಾರಸ್ಸು ಮಾಡಿತ್ತು. ಆದರೆ ರಾಜ್ಯ ಸರ್ಕಾರವು ಈ ಶಿಫಾರಸ್ಸು ಕಡೆಗಣಿಸಿ ಬಲಾಢ್ಯ ಜಾತಿಗಳ ಮತ ಸೆಳೆಯಲು ಅವುಗಳಿಗೆ ಸಿಂಹಪಾಲು ನೀಡಿ ಅಲೆಮಾರಿಗಳಿಗೆ ಅನ್ಯಾಯ ಮಾಡಿದೆ ಎಂದು ದೂರಿದರು.

ಒಳ ಮೀಸಲಾತಿ ಹಂಚಿಕೆ ವೇಳೆ ಅಲೆಮಾರಿ ಜಾತಿಗಳನ್ನು ಬಲಾಢ್ಯ ಸಮಯುದಾಯದ ಗುಂಪಿನಲ್ಲಿ ಸೇರಿಸಲಾಗಿದೆ. ಆ ಗುಂಪಿನಲ್ಲಿರುವ ಭೋವಿ, ಲಂಬಾಣಿ ಸೇರಿದಂತೆ ಇತರೆ ಸಮುದಾಯಗಳ ಜನರು ಅಕ್ಷರಸ್ಥರಾಗಿದ್ದಾರೆ. ಆದರೆ 49 ಜಾತಿಗಳ ಅಲೆಮಾರಿಗಳ ಸಮುದಾಯ ಅಕ್ಷರ ವಂಚಿತರಾಗಿದ್ದಾರೆ. ವಾಸ್ತವ ಸ್ಥಿತಿ ಹೀಗಿರುವಾಗ ಅಲೆಮಾರಿಗಳು ಆ ಸಮುದಾಯದ ಜನರೊಂದಿಗೆ ಪೈಪೋಟಿ ನಡೆಸಿ ಮೀಸಲಾತಿ ಪಡೆಯಲು ಅಸಾಧ್ಯ ಎಂದರು.

ಅಲೆಮಾರಿಗಳಿಗೆ ರಾಜಕೀಯ, ಶೈಕ್ಷಣಿಕ, ಉದ್ಯೋಗದ ಮೀಸಲಾತಿ ಮರೀಚಿಕೆಯಾಗಲಿದೆ. ರಾಜ್ಯ ಸರ್ಕಾರ ಮೀಸಲಾತಿ ಮರು ಪರಿಶೀಲಿಸಿ, ಅಲೆಮಾರಿಗಳಿಗೆ ಪ್ರತ್ಯೇಕವಾಗಿ ಶೇ. 1 ರಷ್ಟು ಒಳ ಮೀಸಲಾತಿ ನೀಡುವಂತೆ ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಒಕ್ಕೂಟದ ರಮೇಶ್ ಸಿ. ದಾಸರ್, ಮಂಜುನಾಥ, ಹರೀಶ್, ತಿಪ್ಪೇಶಪ್ಪ ಗುರುರಾಜಪುರ, ಮಂಜುನಾಥ ದಾಸರ್, ಆಂಜನೇಯ, ಸಿದ್ಧಪ್ಪ ಹೊನ್ನಾಳಿ, ಆಂಜನೇಯ, ಅನಿಲ್, ಪ್ರದೀಪ್ ಜರೇಕಟ್ಟೆ, ಮಂಜಪ್ಪ ಬಡಗಿ,ಮಹಾಂತೇಶ್, ಹನುಮಂತಪ್ಪ ಮತ್ತಿತರರು ಪಾಲ್ಗೊಂಡಿದ್ದರು.

# ಪೊಲೀಸ್ ಆಯುಕ್ತರ ಮನವಿ ಮೇರೆಗೆ ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಹೋದೆ, ಕಪ್ ಗೆ ಮುತ್ತು ನೀಡಿದೆ; ಆಟಗಾರರಿಗೆ ಅಭಿನಂದಿಸಿದೆ :ಡಿಕೆಶಿ



**ಬೆಂಗಳೂರು:** ಪೊಲೀಸ್ ಆಯುಕ್ತರು ನನ್ನ ಬಳಿ ಬಂದು ಆರ್ ಸಿಬಿ ತಂಡದವರಿಗೆ 10 ನಿಮಿಷಗಳಲ್ಲಿ ಕಾರ್ಯಕ್ರಮ ಮುಗಿಸುವಂತೆ ಸೂಚನೆ ನೀಡಿ ಎಂದು ಮನವಿ ಮಾಡಿಕೊಂಡ ಕಾರಣಕ್ಕೆ ನಾನು ಆ ಕಾರ್ಯಕ್ರಮಕ್ಕೆ ಹೋಗಿ 10 ನಿಮಿಷಗಳಲ್ಲಿ ಕಾರ್ಯಕ್ರಮ ಮುಗಿಸುವಂತೆ ಸೂಚನೆ ನೀಡಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಸ್ಪಷ್ಟನೆ ನೀಡಿದ್ದಾರೆ.

ವಿಧಾನಸಭೆಯಲ್ಲಿ ಆರ್‌ಸಿಬಿ ಸಂಭ್ರಮಾಚರಣೆ ವೇಳೆ ನಡೆದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳು ಉತ್ತರ ನೀಡುವ ವೇಳೆ ವಿರೋಧ ಪಕ್ಷದ ನಾಯಕರಾದ ಆರ್. ಅಶೋಕ್ ಅವರು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿನ ಕಾರ್ಯಕ್ರಮಕ್ಕೆ ಸರ್ಕಾರ ಅನುಮತಿ ನೀಡಿಲ್ಲವಾದರೆ ಉಪಮುಖ್ಯಮಂತ್ರಿಗಳು ಹೋಗಿದ್ದು ಯಾಕೆ ಎಂದು ಪ್ರಶ್ನೆ ಮಾಡಿದರು. ಇದಕ್ಕೆ ಡಿಸಿಎಂ ಡಿ.ಕೆ. ಶಿವಕುಮಾರ್ ಉತ್ತರಿಸಿದ್ದಾರೆ.

ನನ್ನನ್ನು ಪದೇ ಪದೆ ನೆನೆಯದಿದ್ದರೆ ನಿಮಗೆ ಸಮಾಧಾನ ಆಗುವುದಿಲ್ಲ. ನಿಮ್ಮ ಪಕ್ಷದವರಿಗೆ ಖುಷಿಪಡಿಸಲೂ ಆಗುವುದಿಲ್ಲ. ನಿಮಗೆ ಖುಷಿ ಆಗುವಂತೆ ಉತ್ತರ ಕೊಡಲೂ ಆಗುವುದಿಲ್ಲ ಎಂದು ಛೇಡಿಸಿದರು.

ಅಂದು ವಿಧಾನಸೌಧದ ಎದುರು ನಡೆದ ಸರ್ಕಾರಿ ಕಾರ್ಯಕ್ರಮಕ್ಕೆ ಬಂದಿದ್ದ ಕೆಎಸ್ ಸಿಎ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಕ್ರೀಡಾಂಗಣಕ್ಕೆ ಹೋಗಲು ಸಾಧ್ಯವಾಗದೇ ಹತಾಶರಾಗಿದ್ದರು.

ಇನ್ನು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿರುವ ಕಾರ್ಯಕ್ರಮವನ್ನು ಕೇವಲ 10 ನಿಮಿಷಗಳಲ್ಲಿ ಮುಗಿಸುವಂತೆ ನೀವೇ ಬಂದು ವ್ಯವಸ್ಥೆ ಮಾಡಬೇಕು ಎಂದು ಪೊಲೀಸ್ ಆಯುಕ್ತರು ನನ್ನ ಬಳಿ ಮನವಿ ಮಾಡಿದರು.

ನಾನು ಕಾರ್ಯಕ್ರಮಕ್ಕೆ ಹೋಗಿದ್ದೂ ನಿಜ, ಅಲ್ಲಿ ಇದ್ದಿದ್ದೂ ನಿಜ, ಆರ್ ಸಿಬಿ ಆಟಗಾರರಿಗೆ ಅಭಿನಂದನೆ ಸಲ್ಲಿಸಿದ್ದು ನಿಜ. 10 ನಿಮಿಷಗಳಲ್ಲಿ ಈ ಕಾರ್ಯಕ್ರಮ ಮುಗಿಸುವಂತೆ ಅವರಿಗೆ ಸೂಚನೆ ಕೊಟ್ಟಿದ್ದೂ ನಿಜ.

ಇದೇ ಮಾತನ್ನು ನಾನು ಕುನ್ಹಾ ಅವರ ತನಿಖಾ ತಂಡದ ಮುಂದೆ ಹೇಳಿಕೆ ನೀಡಿದ್ದೂ ನಿಜ. ನಾನು ಅಲ್ಲಿಗೆ ಹೋಗಿಲ್ಲ ಎಂದು ಹೇಳುತ್ತಿಲ್ಲ. ಅಲ್ಲಿಗೆ ಹೋಗಲು ನಿಮ್ಮ ಅನುಮತಿಯ ಅಗತ್ಯವೂ ನನಗಿಲ್ಲ. ಪೊಲೀಸರ ಮನವಿ ಮೇಲೆ ನನ್ನ ಜವಾಬ್ದಾರಿಯಿಂದ ನಾನು ಹೋಗಿ ಅವರಿಗೆ ಸೂಚನೆ ನೀಡಿದ್ದೇನೆ. ಕಪ್ ಗೆ ಮುತ್ತು ನೀಡಿದ್ದೇನೆ, ಆಟಗಾರರಿಗೆ ಅಭಿನಂದಿಸಿದ್ದೇನೆ

# ಚಿನ್ನಯ್ಯ ಹಿಂದಿರುವ ವ್ಯಕ್ತಿ ಶೀಘ್ರ ಬಹಿರಂಗ

**ಬೆಂಗಳೂರು:** ಶವ ಹೂತಿಟ್ಟಪ್ರಕರಣ ಕುರಿತಂತೆ ಮುಸುಕುಧಾರಿ ಚಿನ್ನಯ್ಯನ ಹಿಂದೆ ಯಾರಿದ್ದಾರೆ ಎಂಬ ಅಂಶ ಹೊರಬರಲಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳದ ಬಗ್ಗೆ ಹಾಗೂ ಧರ್ಮಾಧಿಕಾರಿ ವೀರೇಂದ್ರ ಹೆಗಡೆಯವರ ಬಗ್ಗೆ ಬಹಳ ವರ್ಷಗಳಿಂದ ಸಾಕಷ್ಟು ಚರ್ಚೆಗಳು ನಡೆಯುತ್ತಿದ್ದವು. ಈ ಬಗ್ಗೆ ಯು ಟ್ಯೂಬರ್ಸ್‌ಗಳು ಕೂಡ ಮಾತನಾಡುತ್ತಿದ್ದರು.ಎಲ್ಲರೂ ಧರ್ಮಕ್ಕೆ ಸೇರಿದವರೇ ಆಗಿದ್ದಾರೆ ಎಂದು ಹೇಳಿದರು. ಬಿಜೆಪಿ ಧರ್ಮ ರಕ್ಷಣೆ ಕರೆ ಕೊಟ್ಟಿದೆ. 4 ವರ್ಷ ಬಿಜೆಪಿ ಸರ್ಕಾರವಿತ್ತು. ಅರಗ ಜ್ಞಾನೇಂದ್ರ ಗೃಹ ಸಚಿವರಾಗಿದ್ದರು. ಯಡಿಯೂರಪ್ಪರವರು ಮುಖ್ಯಮಂತ್ರಿಯಾಗಿದ್ದರು. ಆ ಸಮಯದಲ್ಲೇ ಇದನ್ನೆಲ್ಲ ನಿಲ್ಲಿಸಬಹುದಿತ್ತಲ್ಲವೇ ಎಂದು ಪ್ರಶ್ನಿಸಿದ ಅವರು, ಕಾಂಗ್ರೆಸ್ ಸರ್ಕಾರ ನಿರ್ಧಾರ ತೆಗೆದುಕೊಂಡು ಎಸ್‌ಐಟಿ ರಚನೆ ಮಾಡಿದ ನಂತರ ಈ ಪ್ರಕರಣ ಕುರಿತಂತೆ ಸ್ಪಷ್ಟ ಚಿತ್ರಣ ಹೊರ ಬಿದ್ದಿದೆ. ಇದು ಬಿಜೆಪಿಯವರಿಗೆ ಸಹಿಸಲಾಗುತ್ತಿಲ್ಲ ಎಂದು ಕಿಡಿಕಾರಿದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಏನೇ ಇದ್ದರೂ ಸತ್ಯಾಂಶ, ಷಡ್ಯಂತ್ರ ಹೊರ ಬರಲಿದೆ.

# ಸಿಂಧೂ ಒಪ್ಪಂದ ರದ್ದತಿಯ ನಂತರ ಪಾಕಿಸ್ತಾನಕ್ಕೆ ಕರುಣೆ ತೋರಿದ ಭಾರತ

**ನವದೆಹಲಿ:** ರಾಜತಾಂತ್ರಿಕ ಉದ್ವಿಗ್ನತೆ ಹೆಚ್ಚುತ್ತಿರುವ ನಡುವೆ, ಭಾರತ ಪಾಕಿಸ್ತಾನಕ್ಕೆ ಕರುಣೆ ತೋರಿದ ಘಟನೆ ಈಗ ಎಲ್ಲೆಡೆ ವೈರಲ್ ಆಗತೊಡಗಿದೆ.

ಪೆಹಲ್ಗಾಮ್ ನಲ್ಲಿ ಪಾಕ್ ಉಗ್ರರು ನಡೆಸಿದ ಹತ್ಯಾಕಾಂಡಕ್ಕೆ ಪ್ರತಿಯಾಗಿ ಭಾರತ ಸಿಂದೂ ನದಿ ನೀರು ಒಪ್ಪಂದ ಅಮಾನತಿನಲ್ಲಿಟ್ಟು ಕೆಲವು ದಿನಗಳ ಬಳಿಕ ಆಪರೇಷನ್ ಸಿಂದೂರ್ ಮೂಲಕ ಪಾಕ್ ಉಗ್ರ ನೆಲೆಗಳ ಮೇಲೆ ದಾಳಿ ನಡೆಸಿತ್ತು. ಸಿಂದೂ ನದಿ ನೀರು ಒಪ್ಪಂದ ರದ್ದುಗೊಳಿಸಿದ ಪರಿಣಾಮ ಪಾಕಿಸ್ತಾನಕ್ಕೆ ಭಾರತದಿಂದ ನದಿ ನೀರಿನ ಪ್ರವಾಹದ ಬಗ್ಗೆ ಮಾಹಿತಿ ಲಭ್ಯವಾಗುತ್ತಿರಲಿಲ್ಲ. ಆದರೆ ಬದಲಾದ ಪರಿಸ್ಥಿತಿಯಲ್ಲಿ ಭಾನುವಾರ ಸೌಹಾರ್ದ ಸೂಚಕವಾಗಿ ಇಸ್ಲಾಮಾಬಾದ್‌ಗೆ ತಾವಿ ನದಿಯಲ್ಲಿನ ಪ್ರವಾಹ ಪರಿಸ್ಥಿತಿಯ ಬಗ್ಗೆ ಎಚ್ಚರಿಕೆ ನೀಡಿದೆ ಎಂದು ವರದಿಯಾಗಿದೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಸಾಮಾನ್ಯ ಸಿಂಧೂ ಜಲ ಒಪ್ಪಂದ (ಐಡಬ್ಲ್ಯೂಟಿ) ಚಾನೆಲ್ ಸ್ಥಗಿತಗೊಂಡಿರುವುದರಿಂದ ಇಸ್ಲಾಮಾಬಾದ್‌ನಲ್ಲಿರುವ ಭಾರತೀಯ ಹೈಕಮಿಷನ್ ಮೂಲಕ ಮಾಹಿತಿಯನ್ನು ರವಾನಿಸಲಾಗಿದೆ ಎಂದು ಪಾಕಿಸ್ತಾನಿ ಮಾಧ್ಯಮಗಳು ಅಧಿಕೃತ ಮೂಲಗಳನ್ನು ಉಲ್ಲೇಖಿಸಿ ವರದಿ ಮಾಡಿವೆ.

ಭಾರತ ಅಥವಾ ಪಾಕಿಸ್ತಾನದಿಂದ ಈ ಬೆಳವಣಿಗೆಯ ಬಗ್ಗೆ ಯಾವುದೇ ಅಧಿಕೃತ ದೃಢೀಕರಣ ಬಂದಿಲ್ಲ, ಆದರೆ ಹೇಳಿಕೆಗಳು ನಿಜವಾಗಿದ್ದರೆ, ಅಂತಹ ಮಾಹಿತಿಯನ್ನು ತಿಳಿಸಲು ಭಾರತ ತನ್ನ ರಾಜತಾಂತ್ರಿಕ ಕಾರ್ಯಾಚರಣೆಯನ್ನು ಬಳಸಿದ ಮೊದಲ ಪ್ರಕರಣ ಇದಾಗಿದೆ ಎಂದು ಗುರುತಿಸಲಾಗಿದೆ.

# ಚಿತ್ರರಂಗವನ್ನು 70 ವರ್ಷ ಆಳಿದವರು ಬಿ.ಸರೋಜಾದೇವಿ: ಡಾ. ಜೆಪಿಕೆ



**ಚಿಕ್ಕಮಗಳೂರು:** ಸುದೀರ್ಘ ಎಪ್ಪತ್ತು ವರ್ಷಗಳ ಕಾಲ ತಮ್ಮ ವಿಶೇಷ ಅಭಿನಯದ ಮೂಲಕ ಚಲನಚಿತ್ರ ರಂಗವನ್ನು ಆಳಿ ಜನಮನವನ್ನು ಗೆದ್ದವರು ಬಿ.ಸರೋಜಾದೇವಿ ಎಂದು ಸುಗಮ ಸಂಗೀತಗಂಗಾದ ಅಧ್ಯಕ್ಷ, ಮಕ್ಕಳ ತಜ್ಞ ಡಾ. ಜೆ.ಪಿ.ಕೃಷ್ಣೇಗೌಡ ಬಣ್ಣಿಸಿದರು.

ನಗರದ ಎಂ.ಇ.ಎಸ್. ಕಾಲೇಜು ಸಭಾಂಗಣದಲ್ಲಿ ಪೂರ್ವಿ ಸುಗಮ ಸಂಗೀತ ಅಕಾಡೆಮಿ ಟ್ರಸ್ಟ್, ಯುರೇಕಾ ಅಕಾಡೆಮಿ, ಲಯನ್ಸ್ ಸಂಸ್ಥೆ ಹಾಗೂ ಮಲೆನಾಡು ವಿದ್ಯಾಸಂಸ್ಥೆಯ ಸಹಭಾಗಿತ್ವದಲ್ಲಿ ಖ್ಯಾತ ನಟಿ ಬಿ.ಸರೋಜಾದೇವಿ ನಟನೆಯ ಚಿತ್ರಗೀತೆಗಳ ಗಾಯನ ಕಾರ್ಯಕ್ರಮ ಪೂರ್ವಿ ಗಾನಯಾನ–110 ಉದ್ಘಾಟಿಸಿ ಅವರು ಮಾತನಾಡಿದರು,

87 ವರ್ಷಗಳ ಕಾಲ ಬದುಕಿದ್ದ ಅವರು, ಕನ್ನಡಕ್ಕೆ ಅಪಾರ ಕೊಡುಗೆಯನ್ನು ನೀಡಿದ್ದವರು. ದೇಶಕಂಡ ಅಪರೂಪದ ಮಹಾನ್ ಕಲಾವಿದೆ. ಪದ್ಮಶ್ರೀ, ಪದ್ಮಭೂಷಣ ಮತ್ತು ಜೀವಮಾನ ಸಾಧನೆಯ ಪ್ರಶಸ್ತಿ ಮಾತ್ರವಲ್ಲದೆ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿಗಳಿಗೆ ಅವರು ಭಾಜನರಾಗಿದ್ದರು.


ಸರೋಜಾದೇವಿ ಕನ್ನಡ ಮಾತ್ರವಲ್ಲ, ತಮಿಳು, ತೆಲುಗು, ಹಿಂದಿ ಚಿತ್ರಗಳಲ್ಲಿ ಸಹ ತಮ್ಮ ನಟನಾ ಕೌಶಲ್ಯ ಪ್ರದರ್ಶಿಸಿದ್ದಾರೆ. ಪತಿ ಹರ್ಷ ಅವರನ್ನು ಕಳೆದುಕೊಂಡ ಬಳಿಕ ಒಂದು ವರ್ಷ ಮೌನಕ್ಕೆ ಶರಣಾಗಿದ್ದ ಅವರು, ಜನರ ಅಪೇಕ್ಷೆಯ ಮೇರೆಗೆ ಹಾಗೂ ಚಿತ್ರರಂಗದ ಪ್ರಮುಖರ ಒತ್ತಾಯದ ಮೇರೆಗೆ ಮತ್ತೆ ಚಿತ್ರರಂಗದಲ್ಲಿ ಮುಂದುವರಿದಿದ್ದರು. ಎಂ.ಜಿ.ಆರ್., ಶಿವಾಜಿ ಗಣೇಶನ್, ಜೆಮಿನಿ ಗಣೇಶನ್, ತೆಲುಗಿನಲ್ಲಿ ಎನ್.ಟಿ. ರಾಮರಾವ್, ನಾಗೇಶ್ವರರಾವ್ ಅವರಂತಹ ದಿಗ್ಗಜರ ಜೊತೆ ಅಭಿನಯಿಸಿದ್ದರು. ಕನ್ನಡ ಸಿನಿಮಾಗಳಲ್ಲಿ ಅವರ ನಟನೆಯಂತೂ ಅದ್ಭುತವಾದುದು ಎಂದು ಅವರು ಹೇಳಿದರು.

ಲಯನ್ಸ್ ಸಂಸ್ಥೆಯ ಪ್ರಾಂತೀಯ ಅಧ್ಯಕ್ಷ ಬಿ.ಎನ್.ವೆಂಕಟೇಶ್ ಮಾತನಾಡಿ, ಬಿ.ಸರೋಜಾದೇವಿಯವರು ಚಿತ್ರರಂಗದಲ್ಲಿ ಅತ್ಯಂತ ಹೆಸರುವಾಸಿಯಾದ ನಟಿಯಾಗಿದ್ದು, ಅವರ ಅಭಿನಯದ ಗೀತೆಗಳ ಮೂಲಕ ನಾವಿಂದು ರಂಜನೆ ಪಡೆಯಲಿದ್ದೇವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಯುರೇಕಾ ಅಕಾಡೆಮಿ ಸಂಸ್ಥಾಪಕ ದೀಪಕ್ ದೊಡ್ಡಯ್ಯ ಮಾತನಾಡಿ, ಬಿ.ಸರೋಜಾದೇವಿಯವರು ಈ ನಾಡುಕಂಡಂತ ಅತ್ಯದ್ಭುತ ನಟಿ. ಬದುಕಿದವರೆ ಸರೋಜಾದೇವಿಯವರಂತೆ ಬದುಕಬೇಕು. ನಮ್ಮ ಜೀವಿತಾವಧಿಯಲ್ಲಿ ನಮ್ಮ ಬಗ್ಗೆ ಉತ್ತಮ ಹೆಸರು ಉಳಿಸಿಕೊಂಡು ನಾವು ಸತ್ತ ಮೇಲೂ ಜನರು ನಮ್ಮನ್ನು ನೆನೆಯುವಂತಿರಬೇಕು. ಈ ನಿಟ್ಟಿನಲ್ಲಿ ಎಂ.ಎಸ್.ಸುಧೀರ್ ನೇತೃತ್ವದ ತಂಡ ಗಾಯನವನ್ನು 110ನೇ ಸರಣಿಯಲ್ಲಿ ಮುಂದುವರಿಸುತ್ತಿರುವುದು ವಿಶೇಷ ಎಂದರು.

ಪೂರ್ವಿ ಸುಗಮ ಸಂಗೀತ ಅಕಾಡೆಮಿ ಟ್ರಸ್ಟ್‌ನ ಅಧ್ಯಕ್ಷ ಎಂ.ಎಸ್.ಸುಧೀರ್ ಸ್ವಾಗತಿಸಿದರು. ರೂಪ ನಾಯ್ಕ್ ವಂದಿಸಿದರು. ಸುಮಾ ಪ್ರಸಾದ್ ಕಾರ್ಯಕ್ರಮ ನಿರೂಪಿಸಿದರು. ಅನಂತರ ಎಂ.ಎಸ್.ಸುಧೀರ್ ಸಾರಥ್ಯದಲ್ಲಿ ನಡೆದ ಗಾಯನದಲ್ಲಿ ಚೇತನ್‌ರಾಮ್, ಶ್ರೀಕಾಂತ್, ರೂಪ ಅಶ್ವಿನ್, ಅನುಷ, ರುಕ್ಸಾನಾಕಾಚೂರ್, ಮೇಘ, ಚೈತನ್ಯ, ಪೃಥ್ವಿಶ್ರೀ ಹಾಗೂ ಅದ್ವಿತ್‌ದೇಶ್ ಬಿ.ಸರೋಜಾದೇವಿ ನಟನೆಯ ಚಿತ್ರಗೀತೆಗಳಿಗೆ ಧ್ವನಿಯಾಗಿ ಸಂಗೀತ ಸುಧೆ ಹರಿಸಿದರು.

# ರಾಜ್ಯದಲ್ಲೇ ಸೊಸೈಟಿ ಮೂರನೇ ಸ್ಥಾನದಲ್ಲಿದೆ : ವೇಣುಗೋಪಾಲ್



**ಚಿಕ್ಕಮಗಳೂರು:** ಶತಮಾನ ಪೂರೈಸಿ ರಾಜ್ಯದಲ್ಲೇ ಮೂರನೇ ಸ್ಥಾನ ಪಡೆದುಕೊಂಡಿರುವ ಸೊಸೈಟಿಯಲ್ಲಿ ಆನ್‌ಲೈನ್ ವ್ಯವಸ್ಥೆ ಜಾರಿಗೊಳಿಸಿ ಸದಸ್ಯರಿಗೆ ಉತ್ತಮ ಸೇವೆಯನ್ನು ಒದಗಿಸಲಾಗುತ್ತಿದೆ ಎಂದು ಚಿಕ್ಕಮಗಳೂರು ಟೌನ್ ಕೋ–ಆಪರೇಟಿವ್ ಸೊಸೈಟಿ ಅಧ್ಯಕ್ಷ ವರಸಿದ್ದಿ ವೇಣುಗೋಪಾಲ್ ಹೇಳಿದರು.

ನಗರದ ಎಂ.ಜಿ.ರಸ್ತೆಯ ಸೊಸೈಟಿ ಸಭಾಂಗಣದಲ್ಲಿ 2024–25ನೇ ಸಾಲಿನ ಸರ್ವಸದಸ್ಯರ 94ನೇ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳೆದ 116 ವರ್ಷಗಳಿಂದ ಸತತವಾಗಿ ಸದಸ್ಯರ ಬಂಧುಗಳಿಗೆ ಸೇವೆಯನ್ನು ನಿರಂತರವಾಗಿ ಸೊಸೈಟಿ ಮಾಡುತ್ತಿದೆ. ಒಟ್ಟು 4266 ಷೇರುದಾರರಿದ್ದು 500 ರೂ.ಗಳ ಷೇರುಧನದಂತೆ ಹಾಗೂ ಸಾಲದ ಬಾಬ್ತು ಹೆಚ್ಚುವರಿ ಷೇರು ಮೊಬಲಗು ಹಾಗೂ ನಾಮಮಾತ್ರ ಸದಸ್ಯರಿಂದ 12800 ರೂ. ಸೇರಿ ಒಟ್ಟು 64.35 ಲಕ್ಷರೂ. ಷೇರುಧನವನ್ನು ಹೊಂದಿದೆ ಎಂದರು.

ಆಪದ್ಧನ ನಿಧಿಯಲ್ಲಿ 8.59 ಲಕ್ಷ, ಸದಸ್ಯರ ಸಾಮಾನ್ಯ ಠೇವಣಿ 31.06 ಲಕ್ಷ, ಎಫ್‌ಡಿ 5.5 ಕೋಟಿ, ಕ್ಷೇಮನಿಧಿ 6.45 ಲಕ್ಷ, ಪಿಗ್ಮಿ ಠೇವಣಿ 7.32 ಲಕ್ಷ, ಆರ್‌ಡಿ 10.02 ಲಕ್ಷ ಸೇರಿದಂತೆ ಒಟ್ಟಾರೆ 7 ಕೋಟಿ ರೂ. ಠೇವಣಿಯನ್ನು ಸೊಸೈಟಿ ಹೊಂದಿದೆ. ಸದಸ್ಯರಿಗೆ ಪ್ರಸಕ್ತ ಸಾಲಿನಲ್ಲಿ ಸುಮಾರು 1 ಕೋಟಿ ಹೆಚ್ಚು ಸಾಲ ಸೌಲಭ್ಯ ಕಲ್ಪಿಸಿ ವಸೂಲಾತಿ ಕಾರ್ಯವು ಯಶಸ್ವಿಯಾಗಿ ನಡೆದಿದೆ ಎಂದು ತಿಳಿಸಿದರು.

ಎಂ.ಜಿ.ರಸ್ತೆಯ ಮುಂಭಾಗದ ಸೊಸೈಟಿ ಜಾಗದಲ್ಲಿ ಕಳೆದ ಸಾಲಿನಲ್ಲಿ ಬೃಹತ್ ಕಟ್ಟಡವನ್ನು ನಿರ್ಮಿಸಿದ್ದು, ಇದೀಗ ಮತ್ತೊಂದು ಕಟ್ಟಡ ನಿರ್ಮಾಣಕ್ಕೆ ಉಸ್ತುವಾರಿ ಸಚಿವರಿಂದ ಚಾಲನೆ ನೀಡಲಾಗಿದೆ ಎಂದ ಅವರು, ಸದಸ್ಯ ಬಂಧುಗಳಿಗೆ ಸಂಕಷ್ಟದ ಸಮಯದಲ್ಲಿ ಆರ್ಥಿಕವಾಗಿ ಬೆನ್ನುಲುಬಾಗಿ ನಿಂತು ಸ್ಪಂದಿಸುವ ಕಾರ್ಯಕ್ಕೆ ಮುಂದಾಗಿದ್ದೇವೆ ಎಂದರು.

ಸಂಘದ ಏಳಿಗೆಗಾಗಿ ಶ್ರಮಿಸುತ್ತಿರುವ ಆಡಳಿತ ಮಂಡಳಿ, ಸಿಬ್ಬಂದಿ ವರ್ಗ ಹಾಗೂ ಸಂಘದ ವ್ಯವಹಾರದಲ್ಲಿ ತೊಡಗಿಸಿಕೊಂಡಿರುವ ಎಲ್ಲರ ಸೇವೆಯಿಂದ ರಾಜ್ಯದಲ್ಲೇ ಮೂರನೇ ಸ್ಥಾನ ಪಡೆದುಕೊಳ್ಳಲು ಸಾಧ್ಯವಾಗಿದೆ. ಮುಂದಿನ ದಿನಗಳಲ್ಲಿ ಸಂಘವು ಸದಸ್ಯರ ಸ್ನೇಹಿಯಾಗಿ ಕಾರ್ಯನಿರ್ವಹಿಸಿ ಬೆಳವಣಿಗೆಯತ್ತ ಹೆಜ್ಜೆಯಿಡಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸೊಸೈಟಿ ಉಪಾಧ್ಯಕ್ಷೆ ಎಂ.ಎಂ.ಹಾಲಮ್ಮ, ನಿರ್ದೇಶಕರುಗಳಾದ ಸಿ.ವಿ.ಕುಮಾರ್, ಎಂ.ಶ್ರೀನಿವಾಸ್, ಸಿ.ಆರ್. ಕೇಶವಮೂರ್ತಿ, ಬಿ.ಎನ್.ರಾಜಣ್ಣಶೆಟ್ಟಿ, ಸಿ.ಆರ್. ಗಂಗಾಧರ್, ಬಿ.ಎಸ್.ಪ್ರಶಾಂತ್, ಸಿ.ಡಿ.ರಘು, ಎನ್.ಈಶ್ವರಪ್ಪ, ಅಂಬಿಕಾ, ಜಯಂತಿ, ಕೆ.ಪಿ.ಪರಮೇಶ್ವರ್, ಕಾರ್ಯದರ್ಶಿ ಗಾಯತ್ರಿ ಮತ್ತು ಸಿಬ್ಬಂದಿಗಳು, ಸದಸ್ಯರು ಸೇರಿದಂತೆ ಮತ್ತಿತರರು ಹಾಜರಿದ್ದರು.

# ಶಾಶ್ವತವಲ್ಲದ ಎತ್ತಿನಹೊಳೆ ಸಂಭ್ರಮದಲ್ಲಿ ಮಿಂದೆದ್ದ ಸಚಿವರು : ಕಲ್ಮರುಡಪ್ಪ



**ಚಿಕ್ಕಮಗಳೂರು:** ಜಿಲ್ಲೆಗೆ ಶಾಶ್ವತವಲ್ಲದ ಎತ್ತಿನ ಹೊಳೆ ಯೋಜನೆ ನೀರಿನಲ್ಲಿ ರಾಜಕೀಯ ಮಾಡಲು ಹೊರಟಿರುವ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಶಾಸಕರು ಈ ಯೋಜನೆ ನೀರನ್ನು ಜಿಲ್ಲೆಗೆ ಖಾಯಂಗೊಳಿಸಲು ಪ್ರಯತ್ನಿಸಲಿ ಎಂದು ರಾಜ್ಯ ಬಿಜೆಪಿ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಕಲ್ಮರುಡಪ್ಪ ಆಗ್ರಹಿಸಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಎತ್ತಿನ ಹೊಳೆ ನೀರನ್ನು ಪ್ರಾಯೋಗಿಕವಾಗಿ ಎತ್ತಿ ನಾಲೆಗಳಿಗೆ ಬಿಡಬೇಕಾಗಿತ್ತು. ಆದರೆ ನಾಲೆಗಳ ಕಾಮಗಾರಿ ನಡೆಯದೆ ಇರುವುದರಿಂದ ಈ ನೀರನ್ನು ಮೂಲ ಯೋಜನೆಯಲ್ಲಿರದ ಬೆಳವಾಡಿ ಮತ್ತು ದೇವನೂರು ಕೆರೆಗಳಿಗೆ ಹರಿಸಲಾಗುತ್ತಿದೆ ಎಂದು ಹೇಳಿದರು.

ಈ ನೀರನ್ನು ಶಾಶ್ವತವಾಗಿ ಈ ಭಾಗದ ಕೆರೆಗಳಿಗೆ ಹರಿಸಿ ಸಚಿವರು ತಮ್ಮ ಬದ್ಧತೆಯನ್ನು ಪ್ರದರ್ಶನ ಮಾಡಬೇಕೆ ವಿನಾ ಸುಳ್ಳು ಹೇಳಿ ರೈತರನ್ನು ದಾರಿ ತಪ್ಪಿಸುವ ಕೆಲಸ ಮಾಡಬಾರದು. ಬಿಜೆಪಿ ಅಧಿಕಾರದಲ್ಲಿದ್ದಾಗ ಆರಂಭಿಸಿದ ರಣಘಟ್ಟ ಯೋಜನೆ ಅಂತಿಮ ಹಂತದಲ್ಲಿದ್ದು ಅದನ್ನು ಶೀಘ್ರವಾಗಿ ಪೂರ್ಣಗೊಳಿಸಿ ಬದ್ಧತೆ ತೋರಲಿ ಎಂದು ಒತ್ತಾಯಿಸಿದರು.

ಜಿಲ್ಲಾ ಸಚಿವರು ಬಿಜೆಪಿಯವರಿಗೆ ಮಾಹಿತಿ ಕೊರತೆ ಇದೆ ಎಂದು ಹೇಳಿದ್ದಾರೆ. ಜಿಲ್ಲೆಯಲ್ಲಿ ಒಂದೇ ಒಂದು ಮನೆ, ನಿವೇಶನ ನೀಡಿಲ್ಲ, ಬಿಪಿಎಲ್ ಕಾರ್ಡ್ ನೀಡಿಲ್ಲ, ನಮೂನೆ 50,53, 57 ರಡಿ ಭೂಮಿ ಹಕ್ಕು ನೀಡಿಲ್ಲ ಎಂದು ನಾವು ಆರೋಪಿಸಿದ್ದೆವು. ಆದರೆ, ಸಚಿವರು ಈ ಪ್ರಶ್ನೆಗಳಿಗೆ ಉತ್ತರಿಸುವಲ್ಲಿ ವಿಫಲರಾಗಿದ್ದಾರೆ ಎಂದು ದೂರಿದರು.

ನಮ್ಮ ಸರಕಾರ ಇದ್ದಾಗ ಭದ್ರಾ ಉಪಕಣಿವೆ ಯೋಜನೆಯಲ್ಲಿ 197 ಕೆರೆಗಳಿಗೆ ಅಂದಾಜು 1181.80 ಕೋಟಿ ರೂ. ಮಂಜೂರು ಮಾಡಿಸಿ ಕಡೂರು, ತರೀಕೆರೆ ಮತ್ತು ಚಿಕ್ಕಮಗಳೂರು ತಾಲೂಕಿನ ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು ಮಂಜೂರು ಮಾಡಿಸಿ ಮೊದಲ ಹಂತದ ಕಾಮಗಾರಿ ಮುಗಿದಿದೆ. 2ನೇ ಹಂತದ ಕಾಮಗಾರಿ ಕುಂಟುತ್ತಾ ಸಾಗಿದೆ. ಅದಕ್ಕೆ ಬೇಗ ಹಣ ಮಂಜೂರು ಮಾಡಿಸಿ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಸಚಿವರು ಮತ್ತು ಶಾಸಕರು ಇಚ್ಛಾಶಕ್ತಿ ತೋರಬೇಕು ಎಂದು ಆಗ್ರಹಿಸಿದರು.

ಮೊನ್ನೆ ಬೆಳವಾಡಿ ಕೆರೆಗೆ ಬಾಗಿನ ಬಿಟ್ಟು ಕಾರ್ಯಕ್ರಮ ಜಿಲ್ಲಾಡಳಿತ ಆಯೋಜಿಸಿದ್ದೋ ಅಥವಾ ಕಾಂಗ್ರೆಸ್ ಆಯೋಜಿಸಿದ್ದೋ ಎಂಬುದನ್ನು ಜಿಲ್ಲಾಧಿಕಾರಿಗಳು ಸ್ಪಷ್ಟಪಡಿಸಬೇಕಿದೆ. ಜಿಲ್ಲಾಡಳಿತ ಆಯೋಜಿಸಿದ್ದರೆ ಕಾಂಗ್ರೆಸ್ ಕಾರ್ಯಕತರು ವೇದಿಕೆ ಹಂಚಿಕೊಂಡಿದ್ದು ಏಕೆ ಎಂದು ಪ್ರಶ್ನಿಸಿದ ಅವರು, ಕಾಂಗ್ರೆಸ್ ಆಯೋಜಿಸಿದ್ದರೆ ಅಧಿಕಾರಿಗಳು ವೇದಿಕೆ ಮೇಲೆ ಕೂತಿದ್ದೇಕೆ ಎಂಬುದನ್ನು ಅವರು ಸ್ಪಷ್ಟಪಡಿಸಲಿ ಎಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ವಿಜಯ್‌ಕುಮಾರ್, ಹಿರೇಮಗಳೂರುಪುಟ್ಟಸ್ವಾಮಿ, ದಿನೇಶ್‌ಕೋಟೆ, ಸಚಿನ್‌ಗೌಡ, ಕೇಶವ್ ಇದ್ದರು.

# ಫಿಟ್ನೆಸ್ ಸೆಂಟರ್‌ನ 3ನೇ ಅಂತಸ್ತಿನಿಂದ ಬಿದ್ದು ಯುವತಿ ಸಾವು



**ಬೆಂಗಳೂರು:** ಬೆಂಗಳೂರು ಉತ್ತರ ತಾಲೂಕಿನ ಕಡಬಗೆರೆಯಲ್ಲಿ ಫಿಟ್ನೆಸ್ ಸೆಂಟರ್ ಒಂದರಲ್ಲಿ ರಿಸೆಪ್ಷನಿಸ್ಟ್ ಆಗಿ ಕೆಲಸ ಮಾಡುತ್ತಿದ್ದ ಯುವತಿಯೊಬ್ಬಳು ಮೂರನೇ ಅಂತಸ್ತಿನಿಂದ ಕೆಳಗೆ ಬಿದ್ದು ಸಾವನ್ನಪ್ಪಿದ್ದಾಳೆ. 20 ವರ್ಷದ ರಿಸೆಪ್ಷನಿಸ್ಟ್ ರಕ್ಷಿತಾ ಮೃತ ದುರ್ದೈವಿ. ಕಳೆದ ಎಂಟು ತಿಂಗಳಿನಿಂದ ರಕ್ಷಿತಾ ಜುನಿಫರ್ ಫಿಟ್ನೆಸ್ ಸೆಂಟರ್‌ನಲ್ಲಿ ರಿಸೆಪ್ಷನಿಸ್ಟ್ ಆಗಿ ಕೆಲಸ ಮಾಡುತ್ತಿದ್ದರು. ಫಿಟ್ನೆಸ್ ಸೆಂಟರ್‌ನ ಮೂರನೇ ಮಹಡಿಗೆ ಹೋಗಿ ಅಲ್ಲಿಂದ ಬಿದ್ದು ಮೃತಪಟ್ಟಿದ್ದಾರೆ. ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಆಗಿದೆ.

# ಕೇರಳಕ್ಕೆ ಯೂರಿಯಾ ಗೊಬ್ಬರ ಅಕ್ರಮ ಸಾಗಣೆ: ಬಂಡೀಪುರ ಚೆಕ್‌ಪೋಸ್ಟ್‌ನಲ್ಲಿ ಲಾರಿ ವಶ

**ಮೈಸೂರು:** ರಾಜ್ಯದ ರೈತರು ರಸಗೊಬ್ಬರ ಕೊರತೆ ಅನುಭವಿಸುತ್ತಿದ್ದಾರೆ, ಇದೇ ವೇಳೆ ಅಕ್ರಮವಾಗಿ ನೆರೆಯ ಕೇರಳಕ್ಕೆ ಯೂರಿಯಾ ರಸಗೊಬ್ಬರ ಸಾಗಣೆ ಮಾಡುತ್ತಿದ್ದ ಲಾರಿಯನ್ನು ಕೃಷಿ ಇಲಾಖೆ ಅಧಿಕಾರಿಗಳು ದಾಳಿ ನಡೆಸಿ ವಶಕ್ಕೆ ಪಡೆದಿರುವ ಘಟನೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮೂಲೆಹೊಳೆ ಚೆಕ್ ಪೋಸ್ಟ್‌ನಲ್ಲಿ ನಡೆದಿದೆ.

ನಂಜಗೂಡಿನ ಗೋಧಾಮಿನಿಂದ ಯೂರಿಯಾ ರಸಗೊಬ್ಬರ ತುಂಬಿಕೊಂಡು ಕೇರಳಕ್ಕೆ ಅಕ್ರಮವಾಗಿ ಸಾಗಣೆ ಮಾಡುತ್ತಿರುವ ಕುರಿತು ಬಂದ ಖಚಿತ ಮಾಹಿತಿ ಮೇರೆಗೆ ಕೃಷಿ ಇಲಾಖೆ ಅಧಿಕಾರಿಗಳು ಪೊಲೀಸರ ಸಹಕಾರದೊಂದಿಗೆ ದಾಳಿ ನಡೆಸಿ ಮೂಲೆಹೊಳೆ ಚೆಕ್ ಪೋಸ್ಟ್ ಬಳಿ ಕೇರಳ ನೋಂದಣಿಯ ಕೆ.ಎಲ್-73, ಡಿ-1699 ಲಾರಿಯನ್ನು ತಡೆದು ಪರಿಶೀಲನೆ ನಡೆಸಿದ ವೇಳೆ ಅಕ್ರಮ ಬೆಳಕಿಗೆ ಬಂದಿದೆ.

ಚೆಕ್‌ಪೋಸ್ಟ್ ಬಳಿ ಕೇರಳ ನೋಂದಣಿಯಾದ ಟ್ರಕ್ ಅನ್ನು ಅಧಿಕಾರಿಗಳು ತಡೆದಿದ್ದಾರೆ. ಪರಿಶೀಲನೆಯ ಸಮಯದಲ್ಲಿ, ಸುಮಾರು 300 ಚೀಲಗಳಷ್ಟು ಯೂರಿಯಾ ಗೊಬ್ಬರವನ್ನು, ಕೆಲವು ಟನ್‌ಗಳಷ್ಟು, ಸರಿಯಾದ ಅನುಮತಿಯಿಲ್ಲದೆ ಸಾಗಿಸಲಾಗುತ್ತಿರುವುದು ಕಂಡುಬಂದಿದೆ.

ಲಾರಿಯಲ್ಲಿ ಸುಮಾರು 15 ಟನ್‌ನಷ್ಟು 300 ರಿಂದ 330 ಚೀಲ ಯೂರಿಯಾ ಇದ್ದು, ಸಾಗಣೆದಾರರ ವಿರುದ್ಧ ಕೇಸು ದಾಖಲಿಸಿ ಮುಂದಿನ ಕ್ರಮ ಕೈಗೊಳ್ಳುವಂತೆ ಯೂ-ರಿಯಾ ತುಂಬಿದ ಲಾರಿಯನ್ನು ಪೊಲೀಸರ ವಶಕ್ಕೆ ನೀಡಲಾಗಿದೆ ಎಂದು ಕೃಷಿ ಅಧಿಕಾರಿ ಕಿರಣ್ ಕುಮಾರ್ ಮಾಹಿತಿ ನೀಡಿದ್ದಾರೆ.

ಈ ಸಂಬಂಧ ಕೃಷಿ ಇಲಾಖೆ ಸಹಾಯಕ ನಿರ್ದೇಶಕರಾದ ಶಶಿಧರ್ ಪ್ರತಿಕ್ರಯೆ ನೀಡಿ, ತಾಲೂಕಿನಲ್ಲಿ ಭತ್ತ ಇತರೆ ನೀರಾವರಿ ಬೆಳೆಗಳ ಪ್ರಮಾಣ ಕಡಿಮೆ ಇರುವ ಹಿನ್ನೆಲೆಯಲ್ಲಿ ರೈತರಿಗೆ ಯೂರಿಯಾ ಕೊರತೆ ಇಲ್ಲ. ಆದರೆ ಯೂರಿಯಾ ಅಂತರಾಜ್ಯ ಸಾಗಣೆಗೆ ಅವಕಾಶವಿಲ್ಲದಿದ್ದರೂ ಅಕ್ರಮವಾಗಿ ಸಾಗಿಸುತ್ತಿದ್ದ ಹಿನ್ನೆಲೆಯಲ್ಲಿ ದಾಳಿ ನಡೆಸಿ ವಶಕ್ಕೆ ಪಡೆಯಲಾಗಿದೆ ಎಂದು ತಿಳಿಸಿದರು.

ದಾಳಿಯಲ್ಲಿ ಕೃಷಿ ನಿರ್ದೇಶಕ ಶಶಿಧರ್, ಸಹಾಯಕ ಕೃಷಿ ನಿರ್ದೇಶಕ ಜಾರಿದಳ ರಮೇಶ್, ಕೃಷಿ ಅಧಿಕಾರಿ ಕಿರಣ್ ಕುಮಾರ್, ಸಿಬ್ಬಂದಿ ಕುಮಾರ್, ಸ್ವಾಮಿ, ಗಣೇಶ್, ಶರಣ್ ಸೇರಿದಂತೆ ಪೊಲೀಸ್ ಇಲಾಖೆ ಅಧಿಕಾರಿಗಳು ಹಾಜರಿದ್ದರು.

# ನಿರುದ್ಯೋಗಿ ಪತಿ ಲೇವಡಿ ಮಾನಸಿಕ ಹಿಂಸೆಗೆ ಸಮ

**ರಾಯಪುರ:** ಹಣಕಾಸು ಸಂಕಷ್ಟದ ಸಂದರ್ಭದಲ್ಲಿ ನಿರುದ್ಯೋಗಿ ಪತಿಯನ್ನು ಅಣಕಿಸುವುದು ಅಥವಾ ಲೇವಡಿ ಮಾಡುವುದು ಮಾನಸಿಕ ಹಿಂಸೆಯಾಗಿ ಪರಿಗಣಿಸಲ್ಪಡುತ್ತದೆ ಎಂದು ಛತ್ತೀಸ್‌ಘಡ ಹೈಕೋರ್ಟ್ ತೀರ್ಪು ನೀಡಿದೆ.

ಈ ಪ್ರಕರಣದಲ್ಲಿ ಪತಿ ಮತ್ತು ಮಗನನ್ನು ಯಾವುದೇ ಕಾರಣವಿಲ್ಲದೇ ಬಿಟ್ಟುಹೋದ, ಹಣಕಾಸು ಸಂಕಷ್ಟದ ಸಂದರ್ಭದಲ್ಲಿ ಪರಿಯನ್ನು ಅಣಕಿಸಿದ ಮತ್ತು ವಿಚಾರಣೆಗಳಿಗೆ ಹಾಜರಾಗದ ಪತ್ನಿಯ ನಡತೆ ಹಿಂದೂ ವಿವಾಹ ಕಾಯ್ದೆ-1955ರ ಅಡಿಯಲ್ಲಿ ಹಿಂಸೆ ಮತ್ತು ಪರಿತ್ಯಾಗ ಎಂದು ಪರಿಗಣಿಸಲ್ಪಡುತ್ತದೆ ಎಂದು ಅಭಿಪ್ರಾಯಪಟ್ಟಿದೆ.

ಈ ದಂಪತಿ 1996ರ ಡಿಸೆಂಬರ್ 26ರಂದು ಭಿಲಾಯಿಯಲ್ಲಿ ವಿವಾಹಬಂಧನಕ್ಕೆ ಒಳಗಾಗಿದ್ದರು. ಇವರಿಗೆ 19 ವರ್ಷದ ಪುತ್ರಿ ಮತ್ತು 16 ವರ್ಷದ ಪುತ್ರ ಇದ್ದಾರೆ.

ಪತ್ನಿ ಪಿಎಚ್‌ಡಿ ಪದವಿ ಪಡೆಯಲು ಪತಿ ನೆರವಾಗಿರುವುದು ಮತ್ತು ಶಾಲೆಯೊಂದರ ಪ್ರಾಂಶುಪಾಲೆ ಹುದ್ದೆ ಪಡೆಯಲು ನೆರವಾಗಿರುವುದನ್ನು ನ್ಯಾಯಾಲಯದ ದಾಖಲೆಯಲ್ಲಿ ಉಲ್ಲೇಖಿಸಲಾಗಿದೆ. ಕೋವಿಡ್-19 ಸಾಂಕ್ರಾಮಿಕದ ಸಂದರ್ಭದಲ್ಲಿ ನ್ಯಾಯಾಲಯಗಳು ಮುಚ್ಚಲ್ಪಟ್ಟು, ವಕೀಲ ಪತಿಗೆ ಆದಾಯ ಇಲ್ಲದ ಸಂದರ್ಭದಲ್ಲಿ ಸಣ್ಣ ಪುಟ್ಟ ವಿಷಯಗಳಿಗೂ ಜಗಳವಾಡಿ ಗಂಡನನ್ನು ಲೇವಡಿ ಮಾಡುತ್ತಿದ್ದಳು ಎಂದು ಪತಿಯ ಪರ ವಕೀಲರು ವಾದ ಮಂಡಿಸಿದ್ದರು.

# ಪರಿಸರ ಮಂಡಳಿಗಳು ದಂಡ ವಿಧಿಸಬಹುದು : ಸುಪ್ರೀಂ ಕೋರ್ಟ್

**ನವದೆಹಲಿ :** ಪರಿಸರ ಹಾನಿಗಾಗಿ ದಂಡ ವಿಧಿಸುವ ಅಧಿಕಾರ ಮಾಲಿನ್ಯ ನಿಯಂತ್ರಣ ಮಂಡಳಿಗಳಿಗೆ ಇದೆ ಎಂದು ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ. ಪರಿಸರ ಮಾಲಿನ್ಯ ತಡೆ ಮತ್ತು ಪರಿಹಾರಗಳು ಪರಿಸರ ಆಡಳಿತದ ಮುಖ್ಯ ಭಾಗವಾಗಿವೆ ಎಂದು ನ್ಯಾಯಮೂರ್ತಿಗಳಾದ ಪಿ.ಎಸ್. ನರಸಿಂಹ ಮತ್ತು ಮನೋಜ್ ಮಿಶ್ರಾ ಅವರನ್ನು ಒಳಗೊಂಡ ಪೀಠ ತಿಳಿಸಿದೆ.

ಜಲ ಕಾಯ್ದೆ ಮತ್ತು ವಾಯು ಕಾಯ್ದೆಯ ಅನ್ವಯ, ಮಾಲಿನ್ಯ ನಿಯಂತ್ರಣ ಮಂಡಳಿಗಳು ವಾಸ್ತವಿಕವಾಗಿ ಆಗಿರುವ ಮತ್ತು ಸಂಭವನೀಯ ಪರಿಸರ ಹಾನಿಗೆ ದಂಡ ವಿಧಿಸುವ ಸಂವಿಧಾನಿಕ ಅಧಿಕಾರ ಹೊಂದಿವೆ ಎಂದು ಪೀಠ ಹೇಳಿದೆ.

ಪರಿಸರ ಮಾಲಿನ್ಯ ನಿವಾರಣೆ ಮತ್ತು ತಡೆಯ ಉದ್ದೇಶದಿಂದ, ಹಣದ ರೂಪದಲ್ಲಿ ಅಥವಾ ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ದಂಡ ವಿಧಿಸಲು ಅವಕಾಶವಿದೆ ಎಂದು ಪೀಠದ ಪರವಾಗಿ ತೀರ್ಪು ಬರೆದಿರುವ ನ್ಯಾಯಮೂರ್ತಿ ನರಸಿಂಹ ಹೇಳಿದ್ದಾರೆ. ಆದರೆ, ಈ ದಂಡಗಳು ಅಪರಾಧಿಕ ದಂಡಗಳಿಗಿಂತ ಭಿನ್ನವಾಗಿರುತ್ತವೆ. ಇವು ಸಿವಿಲ್ ಸ್ವರೂಪದವು ಮತ್ತು ಪರಿಸರ ಮಾಲಿನ್ಯ ತಡೆಯುವ ಉದ್ದೇಶ ಹೊಂದಿವೆ. ಉಲ್ಲಂಘಿಸಿದವರಿಗೆ ಶಿಕ್ಷೆ ವಿಧಿಸುವ ಸ್ವರೂಪದವು ಅಲ್ಲ ಎಂದು ಪೀಠ ಸ್ಪಷ್ಟಪಡಿಸಿದೆ.

# ಉತ್ತರಾಖಂಡ: ವಿನಾಶಕಾರಿ ಮೇಘಸ್ಫೋಟದಿಂದ ನಾಲ್ವರ ಸಾವು
## 9 ಸೇನಾ ಸಿಬ್ಬಂದಿ ಸೇರಿದಂತೆ 59ಕ್ಕೂ ಹೆಚ್ಚು ಮಂದಿ ಕಣ್ಮರೆ!

**ಉತ್ತರಕಾಶಿ:** ಉತ್ತರಕಾಶಿ ಜಿಲ್ಲೆಯ ಧರಾಲಿ ಪ್ರದೇಶದಲ್ಲಿ ಮಂಗಳವಾರ ಮಧ್ಯಾಹ್ನ ಮೂರು ಗಂಟೆಗಳ ಅವಧಿಯಲ್ಲಿ ಮೂರು ಬಾರಿ ಮೇಘಸ್ಫೋಟವಾಗಿದ್ದು, ಭಾರಿ ಪ್ರವಾಹದಿಂದಾಗಿ ನಾಲ್ವರು ಸಾವನ್ನಪ್ಪಿದ್ದಾರೆ. ಒಂಬತ್ತು ಸೇನಾ ಸಿಬ್ಬಂದಿ ಸೇರಿದಂತೆ 59 ಕ್ಕೂ ಹೆಚ್ಚು ಮಂದಿ ಕಣ್ಮರೆಯಾಗಿದ್ದಾರೆ. ಭಾರತೀಯ ಸೇನೆ ಮತ್ತು ಪರಿಹಾರ ತಂಡಗಳಿಂದ ಬೃಹತ್ ಜಂಟಿ ರಕ್ಷಣಾ ಕಾರ್ಯಾಚರಣೆ ನಡೆಸಲಾಗಿದೆ.



ಸುದ್ದಿಗಾರರಯೊಂದಿಗೆ ಮಾತನಾಡಿದ ರಕ್ಷಣಾ ಲೆಫ್ಟಿನೆಂಟ್ ಕರ್ನಲ್ ಮನೀಶ್ ಶ್ರೀವಾಸ್ತವ, ಡೆಹ್ರಾಡೂನ್ ದುರಂತದ ಪ್ರಮಾಣ ಮತ್ತು ಸೇನೆಯ ತಕ್ಷಣದ ಕಾರ್ಯಾಚರಣೆಯನ್ನು ದೃಢಪಡಿಸಿದರು.

ಖೀರ್ ಗಢ್, ಧರಾಲಿಯಲ್ಲಿ ಸಂಭವಿಸಿದ ವಿನಾಶಕಾರಿ ಮಣ್ಣಿನ ಕುಸಿತದ ಹಿನ್ನೆಲೆಯಲ್ಲಿ, 14 ಖಎಂಎಖಖಈ ನ ಕಮಾಂಡಿಂಗ್ ಆಫೀಸರ್ ಕರ್ನಲ್ ಹರ್ಷವರ್ಧನ್ ಅವರು ವೈಯಕ್ತಿಕವಾಗಿ 150 ಸಿಬ್ಬಂದಿಯನ್ನು ನಿರ್ಣಾಯಕ ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗಳಲ್ಲಿ ಮುನ್ನಡೆಸುತ್ತಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

ಆರಂಭದಲ್ಲಿ ಕಣ್ಮರೆಯಾಗಿದ್ದ 11 ಸೇನಾ ಸಿಬ್ಬಂದಿಗಳಲ್ಲಿ ಇಬ್ಬರು ಸುರಕ್ಷಿತವಾಗಿದ್ದು, ಈಗ ಚೇತರಿಸಿಕೊಳ್ಳುತ್ತಿದ್ದಾರೆ. ಇದುವರೆಗೆ 20 ನಾಗರಿಕರನ್ನು ಸಹ ರಕ್ಷಿಸಲಾಗಿದೆ. ಭರದಿಂದ ರಕ್ಷಣಾ ಕಾರ್ಯಾಚರಣೆ ಸಾಗಿದೆ. ಪ್ರತಿಕೂಲ ಹವಾಮಾನ ಮತ್ತು ಸಂಪರ್ಕ ಕಡಿತದ ಸವಾಲಿನ ನಡುವೆ ಸೇನೆಯ ಬದ್ಧತೆಯನ್ನು ಅವರು ಶ್ಲಾಘಿಸಿದ್ದಾರೆ.

ಮೊದಲ ಮೇಘಸ್ಫೋಟದಿಂದ ಧಾರಾಲಿ ಗ್ರಾಮದ ಕಡೆಗೆ ಮಣ್ಣು, ಗುಡ್ಡ ಕುಸಿತ, ಕೆಸರು ನೀರು ಹರಿಯುವುದರೊಂದಿಗೆ ಭಾರಿ ಆತಂಕ ಸೃಷ್ಟಿಯಾಯಿತು. ಜನರು ಭಯದಿಂದ ಕಿರುಚಾಡಿದರು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದರು. ಹರ್ಸಿಲ್ ಸೇನಾ ಶಿಬಿರದ ಮುಂಭಾಗದಲ್ಲಿರುವ ಹರ್ಸಿಲ್‌ನಲ್ಲಿರುವ ಸೇನಾ ಘಟಕದ ಬಳಿ ಮಂಗಳವಾರ ಸಂಜೆ ಎರಡನೇ ಮೇಘಸ್ಫೋಟ ಸಂಭವಿಸಿದೆ.

ಸುಖಿ ಟಾಪ್‌ನಲ್ಲಿ ಮೂರನೇ ಮೇಘಸ್ಫೋಟ ಸಂಭವಿಸಿದೆ. ಇದರಿಂದಾಗಿ ಸೇನಾ ಶಿಬಿರದ ಬಳಿ ತಾತ್ಕಾಲಿಕ ಸರೋವರವನ್ನೆ ಸೃಷ್ಟಿಸಿತು. ಈ ಹೊಸ ಜಲಮೂಲವು ಭಾಗೀರಥಿ ನದಿಯ ಉದ್ದಕ್ಕೂ ಇರುವ ಪಟ್ಟಣಗಳಿಗೆ ಗಮನಾರ್ಹ ಅಪಾಯವನ್ನುಂಟುಮಾಡಿದೆ. ಸುಖಿ ಟಾಪ್ ಘಟನೆಯು ಹರ್ಸಿಲ್‌ಗೆ ಹೋಗುವ ರಸ್ತೆಯನ್ನು ಬಂದ್ ಮಾಡಿದೆ.

# ಸಿದ್ದರಾಮಯ್ಯನವರೇ, ಈ ನವರಂಗಿ ಆಟ ನಿಲ್ಲಿಸಿ ರಾಜೀನಾಮೆ ನೀಡಿ ಕರ್ನಾಟಕವನ್ನು ಉಳಿಸಿ : ಆರ್.ಅಶೋಕ್

**ಬೆಂಗಳೂರು :** ಅಧಿಕಾರ ಇದ್ದಾಗ ನವರಂಗಿ ಆಟ. ವಿರೋಧ ಪಕ್ಷದಲ್ಲಿದ್ದಾಗ ಗೋಸುಂಬೆ ನಾಟಕ. ಸಾಕು ಮಾಡಿ ಈ ನಾಟಕ. ರಾಜೀನಾಮೆ ಕೊಟ್ಟು ಕರ್ನಾಟಕವನ್ನು ಉಳಿಸಿ. ಕನ್ನಡಿಗರನ್ನು ನೆಮದಿಯಾಗಿರಲು ಬಿಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ.



ಈ ಕುರಿತು ತಮ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅಶೋಕ್ ಅವರು, ಸಿಎಂ ಸಿದ್ದರಾಮಯ್ಯನವರೇ, ಅಧಿಕಾರ ಇದ್ದಾಗ ಹಗಲುವೇಷ ವಿರೋಧ ಪಕ್ಷದಲ್ಲಿದ್ದಾಗ ರೋಷಾವೇಶ. ಅಧಿಕಾರ ಯಾರಿಗೂ ಶಾಶ್ವತ ಅಲ್ಲ. ನಿಮ್ಮ ದಿವಾಳಿತನಕ್ಕೆ ಸಾರಿಗೆ ನೌಕರರು ಎಷ್ಟು ದಿನ ನಷ್ಟ ಅನುಭವಿಸಬೇಕು? ನಿಮ್ಮ ದುರಾಡಳಿತಕ್ಕೆ ಜನಸಾಮಾನ್ಯರು ಏಕೆ ದಿನನಿತ್ಯ ಪರದಾಡಬೇಕು? ಎಂದು ಸಿದ್ದರಾಮಯ್ಯ ಅವರನ್ನು ತರಾಟೆಗೆ ತೆಗದುಕೊಂಡಿದ್ದಾರೆ.

ಇನ್ನೆಷ್ಟು ದಿನ ಸ್ವಾಮಿ ಈ ಭಂಡ ಬಾಳು. ನಿಮ ಅಧಿಕಾರದ ಲಾಲಸೆಗೆ, ದುರಾಡಳಿತಕ್ಕೆ ಜನಸಾಮಾನ್ಯರು ಇನ್ನು ಯಾವ್ಯಾವ ರೀತಿ ಪರದಾಡಬೇಕು?, ಇನ್ನೆಷ್ಟು ಕಷ್ಟ ಅನುಭವಿಸಬೇಕು. ಬಸ್ಸಿಲ್ಲ..ಬಸ್ಸಿಲ್ಲ, ವಿದ್ಯಾರ್ಥಿಗಳು ಶಾಲಾ ಕಾಲೇಜುಗಳಿಗೆ ಹೋಗಲು ಬಸ್ಸಿಲ್ಲ. ನೌಕರರು, ಉದ್ಯೋಗಿಗಳು ಕೆಲಸಕ್ಕೆ ಹೋಗಲು ಬಸ್ಸಿಲ್ಲ. ನೆಂಟರಿಷ್ಟರ ಮನೆಗಳಿಗೆ, ಶುಭ ಸಮಾರಂಭಗಳಿಗೆ, ಸಾವು-ನೋವಿಗೆ ಹೋಗಲು ಬಸ್ಸಿಲ್ಲ. ಇದು ಬಹುಪಾಲು ಕನ್ನಡಿಗರ ಇಂದಿನ ಬವಣೆ ಎಂದು ವಿವರಿಸಿದ್ದಾರೆ.

ರಾಜ್ಯದ ಖಜಾನೆ ಖಾಲಿ ಮಾಡಿ ಪಾಪರ್ ಆಗಿರುವ ಕಾಂಗ್ರೆಸ್ ಸರ್ಕಾರಕ್ಕೆ ಚೆಲ್ಲಾಟ, ಜನಸಾಮಾನ್ಯರಿಗೆ ಪರದಾಟ, ಗೋಳಾಟ, ತೊಳಲಾಟ! ಸಿಎಂ ಸಿದ್ದರಾಮಯ್ಯನವರೇ, ನಿಮ ಘನಂದಾರಿ ಆಡಳಿತದಿಂದ ಸಾರಿಗೆ ನಿಗಮಗಳನ್ನು ಸರ್ವನಾಶ ಮಾಡಿಬಿಟ್ಟರಲ್ಲ ಸ್ವಾಮಿ. ಸಾರಿಗೆ ನೌಕರರ ಹಿಂಬಾಕಿ ಕೊಡಲು ದುಡ್ಡಿಲ್ಲ. ನೌಕರರ ವೇತನ ಹೆಚ್ಚಳ ಮಾಡಲು ದುಡ್ಡಿಲ್ಲ. ಹೊಸ ಬಸ್ ಖರೀದಿಗೆ ದುಡ್ಡಿಲ್ಲ. ಹಳೆ ಬಸ್‌ಗಳ ರಿಪೇರಿಗೆ ದುಡ್ಡಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ. ಸಿದ್ಧರಾಮಯ್ಯನವರೇ, ದಯವಿಟ್ಟು ರಾಜೀನಾಮೆ ಕೊಟ್ಟು ಕರ್ನಾಟಕವನ್ನು ಉಳಿಸಿ. ಕನ್ನಡಿಗರಿಗೆ ನೆಮದಿಯ ಜೀವನ ಮಾಡಲು ಬಿಡಿ ಎಂದು ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

# ಬೀದಿ ನಾಯಿಗಳ ಹಾವಳಿ, ಮಕ್ಕಳು ಸೇರಿ ಹಲವರಿಗೆ ಕಡಿತ : ಎಚ್ಚೆತ್ತ ಪಾಲಿಕೆ



**ದಾವಣಗೆರೆ:** ಹಳೇ ಕುಂದುವಾಡ ಮತ್ತು ಬೆಂಚಿಕಟ್ಟೆ ಪ್ರದೇಶದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಶಾಲೆ ಬಿಡುವ ಸಮಯದಲ್ಲಿ ಮಕ್ಕಳು ಸೇರಿ ಹಲವರ ಮೇಲೆ ದಾಳಿ ನಡೆಸಿವೆ. ಇದರಿಂದ ಜನರು ಭಯಭೀತರಾಗಿದ್ದಾರೆ.


ಸೋಮವಾರ ಸಂಜೆ ನಡೆದ ಈ ಘಟನೆಯಲ್ಲಿ ಭಾವನ (11), ಆಶಾ (8), ಕರಿಬಸಮ್ಮ (45), ಮತ್ತು ಅನಿಲ್ ಕುಮಾರ್ (36) ಸೇರಿದಂತೆ ಸುಮಾರು ಹತ್ತಕ್ಕೂ ಹೆಚ್ಚು ಜನರಿಗೆ ನಾಯಿಗಳು ಕಚ್ಚಿ ಗಾಯಗೊಳಿಸಿವೆ. ಗಾಯಾಳುಗಳನ್ನು ಚಿಗಟೇರಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಬೀದಿ ನಾಯಿಗಳ ನಿಯಂತ್ರಣಕ್ಕಾಗಿ ಈ ಹಿಂದೆ ಹಲವು ಬಾರಿ ಮಹಾನಗರ ಪಾಲಿಕೆಗೆ ಮನವಿ ಸಲ್ಲಿಸಿದ್ದರೂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದರು ಎಂದು ಸ್ಥಳೀಯರು ಆರೋಪಿಸಿದ್ದಾರೆ. ನಾವು ಹುಚ್ಚು ನಾಯಿಗಳನ್ನು ಹಿಡಿಯುವುದಿಲ್ಲ ಎಂದು ಪಾಲಿಕೆ ಅಧಿಕಾರಿಗಳು ಉಡಾಫೆಯ ಉತ್ತರ ನೀಡಿದ್ದರು. ಪಾಲಿಕೆಯ ನಿರ್ಲಕ್ಷ್ಯದಿಂದಲೇ ಪದೇ ಪದೇ ಇಂತಹ ಘಟನೆಗಳು ನಡೆಯುತ್ತಿವೆ ಎಂದು ಜನರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸ್ಥಳೀಯರ ಆಕ್ರೋಶದ ಹಿನ್ನೆಲೆಯಲ್ಲಿ ಮಂಗಳವಾರ ಹಳೇ ಕುಂದುವಾಡದಲ್ಲಿ "ಆಪರೇಷನ್ ಡಾಗ್" ಕಾರ್ಯಾಚರಣೆ ನಡೆಸಿ, 10ಕ್ಕೂ ಹೆಚ್ಚು ನಾಯಿಗಳನ್ನು ಹಿಡಿದಿದೆ. ಹಿಡಿದ ನಾಯಿಗಳಿಗೆ ರೇಬೀಸ್ ಚುಚ್ಚುಮದ್ದು ನೀಡಿದ ನಂತರ ಅವುಗಳನ್ನು ಮತ್ತೆ ಅದೇ ಸ್ಥಳಕ್ಕೆ ಬಿಡಲಾಗುವುದು ಎಂದು ಪಾಲಿಕೆ ಆರೋಗ್ಯ ನಿರೀಕ್ಷಕ ರಾಜಪ್ಪ ತಿಳಿಸಿದ್ದಾರೆ.

ನಗರಕ್ಕೆ ಸೇರಿಕೊಂಡಿರುವ ಹಳ್ಳಿಗಳಾದ ಹಳೇ ಕುಂದುವಾಡ, ಹೊಸ ಕುಂದುವಾಡ, ಆವರಗೆರೆ, ಕರೂರು ಸೇರಿದಂತೆ ಹಲವು ಪ್ರದೇಶಗಳಲ್ಲಿ ಸ್ವಚ್ಛತೆ, ಮೂಲಭೂತ ಸೌಕರ್ಯ ಮತ್ತು ಅಭಿವೃದ್ಧಿ ವಿಷಯಗಳಲ್ಲಿ ಪಾಲಿಕೆ ನಿರ್ಲಕ್ಷ್ಯ ವಹಿಸಿದೆ ಎಂದು ಸ್ಥಳೀಯ ಮಧುನಾಗರಾಜ್ ಕುಂದುವಾಡ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

# ಬೆಂಗಳೂರಿನ ಸುತ್ತಮುತ್ತಲ ಪ್ರದೇಶಗಳ ಸಮಗ್ರ ಅಭಿವೃದ್ಧಿ : ಸಿಎಂ ಸಿದ್ದರಾಮಯ್ಯ




**ಬೆಂಗಳೂರು :** ಮುಂದಿನ ನಾಲ್ಕು ವರ್ಷಗಳ ಒಳಗಾಗಿ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಬರ್‌ಬನ್ ರೈಲು ಸಂಪರ್ಕ ಕಲ್ಪಿಸುವ ಮೂಲಕ ನಗರದ ಕೇಂದ್ರ ಭಾಗದಂತೆಯೇ ಇತರ ಪ್ರದೇಶಗಳನ್ನು ಸಮಗ್ರ ಅಭಿವೃದ್ಧಿ ಪಡಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ದೇವನಹಳ್ಳಿಯಲ್ಲಿ ಲ್ಯಾಬ್ಸ್ ಇಂಡಿಯಾದ 41 ಎಕರೆ ವಿಸ್ತೀರ್ಣದ ಹೊಸ ಇನ್ನೋವೇಶನ್ ಪಾರ್ಕ್ ಉದ್ಘಾಟಿಸಿ ಮಾತನಾಡಿದ ಅವರು, ಬೆಂಗಳೂರಿನ ಸಮತೋಲಿತ ಅಭಿವೃದ್ಧಿಗೆ ಹಾಗೂ ಹೊರ ವಲಯಗಳನ್ನು ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಹೇಳಿದರು.

ವಿಮಾನನಿಲ್ದಾಣಕ್ಕೆ ಮೆಟ್ರೋ ರೈಲು ಸಂಪರ್ಕವನ್ನು ತ್ವರಿತಗತಿಯಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, 2029ರ ವೇಳೆಗೆ ಸಬರ್‌ಬನ್ ರೈಲು ಸಂಪರ್ಕವನ್ನು ಒದಗಿಸಲಾಗುತ್ತಿದೆ ಎಂದಿದ್ದಾರೆ.

ರಾಜ್ಯ ಸರ್ಕಾರದ ಕ್ರಮಗಳು ಕೇವಲ ಬೆಂಗಳೂರಿಗೆ ಸೀಮಿತವಾಗಿವೆ. ರಾಜ್ಯಾದ್ಯಂತ ಜಿಲ್ಲಾ ಕೇಂದ್ರಗಳಲ್ಲೂ ಜಾಗತಿಕ ತಂತ್ರಜ್ಞಾನ ಕೇಂದ್ರಗಳು ಹಾಗೂ ಸಂಶೋಧನಾತಕ ಸಂಸ್ಥೆಗಳ ಅಭಿವೃದ್ಧಿಗೆ ಪೂರ್ವಕವಾಗಿವೆ?. ವಿಶ್ವ ಬ್ಯಾಂಕಿನ 2500 ಕೋಟಿ ರೂ.ಗಳ ಬೆಂಬಲದೊಂದಿಗೆ ಪ್ರಥಮ ದರ್ಜೆ ಕಾಲೇಜುಗಳ ಬಲವರ್ಧನೆ, ಜೇಷ್ಠತಾ ಕೇಂದ್ರಗಳ ಅಭಿವೃದ್ಧಿ, ಸಂಶೋಧನೆ ಮತ್ತು ಅಭಿವೃದ್ಧಿ ಸಾಮಾರ್ಥ್ಯ ವೃದ್ಧಿ ಹಾಗೂ ಕೌಶಲ್ಯ ಸುಧಾರಣೆಗೆ ಆದ್ಯತೆ ನೀಡಲಾಗಿದೆ. ಭವಿಷ್ಯದಲ್ಲಿ ಆಧುನಿಕ ತಂತ್ರಜ್ಞಾನದೊಂದಿಗೆ ಕೈಜೋಡಿಸಿ ಕೆಲಸ ಮಾಡುವ ಮಾನವ ಸಂಪನೂಲಗಳನ್ನು ಅಭಿವೃದ್ಧಿ ಪಡಿಸಲಾಗುವುದು ಎಂದಿದ್ದಾರೆ.

ಭಾರತದ ಸಿಲಿಕಾನ್ ವ್ಯಾಲಿ ಎಂದು ಕರೆಯಲ್ಪಡುವ ಬೆಂಗಳೂರು ನಗರ ಎಂಬುಂದಕ್ಕಿಂತ ಹೆಚ್ಚಿನದಾಗಿದೆ. ಇದು ಒಂದು ಕಲ್ಪನೆ. ಪರಿಸರ ವ್ಯವಸ್ಥೆ, ನಾವೀನ್ಯತೆಯ ಚೈತನ್ಯ, ಯುವ ತಂತ್ರಜ್ಞರ ಕನಸುಗಳು, ಜಾಗತಿಕ ಉದ್ಯಮಗಳ ದೂರದೃಷ್ಟಿ, ಸಾರ್ವಜನಿಕ ನೀತಿಯ ಸ್ಥಿತಿಸ್ಥಾಪಕತ್ವ ಹಾಗೂ ಭವಿಷ್ಯದ ನಿರ್ಮಾಣ ಒಟ್ಟಿಗೆ ಸೇರುವ ಸಂಗಮವಾಗಿದೆ ಎಂದಿದ್ದಾರೆ.

ಬೆಂಗಳೂರು ಸಾಫ್ಟ್‌ವೇರ್ ಮಾತ್ರವಲ್ಲದೆ ಕ್ವಾಂಟಮ್ ಕಂಪ್ಯೂಟಿಂಗ್, ಕೃತಕ ಬುದ್ಧಿಮತ್ತೆ, ಯಂತ್ರ ಕಲಿಕೆಯಂತಹ ಕ್ಷೇತ್ರಗಳಲ್ಲಿ ಮುಂಚೂಣಿಯಲ್ಲಿದೆ. ಕರ್ನಾಟಕದ ಸಾಮರ್ಥ್ಯ, ವಿಶ್ವಾಸಾರ್ಹತೆ ಮತ್ತು ಶ್ರೇಷ್ಠತೆಯ ಬದ್ಧತೆಯಲ್ಲಿ ಜಾಗತಿಕ ಉದ್ಯಮದ ಆಳವಾದ ನಂಬಿಕೆ ಪ್ರತಿನಿಧಿಸುತ್ತದೆ ಎಂದಿದ್ದಾರೆ.

ಭಾರತದ ಆರ್ಥಿಕತೆಗೆ ಕರ್ನಾಟಕ ಶೇ.8ಕ್ಕಿಂತ ಹೆಚ್ಚು ಕೊಡುಗೆ ನೀಡುತ್ತಿದೆ ಮತ್ತು ರಫ್ತಿನಲ್ಲಿ ಶೇ.35 ಪಾಲನ್ನು ಹೊಂದಿದೆ. 18 ಸಾವಿರಕ್ಕೂ ಹೆಚ್ಚು ಸ್ಟಾರ್ಟ್‌ಅಪ್‌ಗಳು, ಶೇ. 40 ಯೂನಿಕಾರ್ನ್‌ಗಳಿಗೆ ಇಲ್ಲಿ ನೆಲೆಯಾಗಿವೆ ಎಂದು ಹೇಳಿದರು. ಶುದ್ಧ ಇಂಧನ, ಸುಸ್ಥಿರ ಚಲನಶೀಲತೆ ಮತ್ತು ಪರಿಸರ ಪ್ರಜ್ಞೆಯ ಬೆಳವಣಿಗೆಯಲ್ಲಿ ಮುನ್ನಡೆಯುತ್ತಿದ್ದೇವೆ. ಹೂಡಿಕೆಗಳು ಆರ್ಥಿಕ ಪ್ರಗತಿ ಮತ್ತು ಪರಿಸರ ಜವಾಬ್ದಾರಿಗೆ ಬೆಂಬಲವಾಗಿವೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

# ಕಾಲ್ ಗರ್ಲ್ ಆಮಿಷಕ್ಕೆ ಲಕ್ಷ ಲಕ್ಷ ಕಳೆದುಕೊಂಡ ಟೆಕ್ಕಿಗಳು

**ಬೆಂಗಳೂರು,ಆ.6**– ಐಟಿ ಸಿಟಿ ಬೆಂಗಳೂರಿನ ಇಬ್ಬರು ಸಾಫ್ಟ್‌ವೇರ್ ಇಂಜಿನಿಯರ್‌ಗಳು ಸೈಬರ್ ಖದೀಮರಿಂದ ಲಕ್ಷಾಂತರ ರೂಗಳ ವಂಚನೆಗೊಳಗಾಗಿದ್ದಾರೆ, ಓರ್ವ ಕಾಲ್ ಗರ್ಲ್ ಸೇವೆಯ ಆಮಿಷಕ್ಕೆ 1.49 ಲಕ್ಷ ಕಳೆದುಕೊಂಡರೆ, ಇನ್ನೊಬ್ಬರು ಮ್ಯಾಟ್ರಿಮೋನಿಯಲ್ ಸೈಟ್‌ನಲ್ಲಿ ವಧುವಿನಂತೆ ಬಿಂಬಿಸಿದ ವಂಚಕರಿಗೆ 55.64 ಲಕ್ಷ ರೂ ಹಣವನ್ನು ಕಳೆದುಕೊಂಡಿದ್ದಾರೆ

ಇವೆರಡೂ ಪ್ರಕರಣಗಳನ್ನು ಹೈಗೌಂಡ್ಸ್ ಪೊಲೀಸರು ದಾಖಲಿಸಿ ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.

24 ವರ್ಷದ ಸಾಫ್ಟ್‌ವೇರ್ ಎಂಜಿನಿಯರ್, ಕಾಲ್ ಗರ್ಲ್ ಸೇವೆ ಬೇಕೆಂದು ಮೆಸೇಜಿಂಗ್ ಆ?ಯಪ್ ಟೆಲಿಗ್ರಾಮ್‌ನಲ್ಲಿ ಬಂದಿದ್ದ ಲಿಂಕ್ ಕ್ಲಿಕ್ ಮಾಡಿದಾಗ ಇಶಾನಿ ರೆಡ್ಡಿ ಎಂಬುವವರ ಪರಿಚಯವಾಗಿತ್ತು. ಆಕೆ ಕಾಲ್ ಗರ್ಲ್ ಮತ್ತು ಸ್ಪಾ ಸೇವೆಗಳನ್ನು ಒದಗಿಸುವುದಾಗಿ ಹೇಳಿದ್ದಳು. ಮೊದಲು 299 ರೂ. ಪಾವತಿಗೆ ಸೂಚಿಸಿದ್ದ ಆಕೆ, ನಂತರ ವಿವಿಧ ಸೇವಾ ಶುಲ್ಕಗಳ ಹೆಸರಿನಲ್ಲಿ ಹೆಚ್ಚಿನ ಹಣವನ್ನು ಪೀಕಿದ್ದಳು.

# ಮತದಾರರ ಪಟ್ಟಿ ತಿರುಚುದ್ದ 4 ಪಶ್ಚಿಮ ಬಂಗಾಳ ಚುನಾವಣಾ ಅಧಿಕಾರಿಗಳು ಅಮಾನತು: ತನಿಖೆಗೆ ಆದೇಶ

**ನವದೆಹಲಿ:** ಮತದಾರರ ಪಟ್ಟಿಯಲ್ಲಿ ತಪ್ಪು ಹೆಸರುಗಳನ್ನು ಸೇರಿಸಿದ್ದಕ್ಕಾಗಿ ಮತ್ತು ದತ್ತಾಂಶ ಸುರಕ್ಷತೆಯಲ್ಲಿ ರಾಜಿ ಮಾಡಿಕೊಂಡಿದ್ದಕ್ಕಾಗಿ ಭಾರತೀಯ ಚುನಾವಣಾ ಆಯೋಗ ಮಂಗಳವಾರ ಪಶ್ಚಿಮ ಬಂಗಾಳದ ನಾಲ್ವರು ಸರ್ಕಾರಿ ಅಧಿಕಾರಿಗಳನ್ನು ಅಮಾನತುಗೊಳಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಚುನಾವಣಾ ಕಾನೂನುಗಳ ನಿಬಂಧನೆಗಳ ಅಡಿಯಲ್ಲಿ ನಾಲ್ವರು ಅಧಿಕಾರಿಗಳ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಚುನಾವಣಾ ಸಮಿತಿಯು ಪಶ್ಚಿಮ ಬಂಗಾಳದ ಮುಖ್ಯ ಕಾರ್ಯದರ್ಶಿಯನ್ನು ಕೇಳಿದೆ. ಬರುಯಿಪುರ್ ಪುರ್ಬಾ ಮತ್ತು ಮೊಯ್ನಾ ಕ್ಷೇತ್ರಗಳ ಮತದಾರರ ಪಟ್ಟಿಯಲ್ಲಿ ಅನಧಿಕೃತ ಸೇರ್ಪಡೆಗಳನ್ನು ಬಹಿರಂಗಪಡಿಸಿದ ಮುಖ್ಯ ಚುನಾವಣಾ ಅಧಿಕಾರಿ (ಸಿಇಒ) ವರದಿಯ ನಂತರ ಭಾರತದ ಚುನಾವಣಾ ಆಯೋಗ (ಇಸಿಐ) ನಾಲ್ವರು ಪಶ್ಚಿಮ ಬಂಗಾಳದ ಚುನಾವಣಾ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಪ್ರಾರಂಭಿಸಿದೆ. ಮುಖ್ಯ ಕಾರ್ಯದರ್ಶಿಗೆ ಬರೆದ ಪತ್ರದಲ್ಲಿ – ಈ ಪತ್ರಿಕೆಗೆ ಪಡೆದ ಪ್ರತಿ – ಚುನಾವಣಾ ನೋಂದಣಿ ಅಧಿಕಾರಿಗಳು (ಇಆರ್‌ಒಗಳು)




ಮತ್ತು ಸಹಾಯಕ ಇಆರ್‌ಒಗಳು ಮಾಡಿದ ಅಕ್ರಮಗಳ ಬಗ್ಗೆ ಸಿಇಒ ಅವರ ಸಂಶೋಧನೆಗಳನ್ನು ಇಸಿಐ ಉಲ್ಲೇಖಿಸಿದೆ.

ಅಧಿಕಾರಿಗಳು – ದೇಬೋಟಮ್ ದತ್ತ ಚೌಧರಿ (ಇಆರ್‌ಒ), ತಥಾಗತ ಮೊಂಡಲ್ (ಎಇಆರ್‌ಒ), ಬಿಪ್ಲಬ್ ಸರ್ಕಾರ್ (ಇಆರ್‌ಒ), ಮತ್ತು ಸುದೀಪ್ತಾ ದಾಸ್ (ಎಇಆರ್‌ಒ) ಮತದಾರರ ಪಟ್ಟಿಗಳನ್ನು ಸಿದ್ಧಪಡಿಸುವ, ಪರಿಷ್ಕರಿಸುವ ಮತ್ತು ಸರಿಪಡಿಸುವ ಜವಾಬ್ದಾರಿಯನ್ನು ಹೊಂದಿದ್ದರು. ಅವರ ವಿರುದ್ಧ "ಸೂಕ್ತ ಶಿಸ್ತು ಕ್ರಮ" ಕೈಗೊಳ್ಳುವಂತೆ ಮತ್ತು "ಕ್ರಿಮಿನಲ್ ದುರ್ನಡತೆ"ಗೆ ಸಮಾನವಾದ ಕ್ರಮಗಳಿಗಾಗಿ ಎಫ್‌ಐಆರ್‌ಗಳನ್ನು ದಾಖಲಿಸುವಂತೆ ಇಸಿಐ ನಿರ್ದೇಶಿಸಿದೆ. ಸಾಂದರ್ಭಿಕ ಡೇಟಾ ಎಂಟ್ರಿ ಆಪರೇಟರ್ ಸುರೋಜಿತ್ ಹಾಲ್ದರ್ ವಿರುದ್ಧವೂ ಎಫ್‌ಐಆರ್ ದಾಖಲಿಸಲು ಶಿಫಾರಸು ಮಾಡಲಾಗಿದೆ.

ಪಶ್ಚಿಮ ಬಂಗಾಳ ಚುನಾವಣಾ ಆಯೋಗ ಮತದಾರರ ಅರ್ಜಿ ನಮೂನೆಗಳ (ಫಾರ್ಮ್ 6) ಮಾದರಿ ಪರಿಶೀಲನೆಯ ಸಮಯದಲ್ಲಿ ಈ ವ್ಯತ್ಯಾಸಗಳು ಬೆಳಕಿಗೆ ಬಂದಿದೆ. ಅಧಿಕಾರಿಗಳು ಸೂಕ್ತ ಕಾರ್ಯವಿಧಾನವನ್ನು ಉಲ್ಲಂಘಿಸಿರುವುದನ್ನು ಇಸಿಐ ಗಮನಿಸಿದೆ, ಇದು 1950 ರ ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 32(1) ರ ಅಡಿಯಲ್ಲಿ ದಂಡ ವಿಧಿಸಲು ಕಾರಣವಾಗಿದೆ. ಸಿಇಒ ಅವರ ಆದೇಶಗಳನ್ನು ಅನುಸರಿಸಿ, ಜಿಲ್ಲಾ ಚುನಾವಣಾ ಅಧಿಕಾರಿ (ಡಿಇಒ) ಕಳೆದ ವರ್ಷದಲ್ಲಿ ಪ್ರಕ್ರಿಯೆಗೊಳಿಸಲಾದ ಎಲ್ಲಾ ಮತದಾರರ ನಮೂನೆಗಳನ್ನು ಪರಿಶೀಲಿಸಿ ಆಗಸ್ಟ್ 14, 2025 ರೊಳಗೆ ವರದಿಯನ್ನು ಸಲ್ಲಿಸಲು ಹಿರಿಯ ಅಧಿಕಾರಿಗಳ ತಂಡವನ್ನು ರಚಿಸಬೇಕು.

ಕಟ್ಟುನಿಟ್ಟಾದ ಅನುಸರಣೆಯನ್ನು ಖಚಿತಪಡಿಸಿಕೊಳ್ಳಲು ಮತ್ತು "ಸಾಧ್ಯವಾದಷ್ಟು ಬೇಗ" ಕ್ರಮ ಕೈಗೊಂಡ ವರದಿಯನ್ನು ಸಲ್ಲಿಸಲು ಇಸಿಐ ಮುಖ್ಯ ಕಾರ್ಯದರ್ಶಿಗೆ ಸೂಚಿಸಿದೆ. ರಾಜ್ಯದ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಗಾಗಿ ಇಸಿಐ ಒತ್ತಾಯಿಸುವುದಕ್ಕೆ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ವಿರೋಧ ವ್ಯಕ್ತಪಡಿಸಿದ ನಡುವೆ ಈ ಕ್ರಮ ಕೈಗೊಳ್ಳಲಾಗಿದೆ.

# ಭಾರತದಂತಹ ಬಲಿಷ್ಠ ಮಿತ್ರರಾಷ್ಟ್ರದೊಂದಿಗೆ ಸಂಬಂಧ ಮುರಿಯಬೇಡಿ: ಟ್ರಂಪ್ ಹುಚ್ಚಾಟಕ್ಕೆ ಸ್ವಪಕ್ಷೀಯರಿಂದಲೇ ಟೀಕೆ, ಖಂಡನೆ

ಭಾರತೀಯ ಸರಕುಗಳ ಮೇಲಿನ ಸುಂಕವನ್ನು ತೀವ್ರವಾಗಿ ಹೆಚ್ಚಿಸುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಬೆದರಿಕೆಯನ್ನು ರಿಪಬ್ಲಿಕನ್ ನಾಯಕಿ ನಿಕ್ಕಿ ಹ್ಯಾಲಿ ಟೀಕಿಸಿದ್ದಾರೆ.

ಡೊನಾಲ್ಡ್ ಟ್ರಂಪ್ ಕ್ರಮದಿಂದಾಗಿ ಪ್ರಮುಖ ಕಾರ್ಯತಂತ್ರದ ಪಾಲುದಾರಿಕೆಗೆ ಹಾನಿ ಮಾಡುವ ಅಪಾಯವಿದೆ ಎಂದು ಎಚ್ಚರಿಸಿದ್ದಾರೆ.

ಮಾಜಿ ವಿಶ್ವಸಂಸ್ಥೆಯ ರಾಯಭಾರಿ ಚೀನಾಕ್ಕೆ ಸುಂಕ ವಿನಾಯಿತಿ ನೀಡುವಾಗ ಭಾರತವನ್ನು ದೂರವಿಡದಂತೆ ಶ್ವೇತಭವನವನ್ನು ಒತ್ತಾಯಿಸಿದ್ದಾರೆ. ಚೀನಾವನ್ನು ಅವರು ಶತ್ರು ಮತ್ತು ರಷ್ಯಾ ಮತ್ತು ಇರಾನಿನ ತೈಲದ ಪ್ರಮುಖ



ಖರೀದಿದಾರ ಎಂದು ಹೇಳಿದ್ದಾರೆ.

ಭಾರತದ ಬಗ್ಗೆ ಡೊನಾಲ್ಡ್ ಟ್ರಂಪ್ ನಿಲುವು ತೀವ್ರಗೊಳ್ಳುತ್ತಿರುವುದನ್ನು ಕಠಿಣವಾಗಿ ಟೀಕಿಸಿರುವ ನಿಕ್ಕಿ ಹ್ಯಾಲಿ "ಭಾರತ ರಷ್ಯಾದಿಂದ ತೈಲವನ್ನು ಖರೀದಿಸಬಾರದು. ಆದರೆ ರಷ್ಯಾ ಮತ್ತು ಇರಾನಿನ ತೈಲದ ಪ್ರಮುಖ ಖರೀದಿದಾರ ಮತ್ತು ಎದುರಾಳಿ ಚೀನಾಕ್ಕೆ 90 ದಿನಗಳ ಸುಂಕ ವಿರಾಮ ಸಿಕ್ಕಿತು". ಎಂದು ಎಕ್ಸ್ ಪೋಸ್ಟ್ ಹಾಕಿದ್ದಾರೆ.

ಚೀನಾವನ್ನು ದ್ವೇಷಿಸುವ ಮತ್ತು ಭಾರತದ ಕಾರ್ಯತಂತ್ರದ ಏರಿಕೆಯನ್ನು ಬೆಂಬಲಿಸುವ ನಿಕ್ಕಿ ಹ್ಯಾಲಿ, "ಚೀನಾಕ್ಕೆ ಅವಕಾಶ ನೀಡಬೇಡಿ ಮತ್ತು ಭಾರತದಂತಹ ಬಲವಾದ ಮಿತ್ರರಾಷ್ಟ್ರದೊಂದಿಗೆ ಸಂಬಂಧವನ್ನು ಮುರಿಯಬೇಡಿ" ಎಂದು ಟ್ರಂಪ್ ಗೆ ಸಲಹೆ ನೀಡಿ-ದ್ದಾರೆ. 24 ಗಂಟೆಗಳ ಒಳಗೆ ಭಾರತೀಯ ಸರಕುಗಳ ಮೇಲಿನ ಸುಂಕವನ್ನು "ಗಣನೀಯವಾಗಿ" ಹೆಚ್ಚಿಸಲು ಉದ್ದೇಶಿಸಿದ್ದೇನೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ ನಂತರ ನಿಕ್ಕಿ ಹ್ಯಾಲಿ ಅವರಿಂದ ಹೇಳಿಕೆಗಳು ಬಂದಿವೆ.

ಭಾರತ ರಷ್ಯಾದ ತೈಲವನ್ನು ನಿರಂತರವಾಗಿ ಖರೀದಿಸುವುದನ್ನು ಉಲ್ಲೇಖಿಸಿ. ನವದೆಹಲಿ "ನಮ್ಮೊಂದಿಗೆ ಬಹಳಷ್ಟು ವ್ಯವಹಾರ" ಮಾಡುತ್ತಿದ್ದರೆ, ಅಮೆರಿಕ "ಭಾರತದೊಂದಿಗೆ ಕಡಿಮೆ ವ್ಯವಹಾರ" ಮಾಡುತ್ತಿದೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ಇದಕ್ಕೂ ಮೊದಲು, ಉಕ್ರೇನ್‌ನಲ್ಲಿ ನಡೆಯುತ್ತಿರುವ ಯುದ್ಧದ ಹೊರತಾಗಿಯೂ, ಭಾರತವು "ಬೃಹತ್ ಪ್ರಮಾಣದ ರಷ್ಯಾದ ತೈಲ"ವನ್ನು ಖರೀದಿಸಿ ಮುಕ್ತ ಮಾರುಕಟ್ಟೆಯಲ್ಲಿ ಲಾಭಕ್ಕಾಗಿ ಮರುಮಾರಾಟ ಮಾಡುತ್ತಿದೆ ಎಂದು ಅಮೆರಿಕ ಅಧ್ಯಕ್ಷರು ಆರೋಪಿಸಿದ್ದರು.

# ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಕಲಾವಿದ/ಕಲಾತಂಡಗಳಿಂದ ಅರ್ಜಿ ಆಹ್ವಾನ

**ಶಿವಮೊಗ್ಗ :** 2025-26ನೇ ಸಾಲಿನಲ್ಲಿ ನಾಡಹಬ್ಬವಾದ ದಸರಾ ಮಹೋತ್ಸವವನ್ನು ಶಿವಮೊಗ್ಗ ಮಹಾನಗರಪಾಲಿಕೆ ವತಿಯಿಂದ ಸೆ.22 ರಿಂದ ಅ. 02 ರವರೆಗೆ ಆಚರಿಸಲು ತೀರ್ಮಾನಿಸಲಾಗಿರುತ್ತದೆ. ಈ ಸಂಬಂಧ 14 ದಸರಾ ಸಮಿತಿಗಳನ್ನು ರಚಿಸಿದ್ದು, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ದಸರಾ ಸಮಿತಿಗಳ ವತಿಯಿಂದ ಕೆಳದಿ ಶಿವಪ್ಪನಾಯಕ ಅರಮನೆ, ಕುವೆಂಪು ರಂಗಮಂದಿರ, ಡಾ॥ ಬಿ.ಆರ್. ಅಂಬೇಡ್ಕರ್ ಭವನ, ಅಲ್ಲಮಪ್ರಭು ಉದ್ಯಾನವನ (ಫ್ರೀಡಂ ಪಾರ್ಕ್) ಹಾಗೂ ಇತರೆ ವೇದಿಕೆಗಳಲ್ಲಿ ಆಯೋಜಿಸಲು ಉದ್ದೇಶಿಸಲಾಗಿರುತ್ತದೆ.

ಶಿವಮೊಗ್ಗ ಮಹಾನಗರಪಾಲಿಕೆಯ 14 ದಸರಾ ಸಮಿತಿಯ ವತಿಯಿಂದ ಆಯೋಜಿಸಲಾಗುವ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೀಡಲು ಕಲಾವಿದರಿಂದ / ಕಲಾ ತಂಡಗಳಿಂದ ಸೆ. 06 ರೊಳಗೆ ಶಿವಮೊಗ್ಗ ಮಹಾನಗರ ಪಾಲಿಕೆಗೆ ನೇರವಾಗಿ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

## ’ದಿ ಡೆವಿಲ್’ ಬಿಡುಗಡೆ ದಿನಾಂಕ ಫಿಕ್ಸ್: ದರ್ಶನ್ ಅಭಿಮಾನಿಗಳಿಗೆ



ನಟ ದರ್ಶನ್ ಅಭಿಮಾನಿಗಳಿಗೆ ಗಣೇಶ ಚತುರ್ಥಿ ಹಬ್ಬದ ಸಮಯದಲ್ಲಿ ಡಬಲ್ ಸಿಹಿಸುದ್ದಿ. ಅವರ ನೆಚ್ಚಿನ ನಾಯಕ ಕೊಲೆ ಆರೋಪದಲ್ಲಿ ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದರೂ ಇಂದು ಬಿಡುಗಡೆಯಾದ ಚಿತ್ರದ ಮೊದಲ ಇದ್ರೆ ನೆವಿದ್ಂಯಾಗಿಬೇ೯ಕು ಹಾಡನ್ನು ಭಾರೀ ಕ್ರೇಝ್ ನಿಂದ ಬರಮಾಡಿಕೊಂಡಿದ್ದಾರೆ.ಸೋಷಿಯಲ್ ಮೀಡಿಯಾದಲ್ಲಿ, ಯೂಟ್ಯೂಬ್ ನಲ್ಲಿ ಹಾಡು ಟ್ರೆಂಡಿಂಗ್ ನಲ್ಲಿದೆ. ದರ್ಶನ್ ಜೈಲಿಗೆ ಹೋಗುವ ಮುನ್ನ ‘ದಿ ಡೆವಿಲ್’ ಸಿನಿಮಾದ ತಮ್ಮ ಪಾಲಿನ ಎಲ್ಲ ಕೆಲಸಗಳನ್ನು ಮುಗಿಸಿಕೊಟ್ಟಿದ್ದಾರೆ. ದರ್ಶನ್ ಅನುಪಸ್ಥಿತಿಯಲ್ಲೇ ‘ದಿ ಡೆವಿಲ್’ ಸಿನಿಮಾವನ್ನು ಬಿಡುಗಡೆ ಮಾಡಲು ಚಿತ್ರತಂಡ ತೀರ್ಮಾನಿಸಿದೆಡಿ.12ಕ್ಕೆ ಬಿಡುಗಡೆಈಗ ಈ ಚಿತ್ರದ ರಿಲೀಸ್ ದಿನಾಂಕ (The Devil Movie Release Date) ಪ್ರಕಟಿಸಲಾಗಿದೆ. ಇದೇ ವರ್ಷ ಡಿಸೆಂಬರ್ 12ರಂದು ‘ದಿ ಡೆವಿಲ್’ ಸಿನಿಮಾ ಅದ್ದೂರಿಯಾಗಿ ತೆರೆಕಾಣಲಿದೆ. ದರ್ಶನ್, ರಚನಾ ರೈ, ಶರ್ಮಿಳಾ ಮಾಂಡ್ರೆ ಮುಂತಾದವರು ‘ದಿ ಡೆವಿಲ್’ ಸಿನಿಮಾದಲ್ಲಿ ನಟಿಸಿದ್ದಾರೆ. ಪ್ರಕಾಶ್ ವೀರ್ ನಿರ್ದೇಶನ, ಅಜನೀಶ್ ಲೋಕನಾಥ್ ಸಂಗೀತ ಚಿತ್ರಕ್ಕಿದೆ.ಚಿತ್ರದ ಬಗ್ಗೆ ಅಭಿಮಾನಿಗಳು ಭಾರೀ ನಿರೀಕ್ಷೆ ಇಟ್ಟುಕೊಂಡಿದ್ದಾರೆ. 2011ರಲ್ಲಿ ದರ್ಶನ್ ಜೈಲುಪಾಲಾಗಿದ್ದಾಗ ಅವರ ಸಾರಥಿ ಸಿನಿಮಾ ಬಿಡುಗಡೆಯಾಗಿ ಯಶಸ್ಸು ಕಂಡಿತ್ತು.

## ಸು ಫ್ರಮ್ ಸೋ’ ಭರ್ಜರಿ ಕಲೆಕ್ಷನ್

### ಚಿತ್ರದ ಯಶಸ್ಸನ್ನು ದುಬೈನಲ್ಲಿ ಆಚರಿಸಿದ ಚಿತ್ರತಂಡ



**ಇತ್ತೀಚಿನ ಕನ್ನಡ ಬ್ಲಾಕ್‌ಬಸ್ಟರ್ ಚಿತ್ರ ‘ಸು ಫ್ರಮ್ ಸೋ’ ಚಿತ್ರತಂಡ ಇದೀಗ ರಿಲ್ಯಾಕ್ಸ್ ಮೂಡ್‌ನಲ್ಲಿದ್ದು, ಇತ್ತೀಚೆಗೆ ದುಬೈ ಮತ್ತು ಅಬುಧಾಬಿಗೆ ಪ್ರಯಾಣ ಬೆಳೆಸಿ ಚಿತ್ರದ ಯಶಸ್ಸನ್ನು ಆಚರಿಸಿತು. ಆಗಸ್ಟ್ 1 ರಿಂದ ಚಿತ್ರಮಂದಿರಗಳಲ್ಲಿ ಚಿತ್ರ ಪ್ರದರ್ಶನವಾಗುತ್ತಿದ್ದು, ಅಲ್ಲಿನ ವಿವಿಧ ಸಮುದಾಯಗಳ ಪ್ರೇಕ್ಷಕರೊಂದಿಗೆ, ವಿಶೇಷವಾಗಿ ಕನ್ನಡಿಗರು ಮತ್ತು ಮಲಯಾಳಿ ಪ್ರೇಕ್ಷಕರೊಂದಿಗೆ ತೊಡಗಿಸಿಕೊಂಡರು.**

ನಿರ್ಮಾಪಕರ ಪ್ರಕಾರ, ‘ಸು ಫ್ರಮ್ ಸೋ’ ವಿದೇಶಗಳಲ್ಲಿ 26 ದಿನಗಳ ನಿರಂತರ ಪ್ರದರ್ಶನಗಳನ್ನು ಕಂಡಿದೆ.

ದುಬೈನಲ್ಲಿ ನಡೆದ ವಿಶೇಷ ಭೇಟಿ ಮತ್ತು ಶುಭಾಶಯ ವಿನಿಮಯ ಕಾರ್ಯಕ್ರಮದಲ್ಲಿ ನಿರ್ದೇಶಕ, ನಟ ಜೆಪಿ ತುಮಿನಾಡ್, ರಾಜ್ ಬಿ ಶೆಟ್ಟಿ, ಶನೀಲ್ ಗೌತಮ್, ಪ್ರಕಾಶ್ ತುಮಿನಾಡ್ ಮತ್ತು ಇತರರು ಭಾಗವಹಿಸಿದ್ದರು. ತುಮಿನಾಡ್ ನಿರ್ದೇಶಿಸಿ, ನಟಿಸಿರುವ ಈ ಚಿತ್ರವು ಗಲ್ಲಾಪೆಟ್ಟಿಗೆಯಲ್ಲಿ ಭರ್ಜರಿ ಯಶಸ್ಸನ್ನು ಕಂಡಿದೆ.

ಕರ್ನಾಟಕದಲ್ಲಿ, ಈ ಚಿತ್ರವು ಉತ್ತಮ ಗಳಿಕೆ ಕಾಣುತ್ತಲೇ ಸಾಗಿದೆ ಮತ್ತು ವಿಶ್ವದಾದ್ಯಂತ ಅದರ ಸಂಗ್ರಹವು ₹115 ಕೋಟಿಗಳನ್ನು ದಾಟಿದೆ. ಗಲ್ಫ್ ದೇಶಗಳಿಂದಲೇ ₹8 ಕೋಟಿ ಸಂಗ್ರಹ ಕಂಡಿದೆ. ಅದೇ ಸಮಯದಲ್ಲಿ, ಮಲಯಾಳಂ ಮತ್ತು ತೆಲುಗು ಮಾರುಕಟ್ಟೆಗಳಲ್ಲಿ ಅದರ ಹೆಜ್ಜೆಗುರುತು ನಿರಂತರ ಬೆಳವಣಿಗೆಯನ್ನು ತೋರಿಸಿದೆ.

50 ದಿನಗಳ ಮೈಲಿಗಲ್ಲು ಸಮೀಪಿಸುತ್ತಿದ್ದಂತೆ, ಕೆಜಿಎಫ್ ಮತ್ತು ಕಾಂತಾರದಂತಹ ಹಿಂದಿನ ಕನ್ನಡ ಬ್ಲಾಕ್‌ಬಸ್ಟರ್‌ಗಳ ಹೆಜ್ಜೆಗಳನ್ನು ಅನುಸರಿಸಿ, ಸು ಫ್ರಮ್ ಸೋ ವರ್ಷದ ನಿರ್ಣಾಯಕ ಯಶಸ್ಸಿನಲ್ಲಿ ಒಂದಾಗಿ ತನ್ನ ಸ್ಥಾನವನ್ನು ಗಟ್ಟಿಗೊಳಿಸಿಕೊಂಡಿದೆ.

## ರಘು ಹಾಸನ್ ನಿರ್ದೇಶನದ ‘ನಾನು ಮತ್ತು ಗುಂಡ 2’ ಬಿಡುಗಡೆ

ನಾನು ಮತ್ತು ಗುಂಡ ಚಿತ್ರದಲ್ಲಿ ಪ್ರೇಕ್ಷಕರ ಮನಗೆದ್ದ ನಾಯಿ ಮತ್ತು ಅದರ ಯಜಮಾನನ ನಡುವಿನ ಭಾವನಾತ್ಮಕ ಬಾಂಧವ್ಯವು ಇದೀಗ ‘ನಾನು ಮತ್ತು ಗುಂಡ 2’ ಚಿತ್ರದಲ್ಲಿ ಮತ್ತೆ ತೆರೆಮೇಲೆ ಬರಲು ಸಿದ್ಧವಾಗಿದೆ. ರಘು ಹಾಸನ್ ನಿರ್ದೇಶಿಸಿ, ನಿರ್ಮಿಸಿರುವ ಈ ಚಿತ್ರವು ಸೆಪ್ಟೆಂಬರ್ 5 ರಂದು ರಾಜ್ಯದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ.

ಚಿತ್ರತಂಡ ‘ಓಂ ಶಿವಾಯ, ನಮೋ ಶಿವಾಯ’ ಭಕ್ತಿಗೀತೆಯನ್ನು ಬಿಡುಗಡೆ ಮಾಡಿದ್ದು, ಹಾಡಿಗೆ ನಾಗೇಂದ್ರ ಪ್ರಸಾದ್ ಹೇಳಿದರು.

ನಿರ್ದೇಶಕ ರಘು ಮಾತನಾಡಿ, ‘ನಾವು ಈ ಯೋಜನೆಯನ್ನು 2022ರಲ್ಲಿ ಪ್ರಾರಂಭಿಸಿದೆವು ಮತ್ತು ಈಗ ಅದು ಅಂತಿಮವಾಗಿ ಬಿಡುಗಡೆಯಾಗುತ್ತಿದೆ. ಪಟ್ನಾಯಕ್ ಅವರ ಸಂಗೀತವು ನಾಗೇಂದ್ರ ಪ್ರಸಾದ್ ಅವರನ್ನು ತಕ್ಷಣವೇ ನೆನಪಿಗೆ ತಂದಿತು ಮತ್ತು ವಿಜಯ್ ಪ್ರಕಾಶ್ ಉತ್ತಮವಾಗಿ ಹಾಡಿದ್ದಾರೆ. ನಾನು ಅತಿಯಾದ ಕಥೆ ಹೇಳುವಿಕೆಯಿಂದ ದೂರ ಸರಿದು ಭಾವನಾತ್ಮಕವಾದದ್ದನ್ನು ಸೃಷ್ಟಿಸಲು ಬಯಸಿದ್ದೆ. ಗುಂಡ ಅವರ ಕಥೆ ಹುಟ್ಟಿದ್ದು ಹೀಗೆ.



ಆರ್‌ಪಿ ಪಟ್ನಾಯಕ್ ಅವರ ಸಂಗೀತ ಸಂಯೋಜನೆ, ಡಾ. ವಿ ನಾಗೇಂದ್ರ ಪ್ರಸಾದ್ ಅವರ ಸಾಹಿತ್ಯ ಮತ್ತು ವಿಜಯ್ ಪ್ರಕಾಶ್ ಅವರ ಗಾಯನವಿದೆ.

ವಿಡಿಯೊ ಮೂಲಕ ತಮ್ಮ ಉತ್ಸಾಹವನ್ನು ಹಂಚಿಕೊಂಡ ವಿಜಯ್ ಪ್ರಕಾಶ್, ‘ಬಹಳ ದಿನಗಳ ನಂತರ ಪಟ್ನಾಯಕ್ ಅವರ ಸಂಗೀತ ಸಂಯೋಜನೆಯಲ್ಲಿ ಮತ್ತೆ ಹಾಡಲು ಅದ್ಭುತವೆನಿಸುತ್ತದೆ. ಈ ಚಿತ್ರವು ಪ್ರೇಕ್ಷಕರೊಂದಿಗೆ ಕನೆಕ್ಟ್ ಆಗುತ್ತದೆ ಎಂದು ನಾನು ಭಾವಿಸುತ್ತೇನೆ’ ಎಂದು ಹೇಳಿದರು.


‘ಈ ಹಾಡು ಹಲವು ಪದರಗಳನ್ನು ಹೊಂದಿದೆ. ಸಾಹಿತ್ಯವು ಕಥೆಯನ್ನು ಉಚ್ಚರಿಸಬಾರದು, ಆದರೆ ಅದರ ಸಾರವನ್ನು ಹಿಡಿದಿಟ್ಟುಕೊಳ್ಳಬೇಕು. ಈ ಹಾಡು ಹೃದಯವನ್ನು ಮುಟ್ಟುತ್ತದೆ ಮತ್ತು ಪರದೆಯ ಮೇಲೆ ಹೆಚ್ಚಿನ ಪ್ರಭಾವ ಬೀರುತ್ತದೆ’ ಎಂದು ಗೀತರಚನೆಕಾರ ಸೆನ್ಸಾರ್ ಮಂಡಳಿಯು ಯು/ಎ ಪ್ರಮಾಣಪತ್ರ ನೀಡಿದೆ. ಮೊದಲ ಭಾಗದಲ್ಲಿ ಶಂಕರ್ ನಿಧನರಾದ ನಂತರ, ಅವರ ಮಗ ರಾಕೇಶ್ ಅಡಿಗ ನಿರ್ವಹಿಸಿದ ಪಾತ್ರ ಮತ್ತು ನಾಯಿಯ ಸುತ್ತ ಕಥೆಯು ಮುಂದುವರಿಯುತ್ತದೆ’ ಎಂದರು.

ರಚನಾ ಇಂದರ್ ನಾಯಕಿಯಾಗಿ ನಟಿಸಿರುವ ಈ ಚಿತ್ರವನ್ನು ಊಟಿ, ಶಿವಮೊಗ್ಗ, ತೀರ್ಥಹಳ್ಳಿ, ಬಾಳೆಹೊನ್ನೂರು

ಮತ್ತು ಬೆಂಗಳೂರಿನಲ್ಲಿ ಚಿತ್ರೀಕರಿಸಲಾಗಿದೆ. ಪೊಯೆಮ್ ಪಿಕ್ಚರ್ಸ್ ಬ್ಯಾನರ್ ಅಡಿಯಲ್ಲಿ ಬಿಡುಗಡೆಯಾಗುತ್ತಿರುವ ನಾನು ಮತ್ತು ಗುಂಡ 2 ನಲ್ಲಿ ಆರು ಹಾಡುಗಳಿವೆ. ರುತ್ವಿಕ್ ಮುರಳೀಧರ್ ಅವರ ಹಿನ್ನೆಲೆ ಸಂಗೀತವಿದೆ. ಮುಂದಿನ ಭಾಗವು ಸಿಂಬಾ ಜೂನಿಯರ್, ಸಿಂಬಾ ಎಂಬ ನಾಯಿಯನ್ನು ಪರಿಚಯಿಸುತ್ತದೆ.

## 2018ರ ನೈಜ ಘಟನೆ ಆಧರಿತ ಸಿನಿಮಾ ‘ನೋಡಿದ್ದು ಸುಳ್ಳಾಗಬಹುದು ಕನ್ನಡ ಮತ್ತು ತೆಲುಗಿನಲ್ಲಿ ನಿರ್ಮಾಣ

ಬಹುತೇಕ ಹೊಸಬರೇ ನಿರ್ಮಿಸಿರುವ ಚಿತ್ರ ‘ನೋಡಿದ್ದು ಸುಳ್ಳಾಗಬಹುದು’ ಮೂಲಕ ಅನಿಲ್ ಕುಮಾರ್ ಕೆಆರ್ ಇದೀಗ ಸಿನಿಮಾ ರಂಗಕ್ಕೆ ಕಾಲಿಡುತ್ತಿದ್ದಾರೆ. ಈ ಚಿತ್ರಕ್ಕೆ ಬಂಡವಾಳ ಹೂಡಿರುವ ಅವರೇ ನಾಯಕನಾಗಿಯೂ ನಟಿಸಿದ್ದಾರೆ. ಚಿತ್ರದಲ್ಲಿ ಅನಿಲ್ ಪೊಲೀಸ್ ಅಧಿಕಾರಿಯ ಪಾತ್ರವನ್ನು ನಿರ್ವಹಿಸಿದ್ದಾರೆ. ಚಿತ್ರಕ್ಕೆ ವಿಜಯ್ ಚಲಪತಿ ಆಕ್ಷನ್ ಕಟ್ ಹೇಳಿದ್ದಾರೆ. ಈ ಚಿತ್ರವು ಆಳವಾದ ಭಾವನಾತ್ಮಕ ಮೌಲ್ಯವನ್ನು ಹೊಂದಿದೆ ಮತ್ತು ಅದರ ಶೀರ್ಷಿಕೆಯು ಶಕ್ತಿಯುತ ಮತ್ತು ಅರ್ಥಪೂರ್ಣವಾಗಿದೆ ಎಂದು ಅನಿಲ್ ಭಾವಿಸುತ್ತಾರೆ.



‘ನಾನು ಚಿಕ್ಕಬಳ್ಳಾಪುರದವನು ಮತ್ತು ನಟನೆಯ ಬಗ್ಗೆ ಯಾವಾಗಲೂ ಉತ್ಸಾಹ ಹೊಂದಿದ್ದೇನೆ. ನಾನು ಉಷಾ ಭಂಡಾರಿ ಅವರ ನಟನಾ ಶಾಲೆಯಲ್ಲಿ ತರಬೇತಿ ಪಡೆದಿದ್ದೇನೆ ಮತ್ತು ನನ್ನ ಸ್ನೇಹಿತ ಅಕ್ಷಯ್ ಮೂಲಕ ನಿರ್ದೇಶಕ ವಿಜಯ್ ಸರ್ ಅವರನ್ನು ಭೇಟಿಯಾದೆ. ಕಥೆ ಮತ್ತು ಶೀರ್ಷಿಕೆ ಎರಡರಿಂದಲೂ ನಾನು ಆಕರ್ಷಿತನಾದೆ. ಪ್ರಮುಖ ಪಾತ್ರದಲ್ಲಿ ನಟಿಸುವುದರ ಜೊತೆಗೆ, ನಾನು ಚಿತ್ರವನ್ನು ನಿರ್ಮಿಸಿದ್ದೇನೆ. ಕ್ಲೈಮ್ಯಾಕ್ಸ್ ಒಂದು ಪ್ರಮುಖ ಹೈಲೈಟ್ ಆಗಿರುತ್ತದೆ. ಚಿತ್ರವು ತನ್ನದೇ ಆದ ಕಮರ್ಷಿಯಲ್ ಅಂಶಗಳನ್ನು ಹೊಂದಿದೆ. ಆದರೆ, ಪೋಷಕರು ಮತ್ತು ಮಕ್ಕಳ ನಡುವಿನ ಬಾಂಧವ್ಯದ ಮೇಲೆ ಕೇಂದ್ರೀಕರಿಸುತ್ತದೆ’ ಎಂದು ಅನಿಲ್ ಹೇಳುತ್ತಾರೆ.

ಚಿತ್ರದ ಮೊದಲ ಹಾಡು ‘ಕನಸುಗಳ ಮೆರವಣಿಗೆ’ ಇತ್ತೀಚೆಗಷ್ಟೇ ಬಿಡುಗಡೆಗೊಂಡಿದೆ. ಅನಿರುದ್ಧ್ ಶಾಸ್ತ್ರಿ ಅವರು ಬರೆದಿರುವ ಈ ಹಾಡಿಗೆ ಗುಮ್ಮಿನೇನಿ ವಿಜಯ್ ಸಂಗೀತ ಸಂಯೋಜಿಸಿದ್ದಾರೆ. ಅನಿರುದ್ಧ್ ಶಾಸ್ತ್ರಿ ಮತ್ತು ಪೃಥ್ವಿ ಭಟ್ ಧ್ವನಿ ನೀಡಿದ್ದಾರೆ. ‘ನೋಡಿದ್ದು ಸುಳ್ಳಾಗಬಹುದು’ 2018ರ ನೈಜ ಘಟನೆಯನ್ನು ಆಧರಿಸಿದೆ ಮತ್ತು ಕನ್ನಡ ಮತ್ತು ತೆಲುಗು ಎರಡರಲ್ಲೂ ನಿರ್ಮಿಸಲಾಗಿದೆ.

‘ನನಗೆ ಚಿತ್ರರಂಗದೊಂದಿಗೆ 10 ವರ್ಷಗಳಿಂದ ನಂಟಿದೆ. ಪೊಗರು ಸೇರಿದಂತೆ ಹಲವು ಚಿತ್ರಗಳಲ್ಲಿ ನಿರ್ದೇಶನದ ವಿಭಾಗದಲ್ಲಿ ಕೆಲಸ ಮಾಡಿದ್ದು, ಸ್ವತಂತ್ರ ನಿರ್ದೇಶಕನಾಗಿ ಇದು ನನ್ನ ಮೊದಲ ಚಿತ್ರ. ನನ್ನ ಮೇಲೆ ನಂಬಿಕೆ ಇಟ್ಟಿದ್ದಕ್ಕಾಗಿ ಅನಿಲ್ ಕುಮಾರ್ ಅವರಿಗೆ ನಾನು ಧನ್ಯವಾದ ಹೇಳುತ್ತೇನೆ. ನೀವು ಚಿತ್ರವನ್ನು ನೋಡಿದಾಗ ನಾವು ಈ ಶೀರ್ಷಿಕೆಯನ್ನು ಏಕೆ ಆರಿಸಿಕೊಂಡಿದ್ದೇವೆಂದು ನಿಮಗೆ ತಿಳಿಯುತ್ತದೆ. ಚಿತ್ರೀಕರಣ ಪೂರ್ಣಗೊಂಡಿದೆ ಮತ್ತು ನಾವು ಈಗ ಪೋಸ್ಟ್–ಪ್ರೊಡಕ್ಷನ್ ಹಂತದಲ್ಲಿದ್ದೇವೆ’ ಎನ್ನುತ್ತಾರೆ ನಿರ್ದೇಶಕರು.

## ಕೆಡಿ ಚಿತ್ರ ಬಿಡುಗಡೆಗೆ ಸಿದ್ಧತೆ




ಪ್ರೇಮ್ ನಿರ್ದೇಶನದ ಮತ್ತು ಕೆವಿಎನ್ ಪ್ರೊಡಕ್ಷನ್ಸ್ ಬೆಂಬಲದೊಂದಿಗೆ ಬಹು ನಿರೀಕ್ಷಿತ ಪ್ಯಾನ್–ಇಂಡಿಯಾ ಚಿತ್ರ ‘ಕೆಡಿ’ ಬಿಡುಗಡೆಗೆ ಎದುರು ನೋಡುತ್ತಿರುವ ನಟ ಧ್ರುವ ಸರ್ಜಾ ಇದೀಗ ಹೊಸ ಚಿತ್ರವೊಂದಕ್ಕೆ ಚರ್ಚೆಯಲ್ಲಿ ತೊಡಗಿದ್ದಾರೆ. ಹಲವು ನಿರ್ಮಾಣ ಸಂಸ್ಥೆಗಳೊಂದಿಗೆ ಚರ್ಚೆ ನಡೆಸುತ್ತಿರುವ ಧ್ರುವ ಸರ್ಜಾ, ಸರಿಯಾದ ಕಥೆಗಾಗಿ ಕಾಯುತ್ತಿದ್ದಾರೆ ಎಂದು ಹೇಳಲಾಗುತ್ತಿದೆ.

ಕೆರೆಬೇಟೆ ನಿರ್ದೇಶಕ ರಾಜ್ ಗುರು ಜೊತೆಗೂ ಧ್ರುವ ಸರ್ಜಾ ಅವರು ಮಾತುಕತೆಯಲ್ಲಿ ತೊಡಗಿದ್ದಾರೆ ಎನ್ನುವ ಊಹಾಪೋಹಗಳು ಕೇಳಿಬಂದಿವೆ. ಆದರೆ, ಯಾವುದೇ ಅಧಿಕೃತ ದೃಢೀಕರಣ ಲಭ್ಯವಾಗಿಲ್ಲ. ಕುತೂಹಲಕಾರಿ ವಿಚಾರವೆಂದರೆ, ದುನಿಯಾ, ಅಣ್ಣಾ ಬಾಂಡ್ ಮತ್ತು ಟಗರು ಮುಂತಾದ ಹಿಟ್ ಚಿತ್ರಗಳ ಹಿಂದಿನ ನಿರ್ದೇಶಕ ಸೂರಿ ಅವರೊಂದಿಗೆ ಮಾತುಕತೆ ನಡೆಸುತ್ತಿದ್ದಾರೆ ಎಂದು ಸಿನಿಮಾ ಎಕ್ಸ್‌ಪ್ರೆಸ್‌ಗೆ ತಿಳಿದುಬಂದಿದೆ.

ನಾವು ಈ ಹಿಂದೆ ವರದಿ ಮಾಡಿದಂತೆ, ಸೂರಿ ಸದ್ಯಕ್ಕೆ ಪಿಆರ್‌ಕೆ ಪ್ರೊಡಕ್ಷನ್ಸ್, ಜಯಣ್ಣ ಫಿಲ್ಮ್ ಮತ್ತು ಕೆಆರ್‌ಜಿ ಸ್ಟುಡಿಯೋಸ್ ಸಹಯೋಗದೊಂದಿಗೆ ಯುವರಾಜ್‌ಕುಮಾರ್ ಅವರೊಂದಿಗಿನ ತಮ್ಮ ದೀರ್ಘಕಾಲದ ಯೋಜಿತ ಸಹಯೋಗವನ್ನು ಪ್ರಾರಂಭಿಸಲು ತಯಾರಿ ನಡೆಸುತ್ತಿದ್ದರು. ಆದರೆ, ಸದ್ಯಕ್ಕೆ ಈ ಯೋಜನೆ ಸ್ಥಗಿತಗೊಂಡಿದೆ ಎಂದು ಮೂಲಗಳು ಹೇಳುತ್ತವೆ. ಇದರ ಪರಿಣಾಮವಾಗಿ, ನಿರ್ದೇಶಕರು ಸದ್ಯ ಧ್ರುವ ಸರ್ಜಾ ಅವರೊಂದಿಗೆ ಮುಂದಿನ ಚಿತ್ರಕ್ಕಾಗಿ ಮಾತುಕತೆ ನಡೆಸುತ್ತಿದ್ದಾರೆ ಎನ್ನಲಾಗಿದೆ.

ವರದಿಗಳ ಪ್ರಕಾರ, ಮಾತುಕತೆ ಇನ್ನೂ ಆರಂಭಿಕ ಹಂತದಲ್ಲಿವೆ. ಇಬ್ಬರು ಭೇಟಿಯಾಗಿದ್ದಾರೆ, ಮಾತನಾಡಿದ್ದಾರೆ. ಆದರೆ, ಇನ್ನೂ ಸ್ಪಷ್ಟಪಡಿಸಿಲ್ಲ ಎಂದು ಮೂಲವೊಂದು ಹೇಳುತ್ತದೆ. ಧ್ರುವ ಸರ್ಜಾ ಮತ್ತು ಸೂರಿ ಚಿತ್ರದ ತೀವ್ರ ನಿರೀಕ್ಷೆ ಹುಟ್ಟುಹಾಕಿದ್ದು, ಅಧಿಕೃತ ಘೋಷಣೆ ಯಾವಾಗ ಬರುತ್ತದೆ ಎಂಬುದನ್ನು ಕಾದು ನೋಡಬೇಕಾಗಿದೆ.

## IT ಉದ್ಯೋಗಿ ಅಪಹರಣ: ಆರೋಪಿಗಳ ಪಟ್ಟಿಯಲ್ಲಿ ನಟಿ ಲಕ್ಷ್ಮಿ ಮೆನನ್ ಹೆಸರು; ಕೇಸ್ ದಾಖಲಾಗುತ್ತಿದ್ದಂತೆ ಎಸ್ಕೇಪ್!



**ಕೊಚ್ಚಿ:** ಕೇರಳದ ಕೊಚ್ಚಿಯಲ್ಲಿ ನಡೆದ ಐಟಿ ಉದ್ಯೋಗಿ ಅಪಹರಣ ಪ್ರಕರಣದಲ್ಲಿ ಮಲಯಾಳಂ ಮತ್ತು ತಮಿಳು ಚಿತ್ರಗಳಲ್ಲಿ ನಟಿಸಿರುವ ನಟಿ ಲಕ್ಷ್ಮಿ ಮೆನನ್ ಅವರ ಹೆಸರು ಆರೋಪಿಗಳ ಪಟ್ಟಿಯಲ್ಲಿದೆ ಎಂದು ವರದಿಯಾಗಿದೆ.

ಹೌದು, ಸುಂದರ ಪಾಂಡಿಯನ್, ರೆಕ್ಕಾ, ವೇದಾಲಂ, ಕೊಂಬಾನ್ ಮುಂತಾದ ಸಿನಿಮಾಗಳ ಮೂಲಕ ಫೇಮಸ್ ಆಗಿರುವ ನಟಿ ಲಕ್ಷ್ಮಿ ಮೆನನ್ ಮೇಲೆ ಗಂಭೀರ ಆರೋಪವೊಂದು ಕೇಳಿಬಂದಿದೆ. ಕಳೆದ ಆಗಸ್ಟ್ 24 ರಂದು ಕೊಚ್ಚಿಯ ಐಷಾರಾಮಿ ಬಾರ್‌ನಲ್ಲಿ ನಡೆದ ಗಲಾಟೆಯಲ್ಲಿ ಲಕ್ಷ್ಮಿ ಮೆನನ್ ಹೆಸರು ತಳುಕು ಹಾಕಿಕೊಂಡಿದೆ.

ಲಕ್ಷ್ಮಿ ಮತ್ತು ಅವರ ಸ್ನೇಹಿತರು ಹಾಗೂ ಮತ್ತೊಂದು ಗುಂಪಿನ ನಡುವೆ ಹೊಡೆದಾಟ ನಡೆದಿದೆ. ಲಕ್ಷ್ಮಿ ಮೆನನ್ ಮತ್ತು ಫ್ರೆಂಡ್ಸ್ ಈ ವೇಳೆ ಎದುರಾಳಿ ಗುಂಪಿನ ಯುವಕನನ್ನು (ಐಟಿ ಉದ್ಯೋಗಿ) ಕಾರಿನಲ್ಲಿ ಅಪಹರಿಸಿ, ಹಲ್ಲೆ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಈ ಘಟನೆಯ ಸಂಬಂಧ ದೂರು ದಾಖಲಾಗಿದ್ದು, ಲಕ್ಷ್ಮಿ ಮೆನನ್ ಅವರು ನಾಪತ್ತೆಯಾಗಿದ್ದರೆ ಎಂದು ಹೇಳಲಾಗುತ್ತಿದೆ.

ಲಕ್ಷ್ಮಿ ಮೆನನ್ ಅವರು ಆಗಸ್ಟ್ 24 ರಂದು ಕೊಚ್ಚಿಯ ಬ್ಯಾನರ್ಜಿ ರಸ್ತೆಯಲ್ಲಿರುವ ಐಷಾರಾಮಿ ಬಾರ್‌ಗೆ ಭೇಟಿ ನೀಡಿದ್ದರು. ಈ ವೇಳೆ ಲಕ್ಷ್ಮಿ ಸ್ನೇಹಿತರು ಮತ್ತು ಇತರ ಗುಂಪಿನ ಯುವಕರ ನಡುವೆ ಗಲಾಟೆ ನಡೆದಿದೆ ಎನ್ನಲಾಗಿದೆ. ಈ ಗಲಾಟೆ ರಾತ್ರಿ 11 ರಿಂದ 12 ಗಂಟೆಯವರೆಗೆ ನಡೆದಿದ್ದು, ಗಲಾಟೆಯ ನಂತರ ಲಕ್ಷ್ಮಿ ಮೆನನ್ ಸ್ನೇಹಿತರಾದ ಮಿಥುನ್ ಮತ್ತು ಅನೀಸ್ ಎಂಬುವವರು ಐಟಿ ಕಂಪನಿಯ ಯುವಕನನ್ನು ಬಲವಂತವಾಗಿ ಕಾರಿನಲ್ಲಿ ಕರೆದುಕೊಂಡು ಹೋಗಿದ್ದಾರೆ. ಆ ಯುವಕನ ಮೇಲೆ ಕಾರಿನಲ್ಲಿ ಹಲ್ಲೆ ಮಾಡಿ, ನಂತರ ರಸ್ತೆಬದಿಯಲ್ಲಿ ಬಿಟ್ಟು ಹೋಗಿದ್ದಾರೆ ಎಂದು ಆರೋಪಿಸಲಾಗಿದೆ.

## ‘ಏಳುಮಲೆ’ ಚಿತ್ರ ಬಿಡುಗಡೆ

**ಹಾಡು, ಟೈಟಲ್ ಹಾಗೂ ಟೀಸರ್ ಮೂಲಕ ಈಗಾಗಲೇ ಪ್ರೇಕ್ಷಕರ ಗಮನ ಸೆಳೆದಿರುವ ತರುಣ್ ಸುಧೀರ್ ನಿರ್ಮಾಣದ ‘ಏಳುಮಲೆ’ ಸಿನಿಮಾದ ಬಿಡುಗಡೆ ದಿನಾಂಕ ಘೋಷಣೆಯಾಗಿದೆ.**

**ಪುನೀತ್ ರಂಗಸ್ವಾಮಿ ಆ್ಯಕ್ಷನ್ ಕಟ್ ಹೇಳಿರುವ ಏಳುಮಲೆ ಸಿನಿಮಾ ಸೆಪ್ಟೆಂಬರ್ 5ರಂದು ತೆರೆಗೆ ಬರುತ್ತಿದೆ. ಕನ್ನಡ, ತಮಿಳು ಹಾಗೂ ತೆಲುಗು ಭಾಷೆಯಲ್ಲಿ ಚಿತ್ರ ಬಿಡುಗಡೆಯಾಗಲಿದೆ.**



ಚಿತ್ರ ತಂಡ ಟೀಸರ್‌ನ್ನು ಬಿಡುಗಡೆ ಮಾಡಿದ್ದು, ಎರಡು ಹಾಡುಗಳನ್ನೂ ಬಿಡುಗಡೆ ಮಾಡಿದೆ. ಕರ್ನಾಟಕ–ತಮಿಳುನಾಡು ನಡುವಿನ ಗಡಿಭಾಗದ ಪ್ರೇಮಕಥೆಯಾಗಿರುವ ‘ಏಳುಮಲೆ’ ಸಿನಿಮಾದಲ್ಲಿ ನಟಿ ರಕ್ಷಿತಾ ಸಹೋದರ ರಾಣಾ ಕನ್ನಡದ ಹುಡುಗ ಹರೀಶ್ ಆಗಿ ನಟಿಸುತ್ತಿದ್ದಾರೆ.

ರಿಯಾಲಿಟಿ ಶೋ ಮೂಲಕ ಮನೆ ಮಾತಾಗಿರುವ ಮೈಸೂರಿನ ಹುಡುಗಿ ಪ್ರಿಯಾ ಆಚಾರ್ ತಮಿಳು ಹುಡುಗಿಯ ಪಾತ್ರದಲ್ಲಿ ನಟಿಸುತ್ತಿದ್ದಾರೆ.

ಈ ಸಿನಿಮಾದಲ್ಲಿ ರಾಣಾ, ಪ್ರಿಯಾಂಕಾ ಆಚಾರ್ ಜೊತೆಗೆ ಜಗಪತಿ ಬಾಬು, ನಾಗಾಭರಣ, ಕಿಶೋರ್ ಕುಮಾರ್, ಸರ್ದಾರ್ ಸತ್ಯ, ಜಗಪ್ಪ ತಾರಾಬಳಗದಲ್ಲಿದ್ದಾರೆ.


ಚೌಕ ಮತ್ತು ಕಾಟೇರ ಚಿತ್ರಗಳ ನಿರ್ದೇಶಕ ತರುಣ್ ಕಿಶೋರ್ ಸುಧೀರ್ ಅವರು ಈ ಸಿನಿಮಾ ನಿರ್ಮಾಣ ಮಾಡುತ್ತಿದ್ದಾರೆ. ಅಟ್ಲಾಂಟಾ ನಾಗೇಂದ್ರ ಅವರು ಚಿತ್ರಕ್ಕೆ ಸಹ ನಿರ್ಮಾಪಕರಾಗಿದ್ದಾರೆ. ಈ ಚಿತ್ರವು ನೈಜ ಘಟನೆಯನ್ನು ಆಧರಿಸಿದೆ. ಭಾವನಾತ್ಮಕವಾದ ಕಥೆಯನ್ನು ಒಳಗೊಂಡಿರಲಿದೆ. ಚಾಮರಾಜನಗರ, ಸೇಲಂ, ಈರೋಡ್ ಸೇರಿದಂತೆ ಕರ್ನಾಟಕ–ತಮಿಳುನಾಡು ಗಡಿ ಭಾಗದ ಸ್ಥಳಗಳಲ್ಲಿ ಚಿತ್ರೀಕರಣ ನಡೆಸಲಾಗಿದೆ.

ಡಿ.ಇಮ್ಮನ್ ಸಂಗೀತ, ಅದ್ವೈತ್ ಗುರುಮೂರ್ತಿ ಛಾಯಾಚಿತ್ರಗ್ರಹಣ, ಕೆ.ಎಂ.ಪ್ರಕಾಶ್ ಸಂಕಲನ, ನಾಗಾರ್ಜುನ್ ಶರ್ಮಾ ಹಾಗೂ ಪುನೀತ್ ರಂಗಸ್ವಾಮಿ ಸಂಭಾಷಣೆ ಚಿತ್ರಕ್ಕಿದೆ.

## 666 ಆಪರೇಷನ್ ಡ್ರೀಮ್ ಥಿಯೇಟರ್’ ಚಿತ್ರದ ಪೋಸ್ಟರ್ ರಿಲೀಸ್

**ಹೇಮಂತ್ ಎಂ ರಾವ್ ನಿರ್ದೇಶನದ ‘666 ಆಪರೇಷನ್ ಡ್ರೀಮ್ ಥಿಯೇಟರ್’ ಚಿತ್ರದ ಬಗ್ಗೆ ನಿರೀಕ್ಷೆಗಳು ಹೆಚ್ಚಾಗಿದ್ದು, ಶಿವರಾಜ್‌ಕುಮಾರ್ (ಶಿವಣ್ಣ) ಮತ್ತು ಧನಂಜಯ್ ಅವರ ಪೋಸ್ಟರ್‌ಗಳು ಈಗಾಗಲೇ ಚಿತ್ರದ ಬಗೆಗಿನ ಕುತೂಹಲವನ್ನು ಕೆರಳಿಸಿವೆ.**

**ಟಗರು ಮತ್ತು ಭಜರಂಗಿ 2 ಚಿತ್ರಗಳ ನಂತರ, ಶಿವಣ್ಣ ಮತ್ತು ಧನಂಜಯ್ ‘666 ಆಪರೇಷನ್ ಡ್ರೀಮ್ ಥಿಯೇಟರ್’ ಚಿತ್ರಕ್ಕಾಗಿ ಮತ್ತೆ ಒಟ್ಟಿಗೆ ಕಾಣಿಸಿಕೊಳ್ಳುತ್ತಿದ್ದಾರೆ. ಚಿತ್ರತಂಡ ಸದ್ಯ ಬೆಂಗಳೂರಿನ ಕಂಠೀರವ ಸ್ಟುಡಿಯೋದಲ್ಲಿ ಚಿತ್ರೀಕರಣ ನಡೆಸುತ್ತಿದೆ. ಅಲ್ಲಿ ಅದ್ದೂರಿ ಸೆಟ್ ಅನ್ನು ನಿರ್ಮಿಸಲಾಗಿದೆ.**



ಧನಂಜಯ್ ಅವರ ಹುಟ್ಟುಹಬ್ಬದ ಸಂದರ್ಭದಲ್ಲಿ ಚಿತ್ರತಂಡ ಹೊಸ ಪೋಸ್ಟರ್ ಅನ್ನು ಬಿಡುಗಡೆ ಮಾಡಿದ್ದಾರೆ

ಈ ಪೋಸ್ಟರ್‌ನಲ್ಲಿ ನಟನನ್ನು ಆಕರ್ಷಕವಾದ ರೆಟ್ರೊ ಲುಕ್‌ನಲ್ಲಿ ತೋರಿಸಲಾಗಿದೆ. ಕಾರಿನಲ್ಲಿ ಮಲಗಿರುವ ಧನಂಜಯ್, ಸ್ಟೈಲಿಶ್ ಆಗಿ ಕೈಯಲ್ಲಿ ಬಂದೂಕು ಹಿಡಿದು ರಿಲ್ಯಾಕ್ಸ್ ಮೂಡ್‌ನಲ್ಲಿದ್ದಾರೆ.

ಶಿವರಾಜ್‌ಕುಮಾರ್ ಮತ್ತು ಧನಂಜಯ್ ಇಬ್ಬರೂ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದು, ಇದು ವಿಶಿಷ್ಟ ಕಥಾಹಂದರ ಮತ್ತು ಹಿಡಿತದ ಪಾತ್ರಗಳ ಭರವಸೆ ನೀಡುತ್ತದೆ. ವಿಶಿಷ್ಟ ನಿರೂಪಣೆಗಳಿಗೆ ಹೆಸರುವಾಸಿಯಾದ ನಿರ್ದೇಶಕ ಹೇಮಂತ್ ಎಂ ರಾವ್, ರೆಟ್ರೋ ಶೈಲಿಯ ಕಥೆಯನ್ನು ಹೆಣೆಯುತ್ತಿದ್ದಾರೆ ಎಂದು ಹೇಳಲಾಗಿದೆ.

ಡಾ. ವೈಶಾಕ್ ಜೆ ಗೌಡ ಅವರ ವೈಶಾಕ್ ಜೆ ಫಿಲ್ಮ್ ಬ್ಯಾನರ್ ಅಡಿಯಲ್ಲಿ ನಿರ್ಮಿಸಲಾದ ‘666 ಆಪರೇಷನ್ ಡ್ರೀಮ್

ಥಿಯೇಟರ್’ ಬಲವಾದ ತಾಂತ್ರಿಕ ತಂಡವನ್ನು ಹೊಂದಿದೆ. ಚಿತ್ರಕ್ಕೆ ಚರಣ್ ರಾಜ್ ಸಂಗೀತ ಸಂಯೋಜಿಸಿದ್ದಾರೆ. ಅದ್ವೈತ ಗುರುಮೂರ್ತಿ ಅವರ ಛಾಯಾಗ್ರಹಣ ಮತ್ತು ವಿಶ್ವಾಸ್ ಕಶ್ಯಪ್ ಅವರ ಕಲಾ ನಿರ್ದೇಶನವಿದೆ.

## S/O ಮುತ್ತಣ್ಣ’ ಮೂರು ಭಾಷೆಗಳಲ್ಲಿ ಏಕಕಾಲದಲ್ಲಿ ತೆರೆಗೆ

ಡೈನಾಮಿಕ್ ಹೀರೋ ದೇವರಾಜ್ ಅವರ ಪುತ್ರ ಪ್ರಣಮ್ ದೇವರಾಜ್ ‘ಖ/ಔ ಮುತ್ತಣ್ಣ’ ಚಿತ್ರದ ಮೂಲಕ ಸುದೀರ್ಘ ವಿರಾಮದ ನಂತರ ಬೆಳ್ಳಿತೆರೆಗೆ ಬರುತ್ತಿದ್ದಾರೆ. ಪುರಾತನ ಫಿಲ್ಮ್ ಬ್ಯಾನರ್ ಅಡಿಯಲ್ಲಿ ಶ್ರೀಕಾಂತ್ ಹುಣಸೂರು ನಿರ್ದೇಶಿಸಿದ ಈ ಕೌಟುಂಬಿಕ ಚಿತ್ರವು ತನ್ನ ಭಾವನಾತ್ಮಕ ಕಥಾಹಂದರದೊಂದಿಗೆ ಈಗಾಗಲೇ ತೀವ್ರ ಕುತೂಹಲ ಮೂಡಿಸಿದೆ.



ಎಲ್ಲವೂ ಅಂದುಕೊಂಡಂತೆ ಆಗಿದ್ದರೆ ಚಿತ್ರವು ಆಗಸ್ಟ್ 22 ರಂದು ಬಿಡುಗಡೆಯಾಗಬೇಕಿತ್ತು, ಆದರೆ, ಚಿತ್ರತಂಡ ಇದೀಗ ಚಿತ್ರದ ಬಿಡುಗಡೆ ದಿನಾಂಕವನ್ನು ಮುಂದೂಡಿದೆ. ಸೆಪ್ಟೆಂಬರ್ 12 ರಂದು ಚಿತ್ರವು ಕನ್ನಡ, ತೆಲುಗು ಮತ್ತು ಮಲಯಾಳಂ ಭಾಷೆಗಳಲ್ಲಿ ಏಕಕಾಲದಲ್ಲಿ ಬಿಡುಗಡೆಯಾಗಲಿದೆ. ಚಿತ್ರಕ್ಕೆ ಈಗಾಗಲೇ ಕೇರಳದಲ್ಲಿ ಬೇಡಿಕೆ ಉಂಟಾಗಿದ್ದು, ಚಿತ್ರತಂಡ ಏಕಕಾಲದಲ್ಲಿ ಬಹುಭಾಷೆಗಳಲ್ಲಿ ಬಿಡುಗಡೆ ಮಾಡಲು ಮುಂದಾಗಿದೆ.

ಚಿತ್ರದ ಟೀಸರ್ ಮತ್ತು ಹಾಡುಗಳನ್ನು ಈಗಾಗಲೇ ಬಿಡುಗಡೆ ಮಾಡಲಾಗಿದ್ದು, ಟ್ರೇಲರ್ ಆಗಸ್ಟ್ 22 ರಂದು ಬಿಡುಗಡೆಯಾಗಲಿದೆ.

ದಿಯಾ ಖ್ಯಾತಿಯ ಖುಷಿ ರವಿ ಪ್ರಣಮ್‌ಗೆ ಜೋಡಿಯಾಗಿ ನಟಿಸಿದ್ದಾರೆ. ರಂಗಾಯಣ ರಘು ತಂದೆಯ ಪಾತ್ರದಲ್ಲಿ ನಟಿಸುತ್ತಿದ್ದು, ಚಿತ್ರದ ಭಾವನಾತ್ಮಕ ಬಂಧವನ್ನು ಬಲಪಡಿಸುತ್ತಿದ್ದಾರೆ. ಇನ್ನುಳಿದಂತೆ ಸುಚೇಂದ್ರ ಪ್ರಸಾದ್, ಗಿರೀಶ್ ಶಿವಣ್ಣ, ತಬಲಾ ನಾನಿ, ಶ್ರೀನಿವಾಸ್ ಪ್ರಭು, ಸುಧಾ ಬೆಳವಾಡಿ ಮತ್ತು ಅರುಣ್ ಚಕ್ರವರ್ತಿ ಕೂಡ ಈ ಚಿತ್ರದಲ್ಲಿದ್ದಾರೆ.

## ಆಡಿಯೋ ರೈಟ್ಸ್ ದಾಖಲೆ ಮೊತ್ತಕ್ಕೆ ಮಾರಾಟ

ಸ್ಯಾಂಡಲ್ ವುಡ್ ನಲ್ಲಿ ಸಾಕಷ್ಟು ನಿರೀಕ್ಷೆಗಳನ್ನು ಮೂಡಿಸಿರುವ ದುನಿಯಾ ವಿಜಯ್ ಅಭಿನಯದ ಲ್ಯಾಂಡ್ ಲಾರ್ಡ್ ಚಿತ್ರದ ಆಡಿಯೋ ರೈಟ್ಸ್ ಆನಂದ್ ಆಡಿಯೋ ಪಾಲಾಗಿದೆ. ದಾಖಲೆ ಮೊತ್ತಕ್ಕೆ ಚಿತ್ರದ ಆಡಿಯೋ ರೈಟ್ಸ್ ಮಾರಾಟವಾಗಿದೆ.ಸಾರಥಿ ಫಿಲ್ಮ್ ಬ್ಯಾನರ್ ಅಡಿಯಲ್ಲಿ ಹೇಮಂತ್ ಗೌಡ ಕೆ.ಎಸ್ ಮತ್ತು ಕೆ.ವಿ. ಸತ್ಯಪ್ರಕಾಶ್ ನಿರ್ಮಿಸಿರುವ ಈ ಚಿತ್ರವನ್ನು ಜಡೇಶಾ ಕೆ. ಹಂಪಿ ನಿರ್ದೇಶಿಸಿದ್ದಾರೆ.

ಸೆಟ್ಟೇರಿದಾಗ್ಲೇ ಭಾರಿ ಸದ್ದು ಮಾಡಿದ್ದ ಈ ಚಿತ್ರದ ಬಹುತೇಕ ಚಿತ್ರೀಕರಣ ಪೂರ್ಣಗೊಂಡಿದ್ದು, ಪೋಸ್ಟ್ ಪ್ರೊಡಕ್ಷನ್ ಕೆಲಸಗಳು ಬಿರುಸಿನಿಂದ ಸಾಗಿದೆ.ಈ ನಡುವೆ ಚಿತ್ರತಂಡ ವರಮಹಾಲಕ್ಷ್ಮೀ ಹಬ್ಬದ ಪ್ರಯುಕ್ತ ಸಂತಸದ ಸುದ್ದಿಯೊಂದನ್ನ ಹಂಚಿಕೊಂಡಿದೆ.

# ವಿಕಲಚೇತನರಿಂದ ಅರ್ಜಿ ಆಹ್ವಾನ

**ಚಿತ್ರದುರ್ಗ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವಿವಿಧ ಫಲಾನುಭವಿ ಆಧಾರಿತ ಯೋಜನೆಗಳನ್ನು 2025-26ನೇ ಸಾಲಿನಲ್ಲಿ ನೇರ ನಗದು ವರ್ಗಾವಣೆ ಆನ್‌ಲೈನ್ ವೇದಿಕೆ ತಂತ್ರಾಂಶದಡಿ ಅಳವಡಿಸಿ, ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸೆಪ್ಟೆಂಬರ್ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಆಧಾರ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಪ್ರತಿಭಾವಂತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ನಿರುದ್ಯೋಗ ಭತ್ಯೆ, ಶಿಶುಪಾಲನಾ ಭತ್ಯೆ, ಮರಣ ಪರಿಹಾರ ನಿಧಿ, ಪ್ರತಿಭೆ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್‌ಕಿಟ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರ ಚಾಲಿತ ದ್ವಿಚಕ್ರ ವಾಹನ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆಯಂತ್ರ ಯೋಜನೆ, ಸಾಧನ ಸಲಕರಣೆ ಯೋಜನೆ, ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ಚಾಲಿತ ವ್ಹೀಲ್‌ಚೇರ್ ಯೋಜನೆಗಳಿಗೆ ವಿಕಲಚೇತನರಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಮೇಲ್ಕಂಡ ಯೋಜನೆಗಳಿಗೆ ಗ್ರಾಮ ಒನ್, ಕರ್ನಾಟಕ ಒನ್ ಮತ್ತು ಸೇವಾಸಿಂಧು ಪೋರ್ಟಲ್‌ನಡಿ (ೡಣಣಠಿ://ಜತಿಛಿಟಿಜಿuಣ.ಇಚಿಡಿಟಿಚಿ-ಣಚಿಞಚಿ.ರಿಡಿತ.ಟಿ/ಜತಿಛಿಟಿಜಿuಣ/ಇಚಿಟಿ-ಟಿಚಿಜಚಿ) ಆನ್‌ಲೈನ್ ಮೂಲಕ ವಿಕಲಚೇತನರು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಿದ ಸ್ವೀಕೃತಿಯೊಂದಿಗೆ ಎಲ್ಲ ಪೂರಕ ದಾಖಲಾತಿಗಳ ಹಾರ್ಡ್ ಪ್ರತಿಯನ್ನು ಆಯಾ ತಾಲ್ಲೂಕಿನ ತಾಲ್ಲೂಕು ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರು ಎಂ.ಆರ್. ಡಬ್ಲ್ಯೂಗಳಿಗೆ ಸಲ್ಲಿಸುವುದು. ಮಾಹಿತಿಗಾಗಿ ಎಂಆರ್‌ಡಬ್ಲ್ಯೂಗಳ ದೂರವಾಣಿ ಸಂಖ್ಯೆ ಚಿತ್ರದುರ್ಗ-9880821934, ಚಳ್ಳಕೆರೆ-9611266930, ಹಿರಿಯೂರು-9902888901, 9902898901, ಹೊಳಲ್ಕೆರೆ-9740030227, ಹೊಸದುರ್ಗ-9741829990, ಮೊಳಕಾಲ್ಮುರು-9742725576 ಹಾಗೂ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ ದೂರವಾಣಿ ಸಂಖ್ಯೆ 08194-235284 ಅನ್ನು ಸಂಪರ್ಕಿಸಬಹುದು.

# ಚಿತ್ರದುರ್ಗ ಡಿಸಿಸಿ ಬ್ಯಾಂಕ್: ರೂ.8.3 ಕೋಟಿ ನಿವ್ವಳ ಲಾಭ : ಸಚಿವ ಡಿ.ಸುಧಾಕರ್

**ಚಿತ್ರದುರ್ಗ:** ಚಿತ್ರದುರ್ಗ ಡಿ.ಸಿ.ಸಿ ಬ್ಯಾಂಕ್ 2024-25ನೇ ಸಾಲಿನಲ್ಲಿ ಬ್ಯಾಂಕ್ ರೂ.1338.40 ಕೋಟಿ ವ್ಯವಹಾರ ನಡೆಸಿದ್ದು, ರೂ.8 ಕೋಟಿ 3 ಲಕ್ಷ ನಿವ್ವಳ ಲಾಭಗಳಿಸಿ ಪ್ರಗತಿಯತ್ತ ಸಾಗುತ್ತಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಚಿತ್ರದುರ್ಗ ಡಿಸಿಸಿ ಬ್ಯಾಂಕಿನ ಅಧ್ಯಕ್ಷ ಡಿ.ಸುಧಾಕರ್

ಚಿತ್ರದುರ್ಗ ಡಿ.ಸಿ.ಸಿ ಬ್ಯಾಂಕಿನಲ್ಲಿ ಈಚೆಗೆ ನಡೆದ 2024-25ನೇ ಸಾಲಿನ ವಾರ್ಷಿಕ ಮಹಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿಗೆ ಸರ್ಕಾರದಿಂದಾಗಲೀ ಅಥವಾ ಇನ್ನಾವುದೇ ಮೂಲದಿಂದಾಗಲೀ ಹಣಕಾಸಿನ ಅನುದಾನ ಲಭ್ಯವಾಗುತ್ತಿರುವುದಿಲ್ಲ. ಬ್ಯಾಂಕ್ ಸಾರ್ವಜನಿಕರಿಂದ ಠೇವಣಿ ಸಂಗ್ರಹಣೆ ಮಾಡಿ ಮತ್ತು ನಬಾರ್ಡ್ ಮತ್ತು ಅಪೆಕ್ಸ್ ಬ್ಯಾಂಕಿನಿಂದ ಸಾಲ ಪಡೆದು ರೈತರಿಗೆ ಸಾಲ ವಿತರಿಸುತ್ತಿದೆ. ಬ್ಯಾಂಕಿಗೆ ಆರಂಭದಲ್ಲಿ ಸುಮಾರು 25 ವರ್ಷಗಳ ಹಿಂದೆ ಸರ್ಕಾರದಿಂದ ರೂ.1. ಕೋಟಿ ಷೇರು ಹಣ ಬಂದಿರುತ್ತದೆ. ಅದರೂ ಚಿತ್ರದುರ್ಗ ಡಿ.ಸಿ.ಸಿ ಬ್ಯಾಂಕ್



ರೈತರಿಗೆ ಆರ್ಥಿಕವಾಗಿ ನೆರವು ನೀಡುವ ಕೆಲಸ ಮಾಡುತ್ತಿದೆ ಎಂದು ತಿಳಿಸಿದರು.

ಬ್ಯಾಂಕಿನ ಎಲ್ಲಾ ಸದಸ್ಯ ಸಹಕಾರ ಸಂಘಗಳು ಬದ್ಧತೆಯಿಂದ ಕೆಲಸ ನಿರ್ವಹಿಸಿದರೆ ಹಾಗೂ ಸುಸ್ತಿ ಸಾಲ ಮರುಪಾವತಿ ಮಾಡಿದರೆ ನಿಮ್ಮ ಡಿ.ಸಿ.ಸಿ ಬ್ಯಾಂಕ್ ಉಳಿಯುತ್ತದೆ ಹಾಗೂ ಬ್ಯಾಂಕಿನಿಂದ ಎಲ್ಲಾ ರೀತಿಯ ಸಾಲ ಸೌಲಭ್ಯ ನೀಡಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಬ್ಯಾಂಕ್ 2024-25ನೇ ಸಾಲಿನಲ್ಲಿ ಕೃಷಿ ಉದ್ದೇಶಗಳಿಗಾಗಿ 56950 ರೈತರಿಗೆ ರೂ.48689.52 ಲಕ್ಷ ಬೆಳೆ ಸಾಲ ವಿತರಣೆ ಮಾಡಿದೆ. ಈ ಪೈಕಿ ಪರಿಶಿಷ್ಟ ಜಾತಿಯ 7043 ರೈತರಿಗೆ ರೂ.4791.61 ಲಕ್ಷ, ಪರಿಶಿಷ್ಟ ಪಂಗಡ 8704 ರೈತರಿಗೆ ರೂ.6573.55 ಲಕ್ಷ ಬೆಳೆ ಸಾಲ ವಿತರಣೆ ಮಾಡಲಾಗಿದೆ. ಒಟ್ಟಾರೆ ಎಸ್.ಸಿ, ಎಸ್.ಟಿ ವರ್ಗದ ರೈತರಿಗೆ 15747 ರೈತರಿಗೆ ರೂ.11365.16 ಲಕ್ಷ ಬೆಳೆ ಸಾಲ ವಿತರಣೆ ಮಾಡಲಾಗಿದೆ. 857 ರೈತರಿಗೆ ರೂ.5334.71 ಲಕ್ಷ ಮಧ್ಯಮಾವಧಿ ಸಾಲ ವಿತರಣೆ ಮಾಡಿದೆ. ಅಲ್ಲದೇ 2025-26ನೇ ಸಾಲಿಗೆ 3000 ಹೊಸ ರೈತರಿಗೆ ರೂ.15.00 ಕೋಟಿ ಅಲ್ಪಾವಧಿ ಕೃಷಿ ಬೆಳೆ ಸಾಲ, 1000 ಹೊಸ ರೈತರಿಗೆ ರೂ.52.00 ಕೋಟಿ ಮಧ್ಯಮಾವಧಿ ಸಾಲ ಮತ್ತು ರೂ.285.10 ಕೋಟಿ ಕೃಷಿಯೇತರ ಸಾಲ ನೀಡುವ ಗುರಿ ಹೊಂದಲಾಗಿದೆ. ಆದ್ದರಿಂದ ಈ ಸಾಲಗಳನ್ನು ನೀಡಲು ಠೇವಣಿ ಸಂಗ್ರಹಣೆ ಬಹಳ ಮುಖ್ಯವಾಗಿರುತ್ತದೆ ಎಂದು ಹೇಳಿದರು.

2025ರ ಮಾರ್ಚ್ 31ರ ಅಂತ್ಯಕ್ಕೆ ರೂ.630.68 ಕೋಟಿ ಠೇವಣಿ ಸಂಗ್ರಹಿಸಿದ್ದು, 2025-26ನೇ ಸಾಲಿಗೆ ರೂ.739.68 ಕೋಟಿ ಠೇವಣಿ ಸಂಗ್ರಹಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

ಸಿಡಿಸಿಸಿ ಬ್ಯಾಂಕಿನ ನಿರ್ದೇಶಕರು ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮಾತನಾಡಿ, ಬ್ಯಾಂಕ್ ಪ್ರಗತಿಯತ್ತ ಸಾಗುತ್ತಿದ್ದು, ಬ್ಯಾಂಕಿನ ಅಭಿವೃದ್ದಿಗೆ ತಮ್ಮೆಲ್ಲರ ಸಹಕಾರ ಮುಖ್ಯವಾಗಿದ್ದು, ಪ್ರಸ್ತುತ ಸಾಲಿನಲ್ಲಿ ಬ್ಯಾಂಕ್ ರೂ.8.03 ಕೋಟಿ ಲಾಭಗಳಿಸಿ ಸದಸ್ಯರಿಗೆ ಶೇ.2% ಡಿವಿಡೆಂಡ್ ನೀಡಿರುವುದು ಸಂತಸ ತಂದಿದೆ.

ಶೀಘ್ರದಲ್ಲೇ ಭದ್ರ ಮೇಲ್ದಂಡೆ ಯೋಜನೆಯು ಪೂರ್ಣಗೊಳ್ಳಲ್ಲಿದ್ದು, ಇದರಿಂದ ಜಿಲ್ಲೆಯ ರೈತರಿಗೆ ಅನೂಕೂಲವಾಗಲಿದೆ. ಪ್ರಯುಕ್ತ ರೈತರು ತಾವು ಪಡೆದ ಸಾಲವನ್ನು ಸೂಕ್ತ ಸಮಯಕ್ಕೆ ಮರುಪಾವತಿಸಿ ಬ್ಯಾಂಕಿನಿಂದ ಹೆಚ್ಚಿನ ಸಾಲ ಸೌಲಭ್ಯ ಪಡೆಯಲು ಸೂಚಿಸಿದರು. ಬ್ಯಾಂಕಿನ ಅಧ್ಯಕ್ಷರಾದ ಡಿ.ಸುಧಾಕರ್ ಅವರಿಗೆ ರಾಜ್ಯ ಸರ್ಕಾರವು ಸಹಕಾರ ರತ್ನ ಪ್ರಶಸ್ತಿ ನೀಡಿ ಗೌರವಿಸಿರುವುದು. ನಮ್ಮೆಲ್ಲರಿಗೂ ಅತೀವ ಸಂತೋಷ ಉಂಟು ಮಾಡಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸಹಕಾರ ರತ್ನ ಪ್ರಶಸ್ತಿ ಪಡೆದ ಬ್ಯಾಂಕಿನ ಅಧ್ಯಕ್ಷ ಡಿ.ಸುಧಾಕರ್ ಅವರಿಗೆ ಬ್ಯಾಂಕಿನ ಉಪಾಧ್ಯಕ್ಷರು ಮತ್ತು ನಿರ್ದೇಶಕರು, ಬ್ಯಾಂಕಿನ ವತಿಯಿಂದ ಸನ್ಮಾನಿಸಲಾಯಿತು.

ಸಭೆಯಲ್ಲಿ ಸಿಡಿಸಿಸಿ ಬ್ಯಾಂಕಿನ ಉಪಾಧ್ಯಕ್ಷ ಹೆಚ್.ಬಿ. ಮಂಜುನಾಥ್, ಬ್ಯಾಂಕಿನ ನಿರ್ದೇಶಕರಾದ ಎಸ್.ಆರ್.ಗಿರೀಶ್, ಹೆಚ್.ಟಿ.ನಾಗರೆಡ್ಡಿ, ಎಂ.ನಿಶಾನಿ ಜಯಣ್ಣ, ವಿನೋದಸ್ವಾಮಿ, ಕೆ.ಜಗಣ್ಣ, ಹೆಚ್.ಎಂ ದ್ಯಾಮಣ್ಣ, ರಘುರಾಮರೆಡ್ಡಿ, ಪಿ.ತಿಪ್ಪೇಸ್ವಾಮಿ, ಟಿ.ಮಹಾಂತೇಶ್, ಡಾ.ಕೆ.ಅನಂತ್, ಓ. ಮಂಜುನಾಥ್, ವ್ಯವಸ್ಥಾಪಕ ನಿರ್ದೇಶಕರಾದ ಇಲ್ಯಾಸ್ ಉಲ್ಲಾ ಷರೀಫ್, ಸಹಕಾರ ಸಂಘಗಳ ಉಪ ನಿಬಂಧಕರಾದ ಆರ್. ಎಸ್.ದಿಲೀಪ್‌ಕುಮಾರ್, ವೃತ್ತಿಪರ ನಿರ್ದೇಶಕರಾದ ಎ.ಸುಮಂತ್, ಸಿ.ಇ.ಮಹೇಶ್ವರಪ್ಪ ಮತ್ತು ಬ್ಯಾಂಕಿನ ಸಿಬ್ಬಂದಿಗಳು, ಜಿಲ್ಲೆಯ ವಿವಿಧ ಸಹಕಾರ ಸಂಘಗಳ ಅಧ್ಯಕ್ಷರುಗಳು, ಉಪಾಧ್ಯಕ್ಷರುಗಳು, ನಿರ್ದೇಶಕರು ಉಪಸ್ಥಿತರಿದ್ದರು.

# ಧರ್ಮಸ್ಥಳದ ಪ್ರಕರಣ ಎನ್‌ಐಎ ಹಾಗೂ ಇಡಿ ತನಿಖೆಗೆ ಪ್ರಭಂಜನ್ ಒತ್ತಾಯ

**ಚಿತ್ರದುರ್ಗ:** ಧರ್ಮಸ್ಥಳದ ವಿಚಾರದಲ್ಲಿ ನಡೆದಂತಹ ಅಪಪ್ರಚಾರದ ಹಿಂದೆ ದೊಡ್ಡ ಮಟ್ಟದ ಷಡ್ಯಂತರ ನಡೆದಿದೆ.ಇದಕ್ಕೆ ವಿದೇಶಗಳಿಂದ ಹಾಗೂ ಕ್ರಿಶ್ಚಿಯನ್ಮಿಷನರಿಗಳಿಂದ ಹಣದ ನೆರವು ಬಂದಿದೆ.ಇದರಿಂದ ಹಿಂದೂಗಳ ಧಾರ್ಮಿಕ ಹಾಗೂ ಭಾವನೆ ಕ್ಷೇತ್ರವಾದ ಧರ್ಮಸ್ಥಳದ ಮೇಲೆ ಅಪಪ್ರಚಾರ ಮಾಡುತ್ತಿದ್ದಾರೆ ಇದನ್ನು ವಿಶ್ವ ಹಿಂದೂ ಪರಿಷತ್ ಹಾಗೂ ಭಜರಂಗದಳ ಖಂಡಿಸುತ್ತದೆ.ಈ ಪ್ರಕರಣವನ್ನು ಎನ್‌ಐಎ ಹಾಗೂ ಇಡಿ ತನಿಖೆಗೆ ವಯಿಸುವಂತೆ ಒತ್ತಾಯಿಸಿ ಜಿಲ್ಲಾಧಿಕಾರಿಗಳ ಮುಖಾಂತರ ಮಾನ್ಯ ಪ್ರಧಾನಮಂತ್ರಿಗಳಿಗೆ ಹಾಗೂ ಗೃಹ ಸಚಿವರಿಗೆ ಪತ್ರ ಬರೆಯಲಾಗುವುದು ಎಂದು ವಿಶ್ವ ಹಿಂದೂ ಪರಿಷತ್‌ನ ದಕ್ಷಿಣ ಪ್ರಾಂತ್ಯದ ಸಂಚಾಲಕರಾದ ಪ್ರಭಂಜನ್ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಹಿಂದೂ ಮಹಾ



ಗಣಪತಿಯ ಮಹಾ ಮಂಟಪದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಧರ್ಮಸ್ಥಳ ಕ್ಷೇತ್ರ ಹಲವಾರು ವರ್ಷಗಳಿಂದ ಹಿಂದೂಗಳ ಧಾರ್ಮಿಕ ಕೇಂದ್ರವಾಗಿದೆ.. ಇಲ್ಲಿಗೆ ದೇಶ/ವಿದೇಶಗಳಿಂದಲೂ ಭಕ್ತಾದಿಗಳು ಆಗಮಿಸುವ ಮೂಲಕ ತಮ್ಮ ಭಕ್ತಿ ಸಮರ್ಪಣೆ ಮಾಡುತ್ತಿದ್ದಾರೆ... ಆದರೆ ಭಕ್ತಿ ಭಾವನೆ ಹಾಗೂ ಹಿಂದೂ ಧರ್ಮಕ್ಕೆ ಧಕ್ಕೆ ತರುವಂತಹ ಷಡ್ಯಂತರ ನಡೆಯುತ್ತಿದೆ. ಧರ್ಮಸ್ಥಳ ಕ್ಷೇತ್ರವು ರಾಜ್ಯದಲ್ಲಿ ಜನೋಪಕಾರಿ ಕಾರ್ಯಕ್ರಮಗಳನ್ನು ಮಾಡುವುದರ ಮೂಲಕ ಜನತೆಗೆ ಹತ್ತಿರವಾಗುತ್ತಿದೆ ಇದನ್ನು ಸಹಿಸದ ಕೆಲವು ಸಂಘಟನೆಗಳು ಹಾಗೂ ಕ್ರಿಶ್ಚಿಯನ್ ಮಿಷನರಿಗಳು ಇದಕ್ಕೆ ಧಕ್ಕೆ ತರುವಂತಹ ಕೆಲಸ ಮಾಡಲು ಮುಂದಾಗಿವೆ ಇದನ್ನು ಹಿಂದೂಗಳಾದ ನಾವು ಸಹಿಸುವುದಿಲ್ಲ ಎಂದು ವಿರೋಧಿಗಳಿಗೆ ಎಚ್ಚರಿಕೆಯನ್ನು ನೀಡಿದರು.

ಈ ಪ್ರಕರಣದಲ್ಲಿ ಪಿಎಫ್‌ಐ ಸಂಘಟನೆಯ ಪ್ರತಿರೂಪವಾಗಿರುವ ಎಸ್‌ಡಿಪಿಐ ಸಂಘಟನೆಯೂ ಕುಮ್ಮಕ್ಕು ನೀಡುತ್ತಿದೆ. ಅಲ್ಲಿ ಏನು ಆಗದಿದ್ದರೂ ಸಹ ಏನೋ ಆಗಿದೆ ಎನ್ನುವ ರೀತಿಯಲ್ಲಿ ವಾತಾವರಣವನ್ನು ನಿರ್ಮಿಸಿ ಯಾರೋ ಅನಾಮಿಕ ವ್ಯಕ್ತಿಯಿಂದ ದೂರನ್ನು ಕೊಡಿಸಿವೆ. ಇದನ್ನು ಪರಿಗಣಿಸಿದ ಸರ್ಕಾರ ಎಸ್‌ಐಟಿಗೆ ನೀಡಿ ತನಿಖೆ ನಡೆಸುತ್ತಿದ್ದರು ಸಹ ಅಲ್ಲಿ ಏನೂ ಸಹ ಸಿಕ್ಕಿಲ್ಲ ಇದರಿಂದಲೇ ತಿಳಿಯುತ್ತೆ ಇದೊಂದು ಷಡ್ಯಂತರ ಎಂದು ಗೊತ್ತಾಗುತ್ತದೆ. ಈ ಪ್ರಕರಣದ ಹಿಂದೆ ಮಹೇಶ್ ಶೆಟ್ಟಿ ತಿಮ್ಮರೋಡಿರವರ ಹೆಸರು ಸಹ ಇದ್ದು ಧರ್ಮಸ್ಥಳ ಅಪಪ್ರಚಾರ ನಡೆದ ಘಟನೆಯಲ್ಲಿ ಪಾಲುದಾರನೆಂದು ಕಾಣುತ್ತಿದೆ.. ಇವರ ಬಗ್ಗೆನೂ ಸಹ ತನಿಖೆ ನಡೆಸಿ ಕ್ರಮ ವಹಿಸಬೇಕೆಂದು ಒತ್ತಾಯಿಸುತ್ತೇವೆ ಎಂದು ತಿಳಿಸಿದರು.

ಗೋಷ್ಠಿಯಲ್ಲಿ 2025ರ ಹಿಂದೂ ಮಾಹಾ ಗಣಪತಿಯ ಸಮಿತಿಯ ಅಧ್ಯಕ್ಷರಾದ ಶರಣ್ ಕುಮಾರ್, ವಿಶ್ವ ಹಿಂದು ಪರಿಷತ್‌ನ ಜಿಲ್ಲಾಧ್ಯಕ್ಷರಾದ ಷಡಾಕ್ಷರಪ್ಪ, ಕಾರ್ಯದರ್ಶಿ ಕೇಶವ ಭಾಗವಹಿಸಿದ್ದರು.

## ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

**ಚಿಕ್ಕಮಗಳೂರು, ಆ.28:** ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಪುರುಷೋತ್ತಮ ಬಿಳಿಮಲೆ ಅವರು ಆಗಸ್ಟ್ 29 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ಆ.29 ರಂದು ಬೆಳಿಗ್ಗೆ 10 ಗಂಟೆಗೆ ತರೀಕೆರೆ ತಾಲ್ಲೂಕು ರಂಗೇನಹಳ್ಳಿಗೆ ಆಗಮಿಸಲಿರುವ ಅಧ್ಯಕ್ಷರು, ಬೆಳಿಗ್ಗೆ 10.30ಕ್ಕೆ ಲಕ್ಕವಳ್ಳಿ ಹೋಬಳಿ ರಂಗೇನಹಳ್ಳಿಯ ಶ್ರೀ ಅಂಬಾ ಭವಾನಿ ಸಮುದಾಯ ಭವನದಲ್ಲಿ ಸದ್ಗುರು ಜನಸೇವಾ ಫೌಂಡೇಶನ್, ಅರಿವು ವೇದಿಕೆ, ಜಿಲ್ಲಾ ಮತ್ತು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸಹಯೋಗದಲ್ಲಿ ಹಮ್ಮಿಕೊಂಡಿರುವ ರಾಷ್ಟ್ರಮಟ್ಟದ ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ ಕಾರ್ಯಾಗಾರದಲ್ಲಿ ಭಾಗವಹಿಸಲಿದ್ದಾರೆ. ಅನಂತರ ಶಿವಮೊಗ್ಗಕ್ಕೆ ತೆರಳಲಿದ್ದಾರೆ.

## ಫೇಕ್ ಕಿಡ್ನ್ಯಾಪ್ ಕೇಸ್‌ನಲ್ಲಿ ಅಮೆರಿಕದಲ್ಲಿ ಭಾರತೀಯನಿಗೆ ಶಿಕ್ಷೆ

**ಜಾರ್ಜಿಯಾ:** ಸುಳ್ಳು ಅಪಹರಣ ಆರೋಪದಲ್ಲಿ ಯುಎಸ್ (ಗಖ) ನಲ್ಲಿ ಬಂಧನಕ್ಕೆ ಒಳಗಾಗಿದ್ದ ಭಾರತೀಯ ಮೂಲದ ವ್ಯಕ್ತಿಯೊಬ್ಬರು ತಾವು ಜೈಲಿನಲ್ಲಿ ಅನುಭವಿಸಿದ ಕಿರಿಕಿರಿಯನ್ನು ಹೇಳಿಕೊಂಡಿದ್ದು, ಕಾನೂನು ಜಾರಿ ಸಂಸ್ಥೆಗಳು ಸಾರ್ವಜನಿಕವಾಗಿ ತಮ್ಮ ಬಳಿ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದ್ದಾರೆ.



ಜಾರ್ಜಿಯಾ ವಾಲ್‌ಮಾರ್ಟ್‌ನಲ್ಲಿ ಸುಳ್ಳು ಅಪಹರಣ ಆರೋಪದಿಂದ ಭಾರತೀಯ ಮೂಲದ ಮಹೇಂದ್ರ ಪಟೇಲ್ 47 ದಿನಗಳ ಸೆರೆಮನೆ ವಾಸವನ್ನು ಅನುಭವಿಸಿದರು. ಕಾಬ್ ಕೌಂಟಿ ಜೈಲಿನಲ್ಲಿದ್ದ ಅವರು ತಾವು ಜೈಲಿನಲ್ಲಿ ಅನುಭವಿಸಿದ ತೀವ್ರ ಕಷ್ಟಕರವಾದ ಅನುಭವವನ್ನು ಹೇಳಿಕೊಂಡಿದ್ದಾರೆ.

ಸುಳ್ಳು ಅಪಹರಣ ಆರೋಪದಲ್ಲಿ ಮಹೇಂದ್ರ ಪಟೇಲ್ 47 ದಿನಗಳ ಕಾಲ ಕಾಬ್ ಕೌಂಟಿ ಜೈಲಿನಲ್ಲಿದ್ದರು. ಇದಕ್ಕಾಗಿ ಈಗ ಅವರು ಜಾರ್ಜಿಯಾದ ಕಾನೂನು ಜಾರಿ ಸಂಸ್ಥೆಗಳು ತಮ್ಮ ಬಳಿ ಸಾರ್ವಜನಿಕ ಕ್ಷಮೆಯಾಚನೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಜಾರ್ಜಿಯಾ ವಾಲ್‌ಮಾರ್ಟ್‌ನಲ್ಲಿ 2 ವರ್ಷದ ಮಗನನ್ನು ತನ್ನಿಂದ ಕಸಿದುಕೊಳ್ಳಲು ಪ್ರಯತ್ನಿಸುತ್ತಿದ್ದಾರೆ ಎಂದು ತಾಯಿಯೊಬ್ಬಳು ಆರೋಪಿಸಿದ ಅನಂತರ ಮಹೇಂದ್ರ ಪಟೇಲ್ ಅವರನ್ನು ಬಂಧಿಸಲಾಗಿತ್ತು.

ಏಪ್ರಿಲ್ 3ರಂದು ಅವರ ಮೇಲೆ ದೋಷಾರೋಪಣೆ ಮಾಡಲಾಯಿತು. ಬಳಿಕ ಪಟೇಲ್ ಅವರನ್ನು 47 ದಿನಗಳ ಕಾಲ ಕಾಬ್ ಕೌಂಟಿ ಜೈಲಿನಲ್ಲಿ ಬಂಧನದಲ್ಲಿ ಇರಿಸಲಾಗಿತ್ತು.

# ಮಲೆನಾಡಿನಲ್ಲಿ ಅತೀ ಹೆಚ್ಚು ಮಳೆ ಕಾಫಿ, ಬೆಳೆಹಾನಿ ಪರಿಹಾರಕ್ಕೆ ಆಗ್ರಹ

**ಚಿಕ್ಕಮಗಳೂರು:** ಅತಿಯಾದ ಮಳೆ, ಶೀತಗಾಳಿಯಿಂದ ಕಾಫಿ ತೋಟಗಳಲ್ಲಿ ಬೆಳೆ ನಷ್ಟವಾಗಿದ್ದು ಸಂಕಷ್ಟದಲ್ಲಿರುವ ಕಾಫಿ ಬೆಳೆಗಾರರ ನೆರವಿಗೆ ಸರಕಾರ ಧಾವಿಸಬೇಕು ಎಂದು ಕರ್ನಾಟಕ ಬೆಳೆಗಾರರ ಒಕ್ಕೂಟ(ಕೆಜಿಎಫ್) ಆಗ್ರಹಿಸಿದೆ.

ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ಅಧ್ಯಕ್ಷ ಹಳಸೆ ಶಿವಣ್ಣ, ಹಾಸನ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ನಿರಂತರವಾಗಿ ಸುರಿದ ಅತಿಯಾದ ಮಳೆಯಿಂದ ಕಾಫಿ ಫಸಲು ಅಪಾರ ಪ್ರಮಾಣದಲ್ಲಿ ನೆಲಕಚ್ಚಿದೆ.



ಈ ಬಗ್ಗೆ ಕಾಫಿ ಮಂಡಳಿ ಅಧಿಕಾರಿಗಳು ಸರಕಾರ-ಕ್ಕೆ ವರದಿ ಸಲ್ಲಿಸಿದ್ದಾರೆ. ವರದಿ ಸಲ್ಲಿಕೆ ನಂತರ ಮತ್ತೆ ಮುಂದುವರಿದ ಶೀತಗಾಳಿ ಮತ್ತು ಮಳೆಯಿಂದ ವಿಪರೀತ ಬೆಳೆನಷ್ಟ ಉಂಟಾಗಿದ್ದು, ಕಾಫಿ ಜತೆಗೆ ಮಲೆನಾಡಿನ ಪ್ರಮುಖ ಬೆಳೆಗಳಾದ ಕಾಳು ಮೆಣಸು, ಅಡಿಕೆ ಬೆಳೆ ಕೂಡ ಕೊಳೆರೋಗಕ್ಕೆ ತುತ್ತಾಗಿವೆ. ಈ ಸಂದರ್ಭದಲ್ಲಿ ಸರಕಾರ ಬೆಳೆಗಾರರ ನೆರವಿಗೆ ಬರಬೇಕು. ಕಂದಾಯ ಇಲಾಖೆ, ಕಾಫಿ ಮಂಡಳಿ, ಮತ್ತು ತೋಟಗಾರಿಕೆ ಇಲಾಖೆ ಅಕಾರಿಗಳು ತೋಟಗಳಿಗೆ ಭೇಟಿನೀಡಿ ನಷ್ಟದ ಬಗ್ಗೆ ಜಂಟಿ ಸಮೀಕ್ಷೆ ನಡೆಸಿ ಸರಕಾರಕ್ಕೆ ವರದಿ ಸಲ್ಲಿಸಬೇಕು. ನಷ್ಟಕ್ಕೆ ಸೂಕ್ತ ಪರಿಹಾರ ಒದಗಿಸಬೇಕು ಎಂದು ಆಗ್ರಹಿಸಿದರು.

**ಕಾಡಾನೆ ಹಾವಳಿ ತಪ್ಪಿಸಿ:** ಕಾಫಿ ಬೆಳೆಯುವ ಮೂರು ಜಿಲ್ಲೆಗಳಲ್ಲಿ ಕಾಡಾನೆ ಹಾವಳಿ ವಿಪರೀತವಾಗಿದ್ದು, ಕಾಫಿ ತೋಟಗಳನ್ನೇ ತಮ್ಮ ವಾಸಸ್ಥಾನವನ್ನಾಗಿಸಿಕೊಂಡಿವೆ. ಇದರಿಂದ ಕಾಫಿ, ಅಡಿಕೆ, ಕಾಳು ಮೆಣಸು ಮತ್ತಿತರೆ ಬೆಳೆಗಳನ್ನು ಲೂಟಿಮಾಡಿ ಬೆಳೆಗಾರರ ಸಂಕಷ್ಟ ಅನುಭವಿಸುವಂತಾಗಿದೆ. ಜತೆಗೆ ಕಾರ್ಮಿಕರು ಕಾಫಿತೋಟಕ್ಕೆ ಕೆಲಸಕ್ಕೆ ಬರಲು ಹಿಂದೇಟು ಹಾಕುತ್ತಿದ್ದಾರೆ. ಕಾಡಾನೆಗಳ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು. ಅರಣ್ಯ ಅಧಿಕಾರಿಗಳು ಕಾಡಾನೆಯಿಂದ ಯಾರಾದರೂ ಮೃತಪಟ್ಟಾಗ ನೀಡುವ ಭರವಸೆಗಳು ಕೂಡಲೇ ಅನುಷ್ಠಾನವಾಗುವಂತೆ ನೋಡಿಕೊಳ್ಳಬೇಕು ಎಂದು ಮನವಿ ಮಾಡಿದರು.

# ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣ ತಡೆಗಟ್ಟಲು ಅಧಿಕಾರಿಗಳ ಸಹಕಾರ ಅಗತ್ಯ: ಮಹಮ್ಮದ್ ಹಾರಿಸ್ ಸುಮೇರ್

## ಪೋಕ್ಸೋ ಕಾಯ್ದೆ ಅನುಷ್ಠಾನ; ಕಲಬುರಗಿ ವಿಭಾಗೀಯ ಮಟ್ಟದ ಸಮಾಲೋಚನಾ ಸಭೆಯಲ್ಲಿ ಜಿಪಂ ಸಿಇಒ ಅಭಿಮತ

**ಬಳ್ಳಾರಿ :** ಮಕ್ಕಳ ಮೇಲಿನ ದೌರ್ಜನ್ಯಗಳನ್ನು ತಡೆಗಟ್ಟಲು ವಿವಿಧ ಇಲಾಖೆಗಳ ಪರಸ್ಪರ ಸಹಕಾರ ಮತ್ತು ಸಹಯೋಗದೊಂದಿಗೆ ಕಾರ್ಯನಿರ್ವಹಿಸಬೇಕಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ನಜೀರ್ ಸಾಬ್ ಸಭಾಂಗಣದಲ್ಲಿ ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬಳ್ಳಾರಿ ಹಾಗೂ ಎನ್‌ಫೋಲ್ಡ್ ಪ್ರೋಆಕ್ಟಿವ್ ಹೆಲ್ತ್ ಟ್ರಸ್ಟ್, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಬಳ್ಳಾರಿ, ವಿಜಯನಗರ, ಕೊಪ್ಪಳ, ರಾಯಚೂರು, ಯಾದಗಿರಿ, ಕಲಬುರಗಿ ಮತ್ತು ಬೀದರ್ ಜಿಲ್ಲೆಗಳ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರು, ವಿಶೇಷ ಮಕ್ಕಳ ಪೊಲೀಸ್ ಘಟಕ, ಸರ್ಕಾರಿ ಅಭಿಯೋಜಕರು, ವೈದ್ಯಾಧಿಕಾರಿಗಳು, ಬಾಲಮಂದಿರದ ಅಧೀಕ್ಷಕರು, ಕಾನೂನು ಪರಿವೀಕ್ಷಣಾಧಿಕಾರಿಗಳು, ಬೆಂಬಲ ವ್ಯಕ್ತಿಗಳು ಮತ್ತು ಸ್ವಯಂಸೇವಾ ಸಂಸ್ಥೆಯ ಮುಖ್ಯಸ್ಥರಿಗೆ ಹಮ್ಮಿಕೊಂಡಿದ್ದ ಒಂದು ದಿನದ ಸಮಾಲೋಚನಾ ಸಭೆ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ರಕ್ಷಣೆಗೆ ಹಲವಾರು ಇಲಾಖೆಗಳು



ಸಹಭಾಗಿದಾರರಾಗಿ ಕಾರ್ಯನಿರ್ವಹಿಸುತ್ತಿವೆ. ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಹಿಳೆಯರ ಮತ್ತು ಮಕ್ಕಳ ಕಾವಲು ಸಮಿತಿಗಳು ರಚಿಸಿದ್ದು, ಅವುಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕಾಗಿದೆ ಎಂದರು.

ಸ್ಥಳೀಯ ಪಂಚಾಯತಿಯ ಸಂಬಂಧಿತ ಅಧಿಕಾರಿಗಳು ಶಾಲೆಗಳಿಗೆ ಭೇಟಿ ನೀಡುವ ಮೂಲಕ ಮಕ್ಕಳ ಹಾಜರಾತಿ ಮತ್ತು ಸುರಕ್ಷತೆ ಬಗ್ಗೆ ಖಾತ್ರಿಪಡಿಸಿಕೊಳ್ಳಬೇಕು. ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ವಿಶೇಷ ಮಕ್ಕಳ ಪೊಲೀಸ್ ಘಟಕ, ಶಿಕ್ಷಣ ಇಲಾಖೆ ಜೊತೆಗೂಡಿ ಶಾಲೆಯಲ್ಲಿರುವ ಸೌಲಭ್ಯಗಳನ್ನು ಬಳಸಿಕೊಂಡು ಆನ್‌ಲೈನ್ ಮೂಲಕ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನಿ ಅವರು ಮಾತನಾಡಿ, ಮಕ್ಕಳ ಮೇಲೆ ಲೈಂಗಿಕ ಕಿರುಕುಳ, ದೌರ್ಜನ್ಯ ಪ್ರಕರಣಗಳು ಕಂಡುಬಂದ ಕೂಡಲೇ ಅಧಿಕಾರಿಗಳು ಎಫ್.ಐ.ಆರ್ ದಾಖಲಿಸಬೇಕು. ಪೋಕ್ಸೋ ಕಾಯ್ದೆಯು ಒಂದು ವಿಶಿಷ್ಟ ಕಾಯ್ದೆಯಾಗಿದ್ದು, ಈ ಕಾಯ್ದೆಯಡಿ ಅಪರಾಧಿಗಳಿಗೆ 3 ವರ್ಷದಿಂದ ಜೀವಾವಧಿ ಶಿಕ್ಷೆಗೆ ಅವಕಾಶವಿದೆ ಎಂದು ತಿಳಿಸಿದರು.

ಪೋಕ್ಸೋ ಕಾಯ್ದೆಯ ಕುರಿತು ಜನರಿಗೆ ಇನ್ನೂ ಹೆಚ್ಚಿನ ಜಾಗೃತಿ ಮೂಡಿಸುವ ಅವಶ್ಯಕತೆ ಇದೆ. ಹಾಗಾಗಿ ಇಲಾಖೆಗಳ ನಡುವೆ ಉತ್ತಮ ಸಂವಹನ ಮತ್ತು ಸಹಯೋಗದ ಅವಶ್ಯಕತೆ ಇದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮಹಿಳಾ ಮತ್ತು ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ್. ಎಂ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಗ್ರಾಮ ಮತ್ತು ಪಟ್ಟಣಗಳ ಸ್ಥಳೀಯ ಆಡಳಿತ ಸಂಸ್ಥೆಗಳು ಮಕ್ಕಳ ಸುರಕ್ಷತೆಯ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು. ಪೋಕ್ಸೋ ಪ್ರಕರಣಗಳನ್ನು ಉತ್ತಮವಾಗಿ ನಿರ್ವಹಿಸಲು ಈ ಕಾಯ್ದೆಯ ವಿವಿಧ ಆಯಾಮಗಳ ಕುರಿತು ಅರಿತುಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸುಭದ್ರಾ ದೇವಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳ ರಕ್ಷಣೆ ಮತ್ತು ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳ ಮೂಲಕ ಎಲ್ಲಾ ಇಲಾಖೆಗಳು ಶ್ರಮಿಸುತ್ತಿದ್ದರೂ, ಇನ್ನೂ ಮಕ್ಕಳ ಮೇಲೆ ದೌರ್ಜನ್ಯ, ಮಕ್ಕಳ ಹಕ್ಕುಗಳ ಉಲ್ಲಂಘನೆಯಾಗುತ್ತಿವೆ. ಮುಖ್ಯವಾಗಿ ಹೆಣ್ಣು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯಗಳು ನಡೆಯುತ್ತಿರುವುದರಿಂದ ಇವುಗಳನ್ನು ತಡೆಗಟ್ಟಲು ಮತ್ತು ಸಂತ್ರಸ್ತರಿಗೆ ತುರ್ತಾಗಿ ನೆರವು ನೀಡುವಲ್ಲಿ ಎಲ್ಲಾ ಸಹಭಾಗಿ ಇಲಾಖೆಗಳು ಒಟ್ಟಾಗಿ ಕಾರ್ಯನಿರ್ವಹಿಸುವುದು ಅವಶ್ಯಕವಾಗಿದೆ ಎಂದು ತಿಳಿಸಿದರು. ಎನ್‌ಫೋಲ್ಡ್ ಸಂಸ್ಥೆಯ ಮುಖ್ಯಸ್ಥರಾದ ಖುಷಿ ಕುಶಲಪ್ಪ ಮತ್ತು ಪೊಲೀಸ್ ತರಬೇತಿ ಸಂಪನ್ಮೂಲ ವ್ಯಕ್ತಿ ರೋಹಿತ್ ಕಾರ್ಯಕ್ರಮದ ಧ್ಯೇಯೋದ್ದೇಶ ತಿಳಿಸಿಕೊಟ್ಟರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಮಂಜುನಾಥ ನಿರೂಪಿಸಿದರು. ಈಶ್ವರ್ ರಾವ್ ಸ್ವಾಗತಿಸಿದರು. ಚನ್ನಬಸಪ್ಪ ವಂದಿಸಿದರು.

ಈ ಸಂದರ್ಭದಲ್ಲಿ ಉಪ ಪೊಲೀಸ್ ವರಿಷ್ಠಾಧಿಕಾರಿ ನವೀನ್‌ಕುಮಾರ್, ಉಪ ಪೊಲೀಸ್ ಅಧೀಕ್ಷಕ ಚಂದ್ರಕಾಂತ್ ನಂದಾರೆಡ್ಡಿ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮೀ ಮೈದೂರು, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಯಲ್ಲಾ ರಮೇಶ್‌ಬಾಬು ಸೇರಿದಂತೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ಮಕ್ಕಳ ಸಹಾಯವಾಣಿ ಸಿಬ್ಬಂದಿಗಳು, ಎನ್‌ಫೋಲ್ಡ್ ಸಂಸ್ಥೆಯ ಸಿಬ್ಬಂದಿಗಳು, ಸ್ವಯಂಸೇವಾ ಸಂಸ್ಥೆಗಳ ಮುಖ್ಯಸ್ಥರು ಹಾಗೂ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ 80ಕ್ಕೂ ಹೆಚ್ಚು ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಮಳಲೂರು ದಲಿತ ಕುಟುಂಬಗಳಿಗೆ ನಿವೇಶನ ನೀಡುವಂತೆ ಆಗ್ರಹಿಸಿ ಜಿಲ್ಲಾಡಳಿತಕ್ಕೆ ಮನವಿ

**ಚಿಕ್ಕಮಗಳೂರು:** ಮೂಡಿಗೆರೆ ವಿಧಾನಸಭಾ ಕ್ಷೇತ್ರದ ಅಂಬಳೆ ಹೋಬಳಿ ಮಳಲೂರು ಗ್ರಾಮದಲ್ಲಿರುವ 18 ಎಕರೆ ಗೋಮಾಳ ಜಮೀನಿನಲ್ಲಿ ನಿವೇಶನ ರಹಿತ ಪರಿಶಿಷ್ಟ ಕುಟುಂಬದವರಿಗೆ ನಿವೇಶನ ನೀಡುವಂತೆ ಆಗ್ರಹಿಸಿ ಇಂದು ಅಪರ ಜಿಲ್ಲಾಧಿಕಾರಿ ನಾರಾಯಣ ಕನಕರಡ್ಡಿ ಅವರಿಗೆ ಮನವಿ ಸಲ್ಲಿಸಿದರು.

ಭೀಮ್ ಆರ್ಮಿ, ಯುವ ಬ್ರಿಗೇಡ್, ಅಂಬೇಡ್ಕರ್ ಯುವಕ ಸಂಘ ಮಳಲೂರು ಗ್ರಾಮಸ್ಥರೊಂದಿಗೆ ನಗರಕ್ಕಾಗಮಿಸಿ ಅಪರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಮಳಲೂರು ಗ್ರಾಮದ ಸರ್ವೆ ನಂ.78, 79 ರಲ್ಲಿ 9.24 ಹಾಗೂ 8.35 ಎಕರೆ ಗೋಮಾಳ ಜಮೀನು ಇದ್ದು, ಇದನ್ನು ನಿವೇಶನ ರಹಿತರಿಗೆ ನೀಡುವಂತೆ ಮನವಿಯಲ್ಲಿ ಒತ್ತಾಯಿಸಿರುವ ಪರಿಶಿಷ್ಟ ಜನಾಂಗದ 150 ಕುಟುಂಬದವರು ನೂರಾರು ವರ್ಷಗಳಿಂದ ವಾಸಿಸುತ್ತಿದ್ದು, ಒಂದು ಕುಟುಂಬದಲ್ಲಿ 8-10 ಜನರಿದ್ದು, ಮನೆಗಳಿಲ್ಲದೆ ತುಂಬ ತೊಂದರೆಯಾಗಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.



ಭೀಮ್ ಆರ್ಮಿ ಮುಖಂಡ ಹೊನ್ನೇಶ್ ಮಾತನಾಡಿ, ನಿವೇಶನ ನೀಡುವಂತೆ ಒತ್ತಾಯಿಸಿ ಪರಿಶಿಷ್ಟ ಜಾತಿ ಜನಾಂಗದವರು 2018 ರಲ್ಲೇ ಗ್ರಾಮ ಪಂಚಾಯಿತಿಗೆ ಮಳಲೂರು ಗ್ರಾಮಸ್ಥರು ಮನವಿ ನೀಡಿದ್ದರೂ ಯಾವುದೇ ಪ್ರಯೋಜನ ಆಗಿಲ್ಲ ಎಂದು ಆರೋಪಿಸಿದರು.

ದೌರ್ಜನ್ಯ ತಡೆ ಸಮಿತಿ ಸದಸ್ಯ ಹುಣಸೇಮಕ್ಕಿ ಲಕ್ಷ್ಮಣ ಮಾತನಾಡಿ, ಸಂವಿಧಾನದ ಆಶಯದಂತೆ ಪ್ರಾಥಮಿಕ ಸೌಲಭ್ಯಗಳಾದ ನಿವೇಶನ, ಮನೆ, ಶಿಕ್ಷಣ, ಆರೋಗ್ಯ ನೀಡಬೇಕೆಂದು ಡಾ. ಬಿ.ಆರ್ ಅಂಬೇಡ್ಕರ್ ಹೇಳಿದ್ದರೂ ಕಾರ್ಯರೂಪಕ್ಕೆ ತರುವಲ್ಲಿ ವಿಳಂಭವಾಗುತ್ತಿದೆ ಎಂದು ದೂರಿದರು.

ಸ್ವತಂತ್ರ ಬಂದು 79 ವರ್ಷಗಳಾದರೂ ದಲಿತ, ಹಿಂದುಳಿದ, ಅಲ್ಪಸಂಖ್ಯಾತ ಬಡವರಿಗೆ ಮೂಲಭೂತ ಹಕ್ಕುಗಳನ್ನು ಪಡೆಯುವಲ್ಲಿ ವಿಫಲರಾಗಿದ್ದು, ಮಳಲೂರು ಗ್ರಾಮದಲ್ಲಿ 150 ಪರಿಶಿಷ್ಟ ಜನಾಂಗದ ಕುಟುಂಬಗಳು ವಾಸಿಸುತ್ತಿದ್ದು, ಬಲಾಡ್ಯರು ಒತ್ತುವರಿ ಮಾಡಿರುವ ಭೂಮಿಯನ್ನು ಜಿಲ್ಲಾಡಳಿತ ಹಾಗೂ ಅರಣ್ಯ ಇಲಾಖೆ ತೆರವು ಮಾಡಿ ನಿವೇಶನ ರಹಿತರಿಗೆ ನಿವೇಶನ ಮಂಜೂರು ಮಾಡಬೇಕೆಂದು ಆಗ್ರಹಿಸಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**